# ಕರ್ನಾಟಕ ರಾಜ್ಯಕ್ಕೆ ಕೇವಲ ಒಂದು ವರ್ಷದಲ್ಲೇ ಶೇ.76ರಷ್ಟು ಹೆಚ್ಚು ನೆರವು ಸಿಗುತ್ತಿದೆ: ನಿರ್ಮಲಾ ಸೀತಾರಾಮನ್

• ಉದಯವಾಹಿನಿ, ಬೆಂಗಳೂರು

ಕೇಂದ್ರ ಸರ್ಕಾರ ಯಾವುದೇ ಅನುದಾನ ನೀಡುತ್ತಿಲ್ಲ ಎಂದು ಕರ್ನಾಟಕ ಸರ್ಕಾರ ನಿರಂತರವಾಗಿ ಹೇಳಿಕೊಂಡು ಬರುತ್ತಿದೆ. ಆದರೆ ಯುಪಿಎ ಸರ್ಕಾರದ 10 ವರ್ಷಗಳ ಅವಧಿಯಲ್ಲಿ ರಾಜ್ಯಕ್ಕೆ ಸಿಗುತ್ತಿದ್ದ ಅನುದಾನಕ್ಕಿಂತ ಕೇವಲ ಒಂದು ವರ್ಷದಲ್ಲೇ ಕರ್ನಾಟಕಕ್ಕೆ ಶೇ.76ಕ್ಕೂ ಹೆಚ್ಚು ಅನುದಾನ ಕರ್ನಾಟಕಕ್ಕೆ ದೊರೆಯುತ್ತಿದೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಬಿಜೆಪಿ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಹಣಕಾಸು ಆಯೋಗದ ಅಂಕಿಅಂಶಗಳನ್ನೇ ಇಂದು ನಿಮ್ಮ ಮುಂದಿಡುತ್ತಿದ್ದೇನೆ, 2014ರಿಂದ 2026ರ ನಡುವೆ 4 ಲಕ್ಷ ಕೋಟಿ ರೂಪಾಯಿ ತೆರಿಗೆ ಕರ್ನಾಟಕಕ್ಕೆ ನೀಡಲಾಗಿದೆ. ಅದು 2014ಕ್ಕಿಂತ ಹಿಂದೆ ಯುಪಿಎ ಅವಧಿಯಲ್ಲಿ ನೀಡಿದ್ದಕ್ಕಿಂತ 5 ಪಟ್ಟು ಹೆಚ್ಚಾಗಿದೆ ಎಂದರು. ಕರ್ನಾಟಕಕ್ಕೆ ಸಿಕ್ಕಿದ್ದು 82 ಸಾವಿರ ವರ್ಸಸ್ 4 ಲಕ್ಷ ಕೋಟಿ ರೂಪಾಯಿ, ಅನುದಾನ ಮತ್ತು ಸಹಾಯ 2.71 ಲಕ್ಷ ಕೋಟಿ 2014ರಿಂದ 2026ರ ಮಧ್ಯೆ. ಆದರೆ ಯುಪಿಎಯ 10 ವರ್ಷದ ಅವಧಿಯಲ್ಲಿ 60 ಸಾವಿರ ಕೋಟಿ ರೂಪಾಯಿ ಎಂದರು.

ಪ್ರಧಾನಿ ಮೋದಿಯವರು, ರಾಜ್ಯಗಳು ಅಭಿವೃದ್ಧಿಯಾಗದೆ ದೇಶ ಅಭಿವೃದ್ಧಿ ಹೊಂದುವುದಿಲ್ಲ ಎಂಬ ಪರಿಕಲ್ಪನೆ ಹೊಂದಿರುವವರು, ಹೀಗಾಗಿ ರಾಜ್ಯಗಳಿಗೆ ಬಡ್ಡಿರಹಿತ ಸಾಲ ನೀಡುತ್ತಿದ್ದೇವೆ. 18 ಸಾವಿರ ಕೋಟಿಗಿಂತಲೂ ಅಧಿಕ ಹಣವನ್ನು ಹಣಕಾಸು ಆಯೋಗದ ಶಿಫಾರಸು ಇಲ್ಲದಿದ್ದರೂ ರಾಜ್ಯಗಳಿಗೆ ನೀಡಿದ್ದೇವೆ, ಅದು ಕರ್ನಾಟಕಕ್ಕೂ ಸಿಕ್ಕಿದೆ ಎಂದರು. ಲೋಕಸಭೆ ವಿಪಕ್ಷ ನಾಯಕ ಹಾಗೂ ಕಾಂಗ್ರೆಸ್ ನಾಯಕರು ದೇಶದ ಆರ್ಥಿಕತೆಯನ್ನು ಮೇಲಕ್ಕೆತ್ತಲು ಜನರು ನೀಡಿರುವ ಕೊಡುಗೆಯನ್ನು ಕಡೆಗಣಿಸುತ್ತಿದ್ದು, ಅನುಮಾನಗಳನ್ನು ಸೃಷ್ಟಿಸುವ ಮೂಲಕ ನಾಗರಿಕರನ್ನು ದಾರಿತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು.


ಉದಯವಾಹಿನಿ ಚಿತ್ರ

> ಪ್ರಸ್ತುತ ಹಣಕಾಸು ವರ್ಷದಲ್ಲಿ 63 ಸಾವಿರ ಕೋಟಿ ರೂಪಾಯಿ ಆದಾಯ ಹಂಚಿಕೆ ಕರ್ನಾಟಕಕ್ಕೆ ಆಗಿದೆ ಎಂದು ನಿರ್ಮಲಾ ಸೀತಾರಾಮನ್ ಅಂಕಿಅಂಶ ನೀಡಿದರು. 10 ವರ್ಷಗಳಲ್ಲಿ ಯುಪಿಎ ಸರ್ಕಾರ ನೀಡಿದ್ದನ್ನು ನಾವು ಈಗ ಶೇಕಡಾ 76ರಷ್ಟು ಹೆಚ್ಚು ನಾವು ಕರ್ನಾಟಕಕ್ಕೆ ನೀಡುತ್ತಿದ್ದೇವೆ .
> ನಿರ್ಮಲಾ ಸೀತಾರಾಮನ್



## ಬೆಂಗಳೂರು ಪೊಲೀಸರು ರಾಜಸ್ಥಾನದಲ್ಲಿ ಟ್ರ್ಯಾಪ್ ಆರೋಪಿ ಬಳಿ 2 ಲಕ್ಷಕ್ಕೆ ಬೇಡಿಕೆ ಇಟ್ಟು ಲಾಕ್

• ಉದಯವಾಹಿನಿ,ಬೆಂಗಳೂರು

ವರದಕ್ಷಿಣೆ ಪ್ರಕರಣದಲ್ಲಿ ಆರೋಪಿ ಬಂಧನಕ್ಕೆ ತೆರಳಿದ್ದ ಬೆಂಗಳೂರಿನ ಹೆಚ್‌ಎಎಲ್ ಪೊಲೀಸರಿಗೆ ಜೈಪುರದಲ್ಲಿ ಟ್ರ್ಯಾಪ್ ಆಗಿರುವ ಘಟನೆ ನಡೆದಿದೆ. ಆರೋಪಿಯ ಬಂಧನಕ್ಕೆ ತೆರಳಿದ್ದ ಪೊಲೀಸರು, ಆತನ ಬಳಿ ಹಣಕ್ಕೆ ಬೇಡಿಕೆಯಿಟ್ಟು ರಾಜಸ್ಥಾನದ ಎಸಿಬಿ ಅಧಿಕಾರಿಗಳಿಗೆ ಲಾಕ್ ಆಗಿದ್ದಾರೆ. ಪಿಎಸ್ಐ ಅನಿತಾ, ಹೆಡ್ ಕಾನ್ಸ್‌ಟೇಬಲ್ ಉಳುವಪ್ಪ, ಕಾನ್ಸ್‌ಟೇಬಲ್ ಯತೀಶ್ ಟ್ರ್ಯಾಪ್ ಆದ ಪೊಲೀಸರು. ವರದಕ್ಷಿಣೆ ಪ್ರಕರಣದ ತನಿಖೆಗೆ ಗೆತ್ತಿಕೊಂಡಿದ್ದ ಪೊಲೀಸರು ಆರೋಪಿ ಬಂಧನಕ್ಕೆ ರಾಜಸ್ಥಾನದ ಜೈಪುರಕ್ಕೆ ತೆರಳಿದ್ದರು.

## ಆನಂದ್ ರಾವ್ ಫ್ಲೈಓವರ್ ಕೆಳಭಾಗದಲ್ಲಿ ಅಕ್ರಮ ಚಟುವಟಿಕೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ನಗರದ ಹೃದಯಭಾಗದಲ್ಲಿರುವ ಆನಂದ್ ರಾವ್ ಫ್ಲೈಓವರ್ ಕೆಳಭಾಗ ಡ್ರಗ್ಸ್ ಸೇವನೆ, ಮೊಬೈಲ್ ಕಳ್ಳತನ ಮತ್ತು ಅಕ್ರಮ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿರುವ ಆರೋಪಗಳು ಕೇಳಿಬಂದಿವೆ. ಈ ಬೆಳವಣಿಗೆ ಸಾರ್ವಜನಿಕರಲ್ಲಿ ಆತಂಕಕ್ಕೆ ಕಾರಣವಾಗಿದೆ.

ಸ್ಥಳೀಯ ಚಾಲಕರ ಮಾಹಿತಿ ಪ್ರಕಾರ, ಫ್ಲೈಓವರ್ ಪಕ್ಕದಲ್ಲಿ ವಾಹನಗಳನ್ನು ನಿಲ್ಲಿಸುತ್ತಿದ್ದವರನ್ನು ಗುರಿಯಾಗಿಸಿಕೊಂಡು ಕೆಲ ದುಷ್ಕರ್ಮಿಗಳು ಮೊಬೈಲ್ ಕಳ್ಳತನ ನಡೆಸುತ್ತಿದ್ದರು ಎನ್ನಲಾಗಿದೆ. ಎರಡು ದಿನಗಳ ಹಿಂದೆ ಚಾಲಕರೊಬ್ಬರ ಐಫೋನ್ ಕಳುವಾದ ಘಟನೆ ಬಳಿಕ, ಕೆಲ ಚಾಲಕರು ಸ್ವತಃ ಪರಿಶೀಲನೆ ನಡೆಸಲು ಮುಂದಾಗಿದ್ದರು.

ಈ ವೇಳೆ ಫ್ಲೈಓವರ್ ಒಳಭಾಗದಲ್ಲಿ ಸಿರಿಂಜ್, ವೈಟ್ನರ್ ಸೇರಿದಂತೆ ನಶೆ ಪದಾರ್ಥಗಳ ಬಳಕೆಯ ಕುರುಹುಗಳು ಪತ್ತೆಯಾಗಿವೆ ಎಂದು ಆರೋಪಿಸಲಾಗಿದೆ. ಅಲ್ಲದೆ ಕೆಲ ವ್ಯಕ್ತಿಗಳು ಫ್ಲೈಓವರ್ ಒಳಭಾಗವನ್ನು ಆಶ್ರಯ ತಾಣವಾಗಿ ಬಳಸುತ್ತಿರುವುದು ಕಂಡುಬಂದಿದೆ ಎನ್ನಲಾಗಿದೆ. ಪರಿಶೀಲನೆ ನಡೆಸುತ್ತಿದ್ದ ಚಾಲಕರ ಮೇಲೆ ನಾಲ್ವರು ವ್ಯಕ್ತಿಗಳ ಗುಂಪು ಹಲ್ಲೆ ನಡೆಸಿದ್ದು, ಚಾಕುವಿನಿಂದ ದಾಳಿ ಮಾಡಲು ಯತ್ನಿಸಿದ್ದಾರೆ ಎಂದು ತಿಳಿದುಬಂದಿದೆ. ಘಟನೆ ಬಳಿಕ ಕೆಲ ಆರೋಪಿಗಳು ಫ್ಲೈಓವರ್ ಮೇಲ್ಭಾಗದಿಂದ ಜಿಗಿದು ಪರಾರಿಯಾಗಲು ಯತ್ನಿಸಿದ್ದಾರೆ ಎನ್ನಲಾಗಿದೆ. ಮಾಹಿತಿ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಉಪ್ಪಾರಪೇಟೆ ಪೊಲೀಸರು ಕಾರ್ಯಾಚರಣೆ ನಡೆಸಿ ಓರ್ವ ಶಂಕಿತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚಿನ ತನಿಖೆ ಮುಂದುವರಿದಿದೆ.

### ಕಾನೂನು ಹೋರಾಟ

ಟೌನ್‌ಶಿಪ್ ನಿರ್ಮಾಣಕ್ಕೆ ಸಂಬಂಧಿಸಿದಂತೆ ನಾನು ಕಾನೂನು ಹೋರಾಟ ಮಾಡುತ್ತೇನೆ. ಈ ಟೌನ್‌ಶಿಪ್ ನಿರ್ಮಾಣದ ಉದ್ದೇಶ, ಟೌನ್ ಶಿಪ್ ನಿರ್ಮಾಣ ಮಾಡಲು ಇರಬೇಕಾದ ಷರತ್ತುಗಳು ಎಲ್ಲವೂ ನನಗೆ ಗೊತ್ತಿದೆ. ಕಾನೂನು ವ್ಯಾಪ್ತಿಯಲ್ಲಿ ಇದನ್ನು ಪ್ರಶ್ನಿಸುತ್ತೇನೆ ಎಂದರು.

### ಟೌನ್‌ಶಿಪ್ ನಿರ್ಮಾಣ ಮಾಡುವುದು ಸರಿಯಲ್ಲ

ನಾನು ಟೌನ್‌ಶಿಪ್ ನಿರ್ಮಾಣ ಮಾಡಲು ಹೊರಟಾಗ ಇದೇ ಕಾಂಗ್ರೆಸ್ ಈ ಯೋಜನೆಗಳು ಹಣ ಮಾಡುವ ಯೋಜನೆಗಳು ಎಂದು ಟೀಕಿಸಿ, ಎಚ್.ಕೆ. ಪಾಟೀಲ್ ನೇತೃತ್ವದಲ್ಲಿ ಸತ್ಯಶೋಧನಾ ಸಮಿತಿ ರಚಿಸಿತ್ತು. ಆ ವರದಿಯೂ ಇದೆ. ಈಗ ಮಾತ್ರ ಇವರ ಲಾಭಕ್ಕೆ ಎಲ್ಲವನ್ನು ಮೂಲೆಗೆ ತಳ್ಳಿ ಟೌನ್‌ಶಿಪ್ ನಿರ್ಮಾಣ ಮಾಡುವುದು ಸರಿಯಲ್ಲ, ಇದಕ್ಕೆ ನಾವು ಅವಕಾಶ ಕೊಡುವುದಿಲ್ಲ ಎಂದು ಗುಡುಗಿದರು.

1 ಬಿಡದಿ ಟೌನ್‌ಶಿಪ್ ಕುಮಾರಸ್ವಾಮಿಯವರ ಕೂಸು

2 ಬಿಡದಿ ಟೌನ್‌ಶಿಪ್ ವಿರುದ್ಧ ನಮ್ಮ ಹೋರಾಟ ಮುಂದುವರೆಯುತ್ತದೆ

3 ಹಠಕ್ಕೆ ಬಿದ್ದು ಅಲ್ಲಿ ಟೌನ್‌ಶಿಪ್ ಮಾಡುವುದು ಒಳ್ಳೆಯದಲ್ಲ

**ರೈತರ ಹೋರಾಟಕ್ಕೆ ಬಿಜೆಪಿ-ಜೆಡಿಎಸ್ ಬೆಂಬಲ**


ಉದಯವಾಹಿನಿ ಚಿತ್ರ

**ಕಿಚ್ಚು ಹೆಚ್ಚಿಸಿದ ಬಿಡದಿ ಟೌನ್‌ಶಿಪ್**



# ಬಿಡದಿ ಟೌನ್‌ಶಿಪ್ ಜಟಾಪಟಿ

• ಉದಯವಾಹಿನಿ,ಬೆಂಗಳೂರು

### ರೈತರಿಗೆ ನ್ಯಾಯ ಕೊಡಿಸುವ ಕೆಲಸ

ಬಿಡದಿಯ ಟೌನ್‌ಶಿಪ್ ರಾಜ್ಯದ ಹಿತಾಸಕ್ತಿಯ ಯೋಜನೆಯಲ್ಲ, ಭೂಗಳ್ಳರು ಹಾಗೂ ರಿಯಲ್ ಎಸ್ಟೇಟ್ ಮಾಫಿಯಾಗೆ ನೆರವಾಗುವ ಯೋಜನೆ ಎಂದು ದೂರಿರುವ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು, ಗುಜರಾತ್‌ನಲ್ಲಿ ಪ್ರಧಾನಿ ಮೋದಿಯವರು ಬಂಜರು ಭೂಮಿಯಲ್ಲಿ ಟೌನ್‌ಶಿಪ್ ಮಾಡಿದ್ದಾರೆ. ಅದಕ್ಕೂ ಇದಕ್ಕೂ ಹೋಲಿಕೆ ಮಾಡುವುದು ಸರಿಯಲ್ಲ ಎಂದಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿರುದ್ಧ ನಮ್ಮ ಹೋರಾಟ ಮುಂದುವರೆಯುತ್ತದೆ. ಕಾನೂನಿನ ವ್ಯಾಪ್ತಿಯಲ್ಲಿ ಏನೆಲ್ಲಾ ಹೋರಾಟಗಳನ್ನು ನಡೆಸಬಹುದೋ ಅವುಗಳನ್ನು ನಡೆಸಿ ರೈತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡುತ್ತೇನೆ ಎಂದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್‌ರವರು ಬಿಡದಿ ಟೌನ್‌ಶಿಪ್‌ನ್ನು ಪ್ರಧಾನಿಗಳು ಮೆಚ್ಚಿದ್ದಾರೆ ಎಂದು ಹೇಳಿರುವುದಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಪ್ರಧಾನಿ ಮೋದಿಯವರು ಗುಜರಾತ್‌ನಲ್ಲಿ ಒಣ ಭೂಮಿ ಹಾಗೂ ಬಂಜರು ಭೂಮಿಯಲ್ಲಿ ಟೌನ್‌ಶಿಪ್‌ಗಳನ್ನು ನಿರ್ಮಾಣ ಮಾಡಿದ್ದಾರೆ. ಆದರೆ ಬಿಡದಿಯಲ್ಲಿ ಟೌನ್‌ಶಿಪ್ ನಿರ್ಮಾಣ ಮಾಡುತ್ತಿರುವುದು ಫಲವತ್ತಾದ ಭೂಮಿಯಲ್ಲಿ. ಈ ಬಗ್ಗೆ ಪ್ರಧಾನಿ ಮೋದಿಯವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಹಿತಿ ನೀಡಿದ್ದಾರೋ ಗೊತ್ತಿಲ್ಲ. ಇವರು ಏನು ಹೇಳಿದ್ದಾರೋ, ಅವರು ಏನು ಹೇಳಿದ್ದಾರೋ ಯಾರಿಗೆ ಗೊತ್ತು ಎಂದರು.ಬಿಡದಿ ಟೌನ್‌ಶಿಪ್ ಕುಮಾರಸ್ವಾಮಿಯವರ ಕೂಸು, ಅದನ್ನು ನಾನು ಮುಂದುವರೆಸುತ್ತಿದ್ದೇನೆ ಎಂದು ಶಿವಕುಮಾರ್ ಹೇಳುತ್ತಿದ್ದಾರೆ. ನಾನು ಆ ಯೋಜನೆ ರೂಪಿಸಿದ್ದು 2006 ರಲ್ಲಿ. ಈಗ 2026. 20 ವರ್ಷದಲ್ಲಿ ಏನೆಲ್ಲಾ ಆಗಿದ್ದೆ ಎಂಬುದನ್ನು ಗಮನ ಹರಿಸಬೇಕು. ಹಣ ಮಾಡುವ ಉದ್ದೇಶದಿಂದ ರೈತರನ್ನು ಒಕ್ಕಲೆಬ್ಬಿಸುವುದು ಸರಿಯಲ್ಲ. ಬಿಡದಿ ಟೌನ್‌ಶಿಪ್ ಜಾಗ ಫಲವತ್ತಾದ ಭೂಮಿ. ಅಲ್ಲಿ ತೆಂಗು, ಅಡಿಕೆ, ರೇಷ್ಮೆ ಕೃಷಿ ಇದೆ. ಜತೆಗೆ ಹೈನುಗಾರಿಕೆಯೂ ನಡೆದಿದೆ. ಹೀಗಿರುವಾಗ ಹಠಕ್ಕೆ ಬಿದ್ದು ಅಲ್ಲಿ ಟೌನ್‌ಶಿಪ್ ಮಾಡುವುದು ಒಳ್ಳೆಯದಲ್ಲ ಎಂದರು. ಈ ಹಿಂದೆ ನೈಸ್ ಯೋಜನೆ ಮಾಡಿದಾಗ ಅರ್ಕಾವತಿ ಬಡಾವಣೆ ಮಾಡಿದಾಗ ಏನೆಲ್ಲಾ ಆಗಿದೆ ಎಂಬುದು ಎಲ್ಲರಿಗೂ ಗೊತ್ತಿದೆ. ಬಿಡದಿಯ ಟೌನ್‌ಶಿಪ್ ವಿಚಾರದಲ್ಲಿ ಸದ್ಯದಲ್ಲೇ ದಾಖಲೆಯ ಸಮೇತ ಎಲ್ಲವನ್ನು ಜನರ ಮುಂದಿಡುತ್ತೇನೆ. ಕಾನೂನು ಹೋರಾಟವನ್ನು ಮಾಡುತ್ತೇನೆ ಎಂದು

### ಶಾಸಕ ಬಾಲಕೃಷ್ಣ ಸವಾಲು

ಬಿಡದಿ ಟೌನ್‌ಶಿಪ್ ವಿಚಾರದಲ್ಲಿ ರಾಜಕೀಯ ಜಟಾಪಟಿ ಮುಂದುವರಿದಿದೆ. ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿಗೆ ಶಾಸಕ ಬಾಲಕೃಷ್ಣ ಸವಾಲು ಹಾಕಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ಯೋಜನೆಯನ್ನ ನಾನು ರೈತರ ಪರವಾಗಿ ಕೈಬಿಡಲು ಒಪ್ಪಿದ್ದೆ ಅಂತಪ್ರಮಾಣ ಮಾಡಲಿ, ಕುಮಾರಸ್ವಾಮಿ ಚಾಮುಂಡೇಶ್ವರಿ ಮೇಲೆ ಪ್ರಮಾಣ ಮಾಡಲಿ ಅಂತಾ ಸವಾಲು ಹಾಕಿದ್ದಾರೆ. 2018 ರಲ್ಲಿ ಬಿಡದಿ ಟೌನ್‌ಶಿಪ್ ಕೈಬಿಡಲು ಒಪ್ಪಿದ್ದ ಬಗ್ಗೆ ಪ್ರಮಾಣ ಮಾಡಲಿ. ನಾವು ಅಜ್ಜಯ್ಯ ಅವರ ಮೇಲೆ ಪ್ರಮಾಣ ಮಾಡ್ತೀವಿ ಅಂದ್ರು, ಕೇಂದ್ರ ಸಚಿವರಾದ ಮೇಲೆ ವಿರೋಧ ಮಾಡುತ್ತಿದ್ದಾರೆ. ಸಮಸ್ಯೆ ಹುಟ್ಟು ಹಾಕಿದವರೇ ಹೋರಾಟ ಮಾಡುತ್ತಿದ್ದಾರೆ.

ಈ ರೀತಿ ಗೋಸುಂಬೆ ರಾಜಕಾರಣ ಮಾಡೋದು ಬೇಡ, ಯಾವುದಾದ್ರೂ ಒಂದು ನಿಲುವು ಇರಬೇಕು ಅಂತಾ ಕಿಡಿಕಾರಿದ್ದಾರೆ. ನಾವು ಅವರು ಒಂದೇ ಜಾತಿ, ಆದರೆ ನಮಗೆ ಕ್ರೆಡಿಟ್ ಸಿಗುತ್ತೆ ಅಂತ ಪ್ರಶ್ನೆ ಮಾಡುತ್ತಿದ್ದಾರೆ. ಡಿ.ಕೆ ಶಿವಕುಮಾರ್‌ಗೆ ಇನ್ನೂ ವಯಸ್ಸಿದೆ. ರಾಜ್ಯದಲ್ಲಿ ರಾಜಕೀಯ ಮಾಡಬಾರದು ಅಂತ ಡಿಕೆಶಿಗೆ ಮಸಿ ಬಳಿಯುತ್ತಿದ್ದಾರೆ. ಮೆಜಾರಿಟಿ ಆಫ್ ಜನರು ಭೂಮಿ ಕೊಡಲು ಒಪ್ಪಿದ್ದಾರೆ.

ನೊಟಿಫಿಕೆಶನ್ ಆಗಿದೆ, ಹಿಂದೆ ಪಡೆಯುವ ಪ್ರಶ್ನೆ ಇಲ್ಲ. ಇವತ್ತಲ್ಲ ನಾಳೆ ಭೂಮಿ ಡೆವಲಪ್ಮೆಂಟ್ ಆಗಲೇಬೇಕು. ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ಟೌನ್ ಶಿಪ್ ಆಗಬಾರದು ಎಂದು ವಿರೋಧ ಮಾಡುತ್ತಿದ್ದಾರೆ ಅಂತಾ ಆಕ್ರೋಶ ಹೊರಹಾಕಿದ್ದಾರೆ.


ಉದಯವಾಹಿನಿ ಚಿತ್ರ

# ಗ್ಯಾರಂಟಿಗಳಿಗೆ ಹೊಸ ಅರ್ಜಿ: ಫಲಾನುಭವಿಗಳ ಕತ್ತರಿಗೆ ಸಂಚು

• ಉದಯವಾಹಿನಿ, ಬೆಂಗಳೂರು

ಗ್ಯಾರಂಟಿಗಳಿಗೆ ಹೊಸ ಅರ್ಜಿ ಸಲ್ಲಿಕೆಯ ಹಿಂದೆ ಇರುವುದು ಅರ್ಹತೆಯ ಅಳತೆ ಗೋಲು ಅಲ್ಲ. ಫಲಾನುಭವಿಗಳಿಗೆ ಕತ್ತರಿ ಹಾಕುವ ಒಳ ಸಂಚು ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ್ ಟೀಕಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಅವರು, ಗೃಹಲಕ್ಷ್ಮಿಗೆ ಕಷ್ಟ, ಗೃಹಜ್ಯೋತಿಗೆ ಕತ್ತಲು. ಅನರ್ಹರ ನೆಪದಲ್ಲಿ ಬಡವರ ಹಕ್ಕು ಕಬಳಿಸಲು ಬಂದಿದೆ ಹೊಸ ಅರ್ಜಿ ಎಂಬ ಹೊಸ ಕತ್ತರಿ ಎಂದು ವ್ಯಂಗ್ಯವಾಡಿದ್ದಾರೆ. ಸತ್ತವರ ಹೆಸರನ್ನು ಫಲಾನುಭವಿಗಳ ಪಟ್ಟಿಯಿಂದ ತೆಗೆಯಲು ಇಡೀ ಗ್ಯಾರಂಟಿ ಯೋಜನೆಗೆ ಹೊಸ ಅರ್ಜಿ ಸಲ್ಲಿಸಬೇಕೆ ಎಂದು ಪ್ರಶ್ನಿಸಿರುವ ಅವರು, ಇದು ಯಾವ ಸೀಮೆಯ ತೊಘಲಕ್ ದರ್ಬಾರ್ ಸ್ವಾಮಿ ಎಂದು ಹರಿಹಾಯ್ದಿದ್ದಾರೆ. ಅನರ್ಹರನ್ನು ತಡೆಯುವ ನೆಪದಲ್ಲಿ ಈಗಾಗಲೇ ಸೌಲಭ್ಯ ಪಡೆಯುತ್ತಿರುವ ಲಕ್ಷಾಂತರ ಸ್ವಾಭಿಮಾನಿ ತಾಯಂದಿರುವ ಮತ್ತು ಜನಸಾಮಾನ್ಯರನ್ನು ಮತ್ತೆ ಕಚೇರಿಗಳ ಮುಂದೆ, ಸೈಬರ್ ಸೆಂಟರ್‌ಗಳ ಮುಂದೆ ಸಾಲಿನಲ್ಲಿ ನಿಲ್ಲಿಸಲು ನಿಮಗೆ ನಾಚಿಕೆಯಾಗುವುದಿಲ್ಲವೇ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಕಿಡಿಕಾರಿದ್ದಾರೆ. ಬಡವರ, ಶೋಷಿತರ ಹಕ್ಕಿನ ದುಡ್ಡಿಗೆ ಕತ್ತರಿ ಹಾಕಲು ಹೊರಟಿರುವ ನಿಮ್ಮ ಜನ ವಿರೋಧಿ ನೀತಿಯನ್ನು ಸ್ವಾಭಿಮಾನಿ ಕನ್ನಡಿಗರು ಸಹಿಸುವುದಿಲ್ಲ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಸಾಲಿನಲ್ಲಿ ನಿಲ್ಲಿಸಿ ಕಾಟ ಕೊಡುವುದನ್ನು ತಕ್ಷಣ ನಿಲ್ಲಿಸಿ. ಬೊಕ್ಕಸದ ದುಡ್ಡನ್ನು ಲೂಟಿ ಹೊಡೆಯುವುದನ್ನು ಬಿಟ್ಟು ಜನರಿಗೆ ಕೊಟ್ಟ ಮಾತಿನಂತೆ ಗ್ಯಾರಂಟಿ ಸೌಲಭ್ಯಗಳನ್ನು ತಲುಪಿಸಿ.

ಇಲ್ಲದಿದ್ದರೆ ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷವನ್ನು ಗಂಟು ಮೂಟೆ ಕಟ್ಟಿಸಿ ಶಾಶ್ವತವಾಗಿ ಮನೆಗೆ ಕಳುಹಿಸುವುದು ಗ್ಯಾರಂಟಿ ಎಂದು ಅಶೋಕ್ ಹೇಳಿದ್ದಾರೆ.


ಉದಯವಾಹಿನಿ ಚಿತ್ರ

> ನಿಮ್ಮ ಸರ್ಕಾರದ ಕಮೀಷನ್ ದಂಧೆ ಹಾಗೂ ದುರಾಡಳಿತದಿಂದ ರಾಜ್ಯದ ಬೊಕ್ಕಸ ಸಂಪೂರ್ಣ ದಿವಾಳಿಯಾಗಿದೆ. ಗ್ಯಾರಂಟಿಗೆ ನೀಡಲು ಹಣವಿಲ್ಲದೆ ಈಗ ಜನರಿಗೆ ತೊಂದರೆ ಕೊಟ್ಟು ಫಲಾನುಭವಿಗಳ ಸಂಖ್ಯೆಯನ್ನು ಕಡಿತಗೊಳಿಸುವುದೇ ನಿಮ್ಮ ಅಸಲಿ ಅಜೆಂಡಾ ಎನ್ನುವ ಸತ್ಯವನ್ನು ಅರಿಯದಷ್ಟು ಅಮಾಯಕರಲ್ಲ ಸ್ವಾಭಿಮಾನಿ ಕನ್ನಡಿಗರು. ಮನೆಗೆ ತಲುಪಲಿದೆ ನಮೂನೆ ಎಂಬ ನಿಮ್ಮ ಹೊಸ ನಾಟಕ ಯಾರಿಗಾಗಿ ಎಂದು ಪ್ರಶ್ನಿಸಿದ್ದಾರೆ.
> -ಪ್ರತಿಪಕ್ಷ ನಾಯಕ ಆರ್. ಅಶೋಕ್

## ದಾಸವಾಣಿ ಕರ್ನಾಟಕದಿಂದ 33 ಕೃತಿಗಳ ಗಾಯನ ಸಮರ್ಪಣೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಶೇಷಾದ್ರಿಪುರದ ಪ್ಲಾಟ್ ಫಾರ್ಮ್ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಅಧಿಕ ಮಾಸದ ಕೊನೆಯ ದಿನದ ಅಂಗವಾಗಿ ದಾಸವಾಣಿ ಕರ್ನಾಟಕ ಸಂಸ್ಥೆಯ ವತಿಯಿಂದ ಶ್ರೀಮತಿ ಮಾನಸ ಕುಲಕರ್ಣಿ, ಶ್ರೀಮತಿ ಸುಮಲತಾ ಮಂಜುನಾಥ್ ಮತ್ತು ಶ್ರೀಮತಿ ಶ್ರೀಲಕ್ಷ್ಮಿ ಹರೀಶ್ ಇವರ ನೇತೃತ್ವದಲ್ಲಿ 33 ಮಹಿಳಾ ಮಣಿಯರಿಂದ 33 ಹರಿದಾಸರ ಕೀರ್ತನೆಗಳನ್ನು ಗಾಯನದ ಮೂಲಕ ರಾಯರ ಸನ್ನಿಧಿಯಲ್ಲಿ ಸಮರ್ಪಿಸಿ ಸೇವೆ ಸಲ್ಲಿಸಿದರು.

## ಪಲ್ಸ್ ಪೋಲಿಯೊ ಲಸಿಕೆ ಕಡ್ಡಾಯ, ಯಾವುದೇ ಮಗು ವಂಚಿತವಾಗಬಾರದು


• ಉದಯವಾಹಿನಿ, ದೇವನಹಳ್ಳಿ

ರಾಷ್ಟ್ರೀಯ ಪಲ್ಸ್ ಪೋಲಿಯೊ ಅಭಿಯಾನವು ಜೂನ್ 28ರಿಂದ ಜುಲೈ 1ರವರೆಗೆ ತಾಲ್ಲೂಕಿನಾದ್ಯಂತ ನಡೆಯಲಿದ್ದು, ಐದು ವರ್ಷದೊಳಗಿನ ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ತಹಶೀಲ್ದಾರ್ ಎಂ. ಅನಿಲ್ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಲ್ಲೂಕು ಆಡಳಿತಸೌಧದ ನ್ಯಾಯಾಲಯ ಸಭಾಂಗಣದಲ್ಲಿ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಈಚೆಗೆ ಆಯೋಜಿಸಿದ್ದ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.ಅಂಗನವಾಡಿ ಕೇಂದ್ರಗಳು, ಆಸ್ಪತ್ರೆಗಳು, ಸಾರ್ವಜನಿಕ ಸ್ಥಳಗಳು, ವಿಮಾನ ನಿಲ್ದಾಣ ಹಾಗೂ ಸುಂಕ ವಸೂಲಾತಿ ಕೇಂದ್ರಗಳಂತಹ ಜನಸಂದಣಿ ಪ್ರದೇಶಗಳಲ್ಲಿ ಲಸಿಕಾ ಬೂತ್ ತೆರೆಯಬೇಕು.

ಜೊತೆಗೆ ಮನೆಮನೆಗೆ ಭೇಟಿ ನೀಡಿ ಮಕ್ಕಳಿಗೆ ಪೋಲಿಯೊ ಹನಿ ಹಾಕುವ ಕಾರ್ಯವನ್ನು ಸಮರ್ಪಕವಾಗಿ ನಡೆಸಬೇಕು ಎಂದು ಹೇಳಿದರು. ತಾಲ್ಲೂಕಿನ ಐದು ವರ್ಷದ ಮಕ್ಕಳ ಸಂಪೂರ್ಣ ಮಾಹಿತಿ ಸಂಗ್ರಹಿಸಿ, ಯಾವುದೇ ಮಗು ಲಸಿಕೆಯಿಂದ ಹೊರಗುಳಿಯದಂತೆ ಎಚ್ಚರವಹಿಸಬೇಕು.

ವಲಸೆ ಕಾರ್ಮಿಕರ ಮಕ್ಕಳು ಹಾಗೂ ಇತರ ಪ್ರದೇಶಗಳಿಂದ ಬಂದಿರುವ ಮಕ್ಕಳನ್ನೂ ಗುರುತಿಸಿ ಲಸಿಕೆ ನೀಡಬೇಕು ಎಂದು ಸೂಚಿಸಿದರು. ತಾಲ್ಲೂಕಿನಲ್ಲಿ 0–5 ವರ್ಷದ 19,485 ಮಕ್ಕಳಿದ್ದು ಲಸಿಕಾ ಅಭಿಯಾನಕ್ಕಾಗಿ 109 ಬೂತ್ ತೆರೆಯಲಾಗಿದೆ. ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೊದಲ ಹಾಗೂ ಎರಡನೇ ಟರ್ಮಿನಲ್‌ಗಳಲ್ಲಿ ತಲಾ ಎರಡು ಬೂತ್ ಸ್ಥಾಪಿಸಲಾಗಿದೆ. ಸಾದಹಳ್ಳಿ ಹಾಗೂ ನಲ್ಲೂರು ಸಮೀಪದ ಟೋಲ್ ಪ್ಲಾಜಾಗಳಲ್ಲಿಯೂ ಬೂತ್ ತೆರೆಯಲಾಗಿದ್ದು, 520 ಸಿಬ್ಬಂದಿ ನಿಯೋಜಿಸಲಾಗಿದೆ. ಪ್ರತಿ ನಾಲ್ಕು ಬೂತ್‌ಗಳಿಗೆ ಒಬ್ಬ ಮೇಲ್ವಿಚಾರಕರನ್ನು ನೇಮಿಸಲಾಗಿದೆ’ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮುತಾಹಿರ್ ಹೇಳಿದರು. ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ದುರ್ಗಪ್ಪ, ಸಿಡಿಪಿಒ ಕವಿತಾ, ಪುರಸಭೆ ವ್ಯವಸ್ಥಾಪಕಿ ಸರಸ್ವತಮ್ಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ (ಪ್ರಭಾರ) ರೇಖಾ ಡಿ.ಎನ್., ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟೇಶ್ ಸಭೆಯಲ್ಲಿ ಭಾಗವಹಿಸಿದ್ದರು.


ಉದಯವಾಹಿನಿ ಚಿತ್ರ

## ಬನ್ನೇರುಘಟ್ಟ ಉದ್ಯಾನಕ್ಕೆ ಹೊಸ ಅತಿಥಿಯ ಎಂಟ್ರಿ ಮುದ್ದಾದ ಮರಿಗೆ ಜನ್ಮ ನೀಡಿದ ನೀರಾನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬನ್ನೇರುಘಟ್ಟ ಜೈವಿಕ ಉದ್ಯಾನವದಲ್ಲಿ ನೀರಾನೆಯೊಂದು ಮುದ್ದಾದ ಮರಿಗೆ ಜನ್ಮ ನೀಡಿರುವ ಹಿನ್ನೆಲೆ ಉದ್ಯಾನದಲ್ಲಿ ಸಂತಸ ಮನೆಮಾಡಿದೆ. ಉದ್ಯಾನದಲ್ಲಿದ್ದ 17 ವರ್ಷ ವಯಸ್ಸಿನ ದಶ್ಯ ಎಂಬ ಹೆಸರಿನ ಹಿಪ್ಪೋ ಹಾಗೂ ನಾಗ ಸೇರಿ ಹೊಸ ಮರಿಗೆ ಜನ್ಮ ನೀಡಿವೆ. ಸದ್ಯಕ್ಕೆ ತಾಯಿ ಮತ್ತು ಮರಿ ಎರಡೂ ಆರೋಗ್ಯವಾಗಿವೆ. ಮರಿಗೆ ಕೆಲ ದಿನಗಳ ಕಾಲ ಐಸೋಲೇಷನ್ ಮಾಡಿ ಆರೈಕೆ ಮಾಡಲಾಗುವುದು. ತಾಯಿ ದಶ್ಯ ಕೂಡ ಮರಿ ಹಿಪ್ಪೋವನ್ನ ಕಾಳಜಿಯಿಂದ ನೋಡಿಕೊಳ್ಳುತ್ತಿದೆ.

ವೈದ್ಯರು ಮತ್ತು ಉದ್ಯಾನದ ಸಿಬ್ಬಂದಿ ತಾಯಿ ಮತ್ತು ಮರಿಯ ಮೇಲೆ ವಿಶೇಷ ನಿಗಾ ಇಟ್ಟಿದ್ದಾರೆ. ಈ ಮರಿಯ ಜನನದ ಮೂಲಕ ಉದ್ಯಾನದಲ್ಲಿ ಹಿಪ್ಪೋಪೊಟಮಸ್‌ಗಳ ಸಂಖ್ಯೆ 5ಕ್ಕೆ ಏರಿಕೆಯಾಗಿದೆ. ಇತ್ತ ಪ್ರವಾಸಿಗರು ಮರಿ ಹಿಪ್ಪೋವನ್ನು ನೋಡಲು ತುದಿಗಾಲಲ್ಲಿ ನಿಂತು ಕಾಯುತ್ತಿದ್ದಾರೆ. ಹಿಪ್ಪೋ ಮರಿ ಹೆಣ್ಣಾಗಿದ್ದರೆ ತ್ಯಾವರೆಕೊಪ್ಪ ಮೃಗಾಲಯದಲ್ಲಿ ಕರ್ತವ್ಯದ ವೇಳೆ ಹಿಪ್ಪೋ ದಾಳಿಗೆ ಮೃತಪಟ್ಟಿದ್ದ ವೈದ್ಯೆ ಡಾ.ಸಮೀಕ್ಷಾ ರೆಡ್ಡಿ ಗೌರವಾರ್ಥವಾಗಿ ಸಮೀಕ್ಷಾ ಎಂದು ಹೆಸರಿಡಲು ಅಧಿಕಾರಿಗಳು ಚಿಂತನೆ ನಡೆಸುತ್ತಿದ್ದಾರೆ.

## ಕನ್ನಡ ಉಚ್ಚರಿಸಿ ಕನ್ನಡಿಗರನ್ನು ಎಚ್ಚರಿಸಿ: ಉಪೇಂದ್ರ ಕುಮಾರ್

• ಉದಯವಾಹಿನಿ, ಮಹದೇವಪುರ


ಉದಯವಾಹಿನಿ ಚಿತ್ರ

ಕನ್ನಡ ಸಾಹಿತ್ಯ ಪರಿಷತ್ತಿನ ಮೊದಲ ಕೆಲಸ, ಕನ್ನಡ ಶಾಲೆಗಳಲ್ಲಿ ಪ್ರವೇಶಾತಿ ಹೆಚ್ಚಿಸುವುದು ಎಂದು ಸುಬ್ಬಯ್ಯನಪಾಳ್ಯದ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷ ಹಾಗೂ ಪ್ರಾಧ್ಯಾಪಕರಾದ ಎಂ.ಹೆಚ್.ನಾರಾಯಣರೆಡ್ಡಿ ಕ್ಷೇತ್ರದ ಕಸಾಪದ ಕಾರ್ಯದರ್ಶಿ, ಸಾಹಿತಿ, ಉಪೇಂದ್ರ ಕುಮಾರ್ ರವರ ಗುಂಡೂರು ನಿವಾಸದಲ್ಲಿ ಆಯೋಜಿಸಿದ್ದ ಮನೆಯಂಗಳದಲ್ಲಿ ಕನ್ನಡ ಸಂಭ್ರಮ ಕಾರ್ಯಕ್ರಮದಲ್ಲಿ ಸಂಪನ್ಮೂಲ ಅತಿಥಿಯಾಗಿ ಆಗಮಿಸಿ ಮತನಾಡಿದ ಅವರು.

ಕನ್ನಡ ಸಾಹಿತ್ಯ ಪರಿಷತ್ತು ಈ ನಾಲ್ಕು ವರ್ಷಗಳಿಂದ ಕನ್ನಡನಾಡು ನುಡಿ,ಗಡಿ ವಿಚಾರದಲ್ಲಿ ಏನು ಕೆಲಸ ಮಾಡಿದೆ. ಸಮ್ಮೇಳನಗಳ ನಿರ್ಣಯಗಳನ್ನು ಸರ್ಕಾರ ಎಷ್ಟು ಕಾರ್ಯರೂಪಕ್ಕೆ ತಂದಿದೆ ರಾಜಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ ಆಶಯಗಳನ್ನು ಎಷ್ಟು ನೆರವೇರಿಸಿದೆ ಹಾಗೂ ಇತ್ಯಾದಿಯಾಗಿ ಪದಾಧಿಕಾರಿಗಳನ್ನು ಪ್ರಶ್ನಿಸಿದರು.ಅಧ್ಯಕ್ಷತೆ ವಹಿಸಿದ್ದ ಅಧ್ಯಾಪಕರಾದ ಆದಪ್ಪ ಪಾಸೋಡಿ ಮಾತನಾಡುತ್ತಾ, ಮನೆಯೇ ಮೊದಲ ಪಾಠಶಾಲೆ, ಪೋಷಕರು ಇಂಗ್ಲಿಷ್ ವ್ಯಾಮೋಹ ಬಿಟ್ಟು ಕನ್ನಡ ಶಾಲೆಗಳಿಗೆ ಮಕ್ಕಳನ್ನು ಸೇರಿಸಬೇಕೆಂದರು. ಕಾರ್ಯದರ್ಶಿ ಉಪೇಂದ್ರ ಕುಮಾರ್ ಮಾತನಾಡುತ್ತಾ, ಕನ್ನಡ ಉಚ್ಚರಿಸಿ ಕನ್ನಡಿಗರನ್ನು ಎಚ್ಚರಿಸಿ. ಕನ್ನಡ ನಾಡು ಮತ್ತು ನುಡಿಯ ಅಭಿಮಾನವು ಕನ್ನಡಿಗರ ಅಸ್ತಿತ್ವ ಮತ್ತು ಶಕ್ತಿ ಎಂದರು. ಪ್ರಾಧ್ಯಾಪಕರಾದ, ಆಂಜಿನಪ್ಪ, ಶ್ರೀರಾಮ್, ಹೇಮಾವತಿ, ಯುವಕವಿ ಕಿರಣಕುಮಾರ್, ಗೌರಮ್ಮ, ಮುನಿರಾಜ್ ಮತ್ತಿತರ ಗ್ರಾಮಸ್ಥರು ಉಪಸ್ಥಿತರಿದ್ದರು.

## ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆ ನಿಲ್ಲಿಸಲ್ಲ: ಡಿಕೆಶಿ ಸ್ಪಷ್ಟನೆ

• ಉದಯವಾಹಿನಿ, ಬೆಂಗಳೂರು

ಗ್ಯಾರಂಟಿ ಇದೆ, ಗ್ಯಾರಂಟಿ ಇರುತ್ತದೆ. ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವುದಿಲ್ಲ, ಆತಂಕಬೇಡ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಭರವಸೆ ನೀಡಿದ್ದಾರೆ. ಸರ್ಕಾರ ಗ್ಯಾರಂಟಿ ಯೋಜನೆಯ ಪರಿಷ್ಕರಣೆಗೆ ಕೈ ಹಾಕಿದ ಬೆನ್ನಲ್ಲೇ ಸಾಮಾಜಿಕ ಜಾಲತಾಣದಲ್ಲಿ ಸಿಎಂ ಪೋಸ್ಟ್ ಪ್ರಕಟಿಸಿ ಸ್ಪಷ್ಟನೆ ನೀಡಿದ್ದಾರೆ. ಕಾಂಗ್ರೆಸ್ ಸರ್ಕಾರದ ಜನಪರ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮಿ ಮತ್ತು ಗೃಹಜ್ಯೋತಿಯನ್ನು ಯಾವುದೇ ಕಾರಣಕ್ಕೂ ಸ್ಥಗಿತಗೊಳಿಸುವುದಿಲ್ಲ. ಈ ಯೋಜನೆಗಳನ್ನು ನಿಲ್ಲಿಸಲಾಗುತ್ತಿದೆ ಎಂಬ ವಿರೋಧ ಪಕ್ಷಗಳ ಸುಳ್ಳು ಪ್ರಚಾರ ಹಾಗೂ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ಮನವಿ ಮಾಡಿದ್ದಾರೆ. ಕೆಲವರು ಮೃತಪಟ್ಟವರ ಹೆಸರಿನಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಯೋಜನೆಗಳ ಲಾಭ ಪಡೆಯುತ್ತಿರುವುದು ಗಮನಕ್ಕೆ ಬಂದಿದೆ. ಹೀಗಾಗಿ ನಿಜವಾದ ಫಲಾನುಭವಿಗಳ ಹೆಸರು, ವಿಳಾಸ ಹಾಗೂ ಬ್ಯಾಂಕ್ ಖಾತೆ ವಿವರಗಳನ್ನು ದೃಢೀಕರಿಸಲು ಮರುಪರಿಶೀಲನೆ ಪ್ರಕ್ರಿಯೆ ಕೈಗೊಳ್ಳಲಾಗಿದೆ.

## ನಟ ಪ್ರಕಾಶ್ ರಾಜ್ ವಿವಾದದ ಬೆನ್ನಲ್ಲೇ ಬೆಂಗಳೂರಿನ ಕಾಕ್ರೋಚ್ ಪಕ್ಷದ ಪ್ರತಿಭಟನೆಯಲ್ಲಿಂದು ಭಾಗಿ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳ ವಿರುದ್ಧದ ಷಡ್ಯಂತ್ರಕ್ಕೆ ಬೆಂಬಲಕೊಟ್ಟ ಪ್ರಕರಣದಲ್ಲಿ ದೂರುದಾರ ಚಿನ್ನಯ್ಯ ಸಲ್ಲಿಸಿರುವ ಅರ್ಜಿಯಲ್ಲಿ ಪ್ರಕಾಶ್ ರಾಜ್ ಹೆಸರು ಕೇಳಿಬಂದು ಭಾರಿ ವಿವಾದಕ್ಕೆ ಕಾರಣವಾಗಿತ್ತು. ಇದೀಗ ಇದರ ಬೆನ್ನಲ್ಲೇ ಪ್ರಕಾಶ್ ರಾಜ್ ಭಾನುವಾರ ಸಂಜೆ ನಾಲ್ಕು ಗಂಟೆಗೆ ಫ್ರೀಡಂ ಪಾರ್ಕ್ ನಲ್ಲಿ ನಡೆಯಲಿರುವ ಕಾಕ್ರೋಚ್ ಜನತಾ ಪಕ್ಷದ ಶಾಂತಿಯುತ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂಬ ಸುದ್ದಿ ಬಂದಿದೆ. ಆಡಳಿತ ಪಕ್ಷಗಳ ವಿರುದ್ಧ ಧ್ವನಿ ಎತ್ತಿ, ಯುವಜನರ ಅಪಾರ ಬೆಂಬಲ ಪಡೆಯುತ್ತಿರುವ ಕಾಕ್ರೋಚ್ ಜನತಾ ಪಕ್ಷ, ದೆಹಲಿಯ ಬೃಹತ್ ಪ್ರತಿಭಟನೆ ಬಳಿಕ ಬೆಂಗಳೂರಲ್ಲಿ ಪ್ರತಿಭಟನೆ ಆಯೋಜಿಸಿದೆ. ನೀಟ್ ಪರೀಕ್ಷೆ ಅಕ್ರಮದ ವಿರುದ್ಧ ಧ್ವನಿಯೆತ್ತಿ, ಇದರ ವೈಫಲ್ಯಕ್ಕೆ ಕಾರಣವಾಗಿರುವ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸಲಾಗುತ್ತಿದೆ.

ಈ ಹಿಂದೆ ಪ್ರಥಮ ಬಾರಿಗೆ ಟೌನ್ ಹಾಲ್ ಮುಂದೆ ಶಾಂತಿಯುವ ಮಾನವ ಸರಪಳಿ ರಚನೆಗೆ ಕಾಕ್ರೋಚ್ ಪಕ್ಷ ಮುಂದಾಗಿದ್ದಾಗ ಪೊಲೀಸರು ಅನುಮತಿ ನೀಡದೆ ರದ್ದಾಗಿತ್ತು. ಇದೀಗ ಫ್ರೀಡಂ ಪಾರ್ಕ್ ನಲ್ಲಿ ಮತ್ತೆ ನಿಗದಿಯಾಗಿದೆ. ದೆಹಲಿಯಲ್ಲಿ ಭಾರಿ ಜನಬೆಂಬಲ ವ್ಯಕ್ತವಾಗಿತ್ತು. ಬೆಂಗಳೂರಲ್ಲಿ ಯಾವ ರೀತಿಯ ಪ್ರತಿಕ್ರಿಯೆ ಸಿಗಲಿದೆ ಎಂಬ ಬಗ್ಗೆ ಕುತೂಹಲ ಮೂಡಿದೆ.

# ಕೂಡಲೇ ಬಿಡದಿ ರೈತರ ಹಿತಾಸಕ್ತಿ ವಿರುದ್ಧದ ಭೂಸ್ವಾಧೀನ ಪ್ರಕ್ರಿಯೆ ಕೈ ಬಿಡುವಂತೆ ಸಿಎಂಗೆ ಸೂಚಿಸಿ

• ಉದಯವಾಹಿನಿ, ಬೆಂಗಳೂರು

### ರಾಹುಲ್‌ಗೆ ವಿಜಯೇಂದ್ರ ಬಹಿರಂಗ ಪತ್ರ



ಉದಯವಾಹಿನಿ ಚಿತ್ರ

ಬಿಡದಿ ಪ್ರದೇಶದ ರೈತರ ಹಿತಾಸಕ್ತಿಗಳ ವಿರುದ್ಧವಾಗಿ ನಡೆಯುತ್ತಿರುವ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಮಧ್ಯ ಪ್ರವೇಶಿಸುವಂತೆ ಕೋರಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಅವರು ಲೋಕಸಭೆಯ ವಿಪಕ್ಷ ನಾಯಕ ರಾಹುಲ್‌ಗಾಂಧಿ ಅವರಿಗೆ ಬಹಿರಂಗ ಪತ್ರ ಬರೆದಿದ್ದಾರೆ.

ಕರ್ನಾಟಕ ಬಿಜೆಪಿ ಘಟಕದ ರಾಜ್ಯಾಧ್ಯಕ್ಷನಾಗಿ, ಇಲ್ಲಿನ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ, ರಾಜ್ಯದ ರೈತರ ಅಳಲನ್ನು ಕೇಳಿಸಿಕೊಳ್ಳದೇ ಇರುವುದರಿಂದ, ನಿಮಗೆ ಈ ಪತ್ರವನ್ನು ಬರೆಯುತ್ತಿದ್ದೇನೆ. ಕರ್ನಾಟಕದ ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯಲ್ಲಿ ಫಲವತ್ತಾದ ಭೂಮಿಯನ್ನು ಕಳೆದುಕೊಂಡು ಕಣ್ಣೀರು ಹಾಕುತ್ತಿರುವ ಸಾವಿರಾರು ಶೋಷಿತ, ಅನ್ನದಾತ ರೈತ ಕುಟುಂಬಗಳ ಧ್ವನಿಯಾಗಿ ನಿಮ್ಮ ಗಮನಕ್ಕೆ ಕೆಲವು ವಿಷಯಗಳನ್ನು ತರಲು ಬಯಸುತ್ತಿದ್ದೇನೆ ಮತ್ತು ತಾವು ನ್ಯಾಯಯುತ ಪ್ರತಿಕ್ರಿಯೆಯನ್ನು ನೀಡಬೇಕು ಎಂದು ಈ ಮೂಲಕ ಕೋರುತ್ತಿದ್ದೇನೆ ಎಂದು ಮನವಿ ಮಾಡಿದ್ದಾರೆ.

ನೀವು ದೇಶಾದ್ಯಂತ ರೈತರ ಭೂಮಿ ಉಳಿಸುವ ಹಾಗೂ ಕಾರ್ಪೊರೇಟ್ ಕಪಿಮುಷ್ಟಿಯಿಂದ ದೇಶವನ್ನು ರಕ್ಷಿಸುವ ಹೆಸರಿನಲ್ಲಿ ಘೋಷಣೆ ಕೂಗುತ್ತೀರಿ, ಯಾತ್ರೆ ನಡೆಸುತ್ತೀರಿ. ಆದರೆ ಕಾಂಗ್ರೆಸ್ ಸರ್ಕಾರವಿರುವ ಕರ್ನಾಟಕದಲ್ಲಿ ನಿಮ್ಮ ಮುಖ್ಯಮಂತ್ರಿಗಳು ನಾಡಿನ ಅನ್ನದಾತ ರೈತರ ಹಿತ ನಿರ್ಲಕ್ಷಿಸುತ್ತಿರುವುದು ತಮ್ಮ ಗಮನಕ್ಕೆ ಬಂದಿದೆ ಎಂದು ಭಾವಿಸುತ್ತೇನೆ. ಬಿಡದಿ ಸಮಗ್ರ ನಗರ ಯೋಜನೆಯ ಹೆಸರಿನಲ್ಲಿ ನಡೆಯುತ್ತಿರುವ ಈ ಸರ್ಕಾರಿ 'ಭೂಕಬಳಿಕೆ'ಯ ಬಗ್ಗೆ ನಿಮ್ಮ ನಿಲುವನ್ನು ಸ್ಪಷ್ಟಪಡಿಸಬೇಕು ಎಂದು ಕೋರುತ್ತಾ ತಮ್ಮ ಗಮನಕ್ಕೆ ಕೆಲವು ವಾಸ್ತವಾಂಶಗಳನ್ನು ತರಲು ಬಯಸುತ್ತೇನೆ ಎಂದಿದ್ದಾರೆ. ಬೆಂಗಳೂರು ನಗರದ ಸಂಚಾರ ದಟ್ಟಣೆ ಮತ್ತು ಜನಸಂದಣಿ ಒತ್ತಡವನ್ನು ಕಡಿಮೆ ಮಾಡಲು, ಕರ್ನಾಟಕದ ಕಾಂಗ್ರೆಸ್ ಸರ್ಕಾರ ಬಿಡದಿ ಮತ್ತು ಹಾರೋಹಳ್ಳಿ ನಡುವೆ ಸುಮಾರು 7,481 ಎಕರೆ ಪ್ರದೇಶದಲ್ಲಿ ವರ್ಕ್–ಲಿವ್–ಪ್ಲೇ ಮಾದರಿಯ ಬೃಹತ್ ಉಪನಗರವನ್ನು ಅಭಿವೃದ್ಧಿಪಡಿಸಲು ಮುಂದಾಗಿದೆ. ಈ ಯೋಜನೆಗೆ ಅಂದಾಜು 18,000 ಕೋಟಿ ರೂ. ವೆಚ್ಚವನ್ನು ನಿಗದಿಪಡಿಸಲಾಗಿದ್ದು, ಎರಡನೇ ಪ್ರಮುಖ ವಾಣಿಜ್ಯ ಕೇಂದ್ರವನ್ನು ನಿರ್ಮಿಸಲಾಗುವುದು ಎಂದು ಹೇಳಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಭೂಸ್ವಾಧೀನದ ಅಂತಿಮ ಅಧಿಸೂಚನೆಯನ್ನು 11 ಜೂನ್ 2026 ರಂದು ಅಧಿಕೃತವಾಗಿ ರಾಜ್ಯ ಗೆಜೆಟ್‌ನಲ್ಲಿ ಪ್ರಕಟಿಸಲಾಗಿದೆ. ಫಲವತ್ತಾದ ಕೃಷಿ ಭೂಮಿಯನ್ನೇ ಆಯ್ಕೆ ಮಾಡಿಕೊಂಡು ಈ ಯೋಜನೆಯನ್ನು ಮುಂದುವರಿಸುವ ಅಗತ್ಯ ಮತ್ತು ಸಮರ್ಥನೆ ಏನು ಎಂಬ ಪ್ರಶ್ನೆ ಸಹಜವಾಗಿಯೇ ಉದ್ಭವಿಸುತ್ತದೆ. ಈ ಹಿನ್ನೆಲೆಯಲ್ಲಿ ರೈತರ ಪರವಾಗಿ ಕೆಲವು ವಿಚಾರಗಳನ್ನು ತಮ್ಮ ಮುಂದಿಡುತ್ತಿದ್ದು ತಾವು ಸ್ಪಂದಿಸುವಿರಿ ಎಂಬ ನಂಬಿಕೆ ಇದೆ ಎಂದು ತಿಳಿಸಿದ್ದಾರೆ.

**ಹಸಿರು ಭೂಮಿಯನ್ನು ಕಾಂಕ್ರೀಟ್ ಜಂಗಲ್ ಮಾಡುತ್ತಿರುವುದು ಏಕೆ?**

ಹಸಿರು ಭೂಮಿಯನ್ನು ಕಾಂಕ್ರೀಟ್ ಜಂಗಲ್ ಮಾಡುತ್ತಿರುವುದು ಏಕೆ? ಸ್ವಾಧೀನ ಪಡಿಸಿಕೊಳ್ಳಲಾಗುತ್ತಿರುವ ಈ ಭೂಮಿ ಬಂಜರು ಭೂಮಿಯಲ್ಲ. ಇದು ಬೆಂಗಳೂರು ನಗರಕ್ಕೆ ಪ್ರತಿದಿನ ಹಾಲು, ತರಕಾರಿ ಮತ್ತು ಹಣ್ಣುಗಳನ್ನು ಪೂರೈಸುವ, ತೆಂಗು, ಅಡಿಕೆ ಮತ್ತು ಬಾಳೆ ಬೆಳೆಯುವ ಅತ್ಯಂತ ಫಲವತ್ತಾದ ಮುಂಗಾರು ಬೆಳೆ ತೆಗೆಯುವ ಭೂಮಿಯಾಗಿದೆ. ಸಾವಿರಾರು ಗ್ರಾಮೀಣ ಮಹಿಳೆಯರು ಈ ಕೃಷಿ ಮತ್ತು ಸ್ಥಳೀಯ ಅಡಿಕೆ ತಟ್ಟೆ ತಯಾರಿಕಾ ಘಟಕಗಳನ್ನು ನಂಬಿ ಸ್ವಾವಲಂಬಿ ಬದುಕು ಕಟ್ಟಿಕೊಂಡಿದ್ದಾರೆ.

# ಕೈಕೊಟ್ಟ ಮಳೆ: ಬೆಳೆ ಉಳಿಸಿಕೊಳ್ಳುವ ಚಿಂತೆ; ಕುಡಿಯುವ ನೀರಿಗೆ ತಲೆದೋರುವ ಆತಂಕ

• **ಉದಯವಾಹಿನಿ, ಶ್ರೀರಂಗಪಟ್ಟಣ**


ಉದಯವಾಹಿನಿ ಚಿತ್ರ

ಈ ಬಾರಿ ಮುಂಗಾರು ಮಳೆ ಸಕಾಲಕ್ಕೆ ಬಾರದ ಕಾರಣ ಕೃಷಿ ಮತ್ತು ಕುಡಿಯುವ ನೀರಿಗೆ ಅಭಾವ ತಲೆದೋರುವ ಆತಂಕ ಎದುರಾಗಿದೆ. ಜೂನ್ ಎರಡನೇ ವಾರ ಕಳೆದರೂ ಮಳೆ ಬೀಳದೆ ಜನರು ಆಕಾಶದತ್ತ ಕಣ್ಣು ನೆಟ್ಟು ಕೂತಿದ್ದಾರೆ. ಒಂದೆರಡು ದಿನ ಸೋನೆ ಮಳೆ ಆಗಿದ್ದು ಬಿಟ್ಟರೆ ಕೆರೆ, ಕಟ್ಟೆ ತುಂಬುವಂತಹ ಜೋರು ಮಳೆ ಇದುವರೆಗೆ ಬಿದ್ದಿಲ್ಲ. ಏಪ್ರಿಲ್‌ನಲ್ಲಿ 46.9 ಮಿ.ಮೀ, ಮೇ ತಿಂಗಳಲ್ಲಿ 100 ಮಿ.ಮೀ ಹಾಗೂ ಜೂನ್ ತಿಂಗಳ ಮೊದಲ ವಾರದಲ್ಲಿ 13.8 ಮಿ.ಮೀ. ವಾಡಿಕೆ ಮಳೆ ಬೀಳಬೇಕಿತ್ತು.

ಆದರೆ ಈ ವರ್ಷ ಏಪ್ರಿಲ್‌ನಲ್ಲಿ ಶೇ 70, ಮೇ ತಿಂಗಳಿನಲ್ಲಿ ಶೇ 41 ಹಾಗೂ ಜೂನ್ ತಿಂಗಳ ಮೊದಲ ವಾರದಲ್ಲಿ ಶೇ 58ರಷ್ಟು ಮಳೆ ಕೊರತೆಯಾಗಿದೆ. ಖುಷಿ ಬೇಸಾಯ ಇರಲಿ, ನೀರಾವರಿ ಪ್ರದೇಶದ ರೈತರು ಕಬ್ಬು, ಅಡಿಕೆ, ತೆಂಗು, ಬಾಳೆ ಇತರ ನಿಂತಿರುವ ಬೆಳೆ ಉಳಿಸಿಕೊಳ್ಳುವುದು ಹೇಗೆ ಎಂದು ಚಿಂತೆಗೀಡಾಗಿದ್ದಾರೆ.

ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಬೀಳುತ್ತಿದ್ದ ಮುಂಗಾರು ಪೂರ್ವ ಮಳೆಗೆ ಮಳೆಯಾಶ್ರಿತ ಪ್ರದೇಶದಲ್ಲಿ ಉದ್ದು, ಹೆಸರು, ಅಲಸಂದೆಯಂತಹ ದ್ವಿದಳ ಧಾನ್ಯ ಬಿತ್ತನೆ ಕಾರ್ಯ ನಡೆಯುತ್ತಿತ್ತು. ಆದರೆ ಈ ಬಾರಿ ಯಾರೊಬ್ಬರೂ ಉದ್ದು, ಹೆಸರು, ಅಲಸಂದೆ ಬಿತ್ತನೆ ಮಾಡಿಲ್ಲ. ತಾಲ್ಲೂಕಿನಲ್ಲಿ 600 ಹೆಕ್ಟೇರ್ ಪ್ರದೇಶದಲ್ಲಿ ದ್ವಿದಳ ಧಾನ್ಯ ಬಿತ್ತನೆ ಗುರಿ ಇಟ್ಟುಕೊಂಡಿದ್ದು, ಮಳೆ ಕೊರತೆಯ ಕಾರಣದಿಂದ ಈ ಬಾರಿ ಶೇ 20ರಷ್ಟೂ ಬಿತ್ತನೆ ಆಗಿಲ್ಲ. ಕೃಷಿ ಪಂಪ್‌ಸೆಟ್ ಉಳ್ಳ ಕೆಲವರು ಅಲಸಂದೆ ಬಿತ್ತನೆ ಮಾಡುತ್ತಿದ್ದಾರೆ. ತಾಲ್ಲೂಕಿನ 9 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೇಸಿಗೆ ಭತ್ತ ಬೆಳೆದಿದ್ದು, ಕಟಾವು ಪ್ರಕ್ರಿಯೆ ಶುರುವಾಗಿದೆ. ಆದರೆ 4 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬೆಳೆದು ನಿಂತಿರುವ ಕಬ್ಬು ಬೆಳೆಗೆ ನೀರಿನ ಕೊರತೆ ಉಂಟಾಗಿದೆ.

ಕೆಆಎಸ್ ಅಣೆಕಟ್ಟೆಯಲ್ಲಿ ನೀರಿನ ಮಟ್ಟ 81 ಅಡಿಗೆ (ಗರಿಷ್ಠ 124.80) ಕುಸಿದಿದ್ದು, ನಾಲೆಗಳಿಗೆ ನೀರು ಹರಿಸುವುದನ್ನು ನಿಲ್ಲಿಸಲಾಗಿದೆ. ಕಬ್ಬು ಬೆಳೆಗಾರರು ನೀರಿಗಾಗಿ ಚಾತಕ ಪಕ್ಷಿಯಂತೆ ಕಾದು ಕುಳಿತಿದ್ದಾರೆ. ಜನವರಿಯಿಂದ ಬಿಸಿಲಿನ ತಾಪ ಹೆಚ್ಚಾಗಿದ್ದರಿಂದ ಕೆರೆ, ಕಟ್ಟೆಗಳು ಬೇಗ ಒಣಗಿ ಹೋಗಿವೆ. ಹಳ್ಳ, ತೊರೆಗಳು ಕೂಡ ಬತ್ತಿವೆ

## ಮಧುಗಿರಿಯಲ್ಲಿ ಮುಂಗಾರಿನ ವರ್ಷಧಾರೆ: ಶೇಂಗಾ ಕಣಜದಲ್ಲಿ ಮೆಕ್ಕೆಜೋಳದ ಪ್ರಾಬಲ್ಯ

• **ಉದಯವಾಹಿನಿ, ಮಧುಗಿರಿ**

ಜೂನ್ ಆರಂಭದಿಂದಲೂ ತಾಲ್ಲೂಕಿನ ವ್ಯಾಪ್ತಿಯಲ್ಲಿ ಆಗಾಗ್ಗೆ ಮುಂಗಾರು ಮಳೆ ಸುರಿಯುತ್ತಿದ್ದು, ರೈತರು ಬಿತ್ತನೆಗಾಗಿ ಜಮೀನು ಹಸನುಗೊಳಿಸುವ ಕಾಯಕದಲ್ಲಿ ನಿರತರಾಗಿದ್ದಾರೆ. ಡೀಸೆಲ್ ಬೆಲೆ ಏರಿಕೆ, ರಸಗೊಬ್ಬರದ ಬೆಲೆ ದುಬಾರಿ ಆಗಿದ್ದರೂ, ಹದ ಮಳೆಯಿಂದ ಉತ್ತೇಜಿತರಾಗಿರುವ ಕೃಷಿಕರು ಬೇಸಾಯದತ್ತ ಗಮನ ಹರಿಸಿದ್ದಾರೆ. ಬಿತ್ತನೆ ಬೀಜ ಖರೀದಿ, ರಸಗೊಬ್ಬರ ಸಂಗ್ರಹಕ್ಕೆ ಮುಂದಾಗಿದ್ದಾರೆ. ಹೊಲಗಳಲ್ಲಿ ಟ್ರ್ಯಾಕ್ಟರ್ ಮೂಲಕ ಉಳುಮೆ ನಡೆದಿದೆ. ಶೇಂಗಾ ಕಣಜ ಎಂದೇ ಖ್ಯಾತಿಯಾಗಿದ್ದ ಮಧುಗಿರಿ ತಾಲ್ಲೂಕಿನಲ್ಲಿ ಇದೀಗ ಮೆಕ್ಕೆಜೋಳ ಪ್ರಾಬಲ್ಯ ಮೆರೆದಿದೆ. ಶೇಂಗಾ ಬಿತ್ತನೆ ಪ್ರದೇಶ ವ್ಯಾಪಕ ಪ್ರಮಾಣದಲ್ಲಿ ಕುಸಿತಗೊಂಡಿರುವುದರಿಂದ ಕೃಷಿ ಇಲಾಖೆ ಒಂದು ಸಾವಿರ ಹೆಕ್ಟೇರ್‌ನಲ್ಲಿ 'ವಿಶಿಷ್ಟ' - ಐಸಿವಿಎಸ್ -1694 ಎಂಬ ತಳಿಯ ಪ್ರಾತ್ಯಕ್ಷಿಕೆ ನಡೆಸಲು ಸಿದ್ಧತೆ ನಡೆಸಿದೆ. ರೋಗ ನಿರೋಧಕ ಗುಣ ಮತ್ತು ಬರವನ್ನು ಎದುರಿಸುವ ಸಾಮರ್ಥ್ಯ ಹೊಂದಿರುವ ಈ ಶೇಂಗಾ ತಳಿಯು ಪ್ರತಿ ಹೆಕ್ಟೇರ್‌ಗೆ 28.5 ಕ್ವಿಂಟಲ್ ಇಳುವರಿ ನೀಡಲಿದೆ. 110ರಿಂದ 115 ದಿನಗಳಲ್ಲಿ ಕೊಯ್ಲಿಗೆ ಬರಲಿದೆ. ಮಳೆಗಾಲ, ಬೇಸಿಗೆಗೂ ಸೂಕ್ತವಾಗಿದ್ದು ಎಲೆಚುಕ್ಕಿ ರೋಗ, ತುಕ್ಕುರೋಗದಿಂದ ಮುಕ್ತವಾಗಿದೆ. ಅಧಿಕ ಎಣ್ಣೆ ಅಂಶ ಹೊಂದಿರುವ ಬೀಜ ಹೊಂದಿರುವ ಈ ತಳಿಯ ಒಂದು ಕೆ.ಜಿ ಕಡಲೆಕಾಯಿ ಸುಲಿದರೆ 730 ಗ್ರಾಂ ಬೀಜ ಲಭಿಸುತ್ತದೆ. ಸಬ್ಸಿಡಿ ದರದಲ್ಲಿ ಬಿತ್ತನೆಬೀಜ ವಿತರಿಸಲಾಗುತ್ತಿದ್ದು, ರೈತರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕ ಚೆನ್ನಕೇಶವಮೂರ್ತಿ ಅವರು ಕೃಷಿಕರಲ್ಲಿ ಮನವಿ ಮಾಡಿದ್ದಾರೆ. 30 ಕೆ.ಜಿ ಶೇಂಗಾ ಬಿತ್ತನೆ ಬೀಜದ ಬೆಲೆ ರಿಯಾಯಿತಿ ದರದಲ್ಲಿ ಪರಿಶಿಷ್ಟ ಜಾತಿ, ಪಂಗಡದವರಿಗೆ 2640, ಇತರೆಯವರಿಗೆ 2910 ಇದೆ. ಒಂದು ಕೆ.ಜಿ ಶೇಂಗಾ ಬೀಜದ ದರ 130 – 140ಕ್ಕೆ ತಲುಪಿದೆ.

# ಶಾಲಾ ಕಟ್ಟಡ ನಿರ್ಮಾಣಕ್ಕೆ ಮಂಜೂರಾಗದ ಹಣ

**ಪುಂಡರ ಮೋಜಿನ ಸ್ಥಳವಾಗಿ ಮಾರ್ಪಾಡು**

**ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರ 2017-18ನೇ ಸಾಲಿನಲ್ಲಿ ನಾಲ್ಕು ನೂತನ ಕೊಠಡಿಗಳ**


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಮುಳಬಾಗಿಲು**

ಸುಸಜ್ಜಿತ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದಿಂದ ಟೆಂಡರ್ ಆಗಿ ಕಟ್ಟಡ ಮಂಜೂರಾದರೂ, ಅನುದಾನ ಬಿಡುಗಡೆಯಾಗದ ಹಿನ್ನೆಲೆ ಕಾಮಗಾರಿ ಅರ್ಧಕ್ಕೆ ನಿಂತಿದೆ.

ತಾಲ್ಲೂಕಿನ ಆಲಂಗೂರು ವೃತ್ತದಲ್ಲಿರುವ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸರ್ಕಾರ 2017–18ನೇ ಸಾಲಿನಲ್ಲಿ ನಾಲ್ಕು ನೂತನ ಕೊಠಡಿಗಳ ನಿರ್ಮಾಣಕ್ಕೆ ಟೆಂಡರ್ ಕರೆದಿತ್ತು.

ಗುತ್ತಿಗೆದಾರರು ನಾಲ್ಕು ಕೊಠಡಿ ನಿರ್ಮಿಸಲು 2017–18ರ ಫೆಬ್ರುವರಿಯಲ್ಲಿ ಕಾಮಗಾರಿ ಪ್ರಾರಂಭಿಸಿ, ಗೋಡೆ ನಿರ್ಮಿಸಿ ಚಾವಣಿಯನ್ನೂ ಹಾಕಲಾಗಿದೆ. ಆದರೆ, ಮಾರ್ಚ್ ತಿಂಗಳಲ್ಲಿ ಕಾಮಗಾರಿಯ ಅನುದಾನ ಮಂಜೂರಾಗದ ಹಿನ್ನೆಲೆ ಏಳೆಂಟು ವರ್ಷಗಳಿಂದ ಕಾಮಗಾರಿ ಅರ್ಧಕ್ಕೆ ನಿಂತಿದ್ದು, ಪುಂಡ ಪೋಕರಿಗಳ ಮೋಜು ಮಸ್ತಿಯ ಸ್ಥಳವಾಗಿ ಬದಲಾಗಿದೆ.

ಶಾಲೆಯಲ್ಲಿ 8 ರಿಂದ 10ನೇ ತರಗತಿಯವರೆಗೆ ಒಟ್ಟು 80 ವಿದ್ಯಾರ್ಥಿಗಳು ಓದುತ್ತಿದ್ದು, ಉತ್ತಮ ಫಲಿತಾಂಶವೂ ಬರುತ್ತಿದೆ. ಶಾಲೆಯಲ್ಲಿ ಪ್ರಸಕ್ತ ಹತ್ತು ಕೊಠಡಿಗಳಿವೆ. ಇನ್ನೂ ಪ್ರಯೋಗಾಲಯ ಕೊಠಡಿ, ಬಾಲಕಿಯರ ವಿಶ್ರಾಂತಿ ಕೊಠಡಿ, ಸಭಾಂಗಣದ ಕೊರತೆ ಇದ್ದು ವಿದ್ಯಾರ್ಥಿಗಳು ಪರದಾಡುವಂತಾಗಿದೆ.

ಏಳೆಂಟು ವರ್ಷಗಳ ಹಿಂದೆ ನಿರ್ಮಾಣವಾಗಿರುವ ಕಾಮಗಾರಿ ಈಗಲೂ ಸುಭದ್ರವಾಗಿದೆ. ಗೋಡೆಗಳಿಗೆ ಪ್ಲಾಸ್ಟಿಂಗ್, ವಿದ್ಯುತ್, ಕಿಟಕಿ, ಬಾಗಿಲುಗಳಿಲ್ಲದ ಕಾರಣ ರಾತ್ರಿ ವೇಳೆ ಕಟ್ಟಡ ಬಳಿ ಓಡಾಡಲೂ ಭಯಪಡುವಂತಾಗಿದೆ. ರಾತ್ರಿ ವೇಳೆ ಅರ್ಧಕ್ಕೆ ನಿಂತಿರುವ ಕಟ್ಟಡದಲ್ಲಿ ಪುಂಡ ಪೋಕರಿಗಳು ಮದ್ಯಪಾನ ಸೇರಿದಂತೆ ಅನೇಕ ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುತ್ತಿದ್ದರು. ಈ ಬಗ್ಗೆ ಸಾರ್ವಜನಿಕರು ಅಧಿಕಾರಿಗಳಿಗೆ ಮನವಿ ಮಾಡಿದ್ದಕ್ಕೆ ಅಧಿಕಾರಿಗಳು ಸಿಸಿಟಿವಿ ಕ್ಯಾಮೆರಾ ಅಳವಡಿಸಿದ್ದಾರೆ. ಶಾಲೆಯಲ್ಲಿ ಉತ್ತಮ ಫಲಿತಾಂಶ ಹಾಗೂ ಪಕ್ಕದಲ್ಲೇ ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯವಿರುವುದರಿಂದ ಶಾಲೆಯಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿದೆ. ಜೊತೆಗೆ ಇಂಗ್ಲಿಷ್ ಮಾಧ್ಯಮ ಮತ್ತು ಪದವಿ ಪೂರ್ವ ಕಾಲೇಜು ಪ್ರಾರಂಭಿಸುವ ಉದ್ದೇಶವಿದೆ. ಹಾಗಾಗಿ ಕಾಮಗಾರಿ ಪೂರ್ಣಗೊಳಿಸಿ ಮತ್ತಷ್ಟು ಕೊಠಡಿ ನಿರ್ಮಿಸಿದರೆ ಅನುಕೂಲವಾಗುತ್ತದೆ ಎಂಬುದು ಶಿಕ್ಷಕ ಸುರೇಶ್ ಅವರ ಅಭಿಪ್ರಾಯವಾಗಿದೆ.

**ಅರ್ಧಕ್ಕೆ ನಿಂತ ಕಾಮಗಾರಿ ಕುರಿತು ಹೆಚ್ಚು ಮಾಹಿತಿ ಇಲ್ಲ. ಕಾಮಗಾರಿಗೆ ಹಣ ಇದುವರೆಗೂ ಬಿಡುಗಡೆ ಆಗಿಲ್ಲ ಎಂದು ಗುತ್ತಿಗೆದಾರರು ಮನವಿ ಸಲ್ಲಿಸಿದರೆ ನಾವು ಜಿಲ್ಲಾ ಪಂಚಾಯಿತಿಗೆ ಮಾಹಿತಿ ಕಳುಹಿಸಲಾಗುವುದು. ಇಲ್ಲವಾದಲ್ಲಿ ಗುತ್ತಿಗೆದಾರರು ಶಾಸಕರಿಗೆ ಮನವಿ ಸಲ್ಲಿಸಿದರೆ ಅವರಾದರೂ ಹಣ ಮಂಜೂರು ಮಾಡಿಸಬಹುದು.**
**-ಎನ್.ರಾಮಚಂದ್ರಪ್ಪ ಕ್ಷೇತ್ರ ಶಿಕ್ಷಣಾಧಿಕಾರಿ**

### ಅನುದಾನ ಬಿಡುಗಡೆ

**ಸರ್ಕಾರದಿಂದ ಸುಮಾರು 7-8 ವರ್ಷಗಳ ಹಿಂದೆ ಶಾಲೆಯಲ್ಲಿ ನಾಲ್ಕು ಕೊಠಡಿ ನಿರ್ಮಾಣಕ್ಕೆ ಟೆಂಡರ್ ಕರೆಯಲಾಗಿತ್ತು. ಸುಮಾರು 30 ಲಕ್ಷ ವೆಚ್ಚದಲ್ಲಿ ನಾಲ್ಕು ಕೊಠಡಿಗಳಿಗೆ ಗೋಡೆ ನಿರ್ಮಿಸಿ ಚಾವಣಿ ಹಾಕಲಾಗಿದೆ. ಆದರೆ ಇದುವರೆಗೂ ಒಂದು ಪೈಸೆಯೂ ಬಿಡುಗಡೆಯಾಗಿಲ್ಲ. ಹಾಗಾಗಿ ಕಾಮಗಾರಿ ಅರ್ಧಕ್ಕೆ ನಿಲ್ಲಿಸಲಾಗಿದೆ. ಅನುದಾನ ಬಿಡುಗಡೆಯಾದ ತಕ್ಷಣ ಕಾಮಗಾರಿ ಮುಂದುವರೆಸಲಾಗುವುದು.**

### ವಿಶ್ರಾಂತಿ ಕೊಠಡಿಗಳ ಅವಶ್ಯ

**ಕಟ್ಟಡ ಕಾಮಗಾರಿ ಕುರಿತು ಎಲ್ಲಾ ದಾಖಲೆಗಳನ್ನು ಗುತ್ತಿಗೆದಾರರು ಶಾಲೆಗೆ ಒಂದು ನಕಲು ಪ್ರತಿಯನ್ನು ನೀಡಿದ್ದಾರೆ. ಶಾಲಾ ಪ್ರಯೋಗಾಲಯ ಬಾಲಕಿಯರಿಗೆ ವಿಶ್ರಾಂತಿ ಕೊಠಡಿಗಳ ಅವಶ್ಯಕತೆ ಇದೆ. ಜೊತೆಗೆ ಇಂಗ್ಲಿಷ್ ಮಾಧ್ಯಮ ಹಾಗೂ ಪದವಿ ಪೂರ್ವ ಕಾಲೇಜು ಪ್ರಾರಂಭಿಸಲು ಯೋಜಿಸಿರುವುದರಿಂದ ಅನುದಾನ ಬಿಡುಗಡೆಯಾಗಿ ಶೀಘ್ರದಲ್ಲಿ ಕಾಮಗಾರಿ ಪೂರ್ಣಗೊಳಿಸಿದರೆ ಅನುಕೂಲವಾಗಲಿದೆ.**

# ಚಂಜಿಮಲೆ ಬಳಿ ಇರುವ ಪೌರಾಣಿಕ ರಹಸ್ಯದ ನೆಲೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**


ಉದಯವಾಹಿನಿ ಚಿತ್ರ

ಕೋಲಾರ ಜಿಲ್ಲೆಯ ವೇಮಗಲ್ ಹೋಬಳಿ ಚಂಜಿಮಲೆ ಬಳಿ ಇರುವ 'ಭಸ್ಮಾಸುರ ಬೆಟ್ಟವು ಪುರಾಣ, ಇತಿಹಾಸ ಮತ್ತು ಭೌಗೋಳಿಕ ವಿಸ್ಮಯದ ಅಪೂರ್ವ ಸಂಗಮವಾಗಿದೆ.

**ಪೌರಾಣಿಕ ಹಿನ್ನೆಲೆ:** ಸ್ಕಂದ ಪುರಾಣದ ಪ್ರಕಾರ ರಾಕ್ಷಸ ರಾಜ ಭಸ್ಮಾಸುರನು ಶಿವನನ್ನು ಮೆಚ್ಚಿಸಿ 'ಯಾರ ತಲೆಯ ಮೇಲೆ ಕೈಯಿಡುತ್ತೇನೋ ಅವರು ಭಸ್ಮವಾಗಬೇಕು' ಎಂಬ ವರ ಪಡೆದನು. ವರದ ಅಹಂಕಾರದಿಂದ ಶಿವನ ಮೇಲೆಯೇ ಕೈಯಿಡಲು ಹೊರಟಾಗ ವಿಷ್ಣು ಮೋಹಿನಿ ರೂಪದಲ್ಲಿ ಬಂದು ನೃತ್ಯದ ಮೂಲಕ ಅವನನ್ನು ಮರುಳುಗೊಳಿಸಿದನು. ಕೊನೆಗೆ ಭಸ್ಮಾಸುರನೇ ತನ್ನ ತಲೆಯ ಮೇಲೆ ಕೈಯಿಟ್ಟು ಸುಟ್ಟು ಬೂದಿಯಾದನು. ಆ ಜಾಗವೇ ಈ ಬೆಟ್ಟ ಎಂಬುದು ಸ್ಥಳೀಯರ ಪುರಾಣ ನಂಬಿಕೆ. **ನಿಗೂಢತೆ:** ಬೆಟ್ಟದ ವಿಶೇಷತೆಯೆಂದರೆ ಎಷ್ಟೇ ಜೋರು ಮಳೆ ಸುರಿದರೂ ಇಲ್ಲಿಂದ ಒಂದು ಹನಿ ನೀರು ಕೆಳಕ್ಕೆ ಹರಿಯುವುದಿಲ್ಲ. 'ಸೀತಿ ಬೆಟ್ಟದ ಮೇಲೆ ಮಳೆ ಬಿದ್ದರೆ ನೀರು ಕೋಡಿಯಾಗಿ ಹರಿಯುತ್ತದೆ. ಆದರೆ, ಈ ಬೆಟ್ಟದ ಮೇಲೆ ಎಂದೂ ನೀರು ಹರಿಯುವುದನ್ನು ನೋಡಿಲ್ಲ. ಸುಟ್ಟು ಬೂದಿಯಾದ ಭಸ್ಮಾಸುರನೇ ಮಳೆ ನೀರನ್ನು ಕುಡಿಯುತ್ತಾನೆ' ಎಂದು ಹಿರಿಯರಾದ ಮುನಿಯಪ್ಪ ಜನಪದೀಯ ನಂಬಿಕೆಯೊಂದನ್ನು ಉಲ್ಲೇಖಿಸಿದರು.

**ಭೌಗೋಳಿಕ ವಿಶೇಷತೆ:** ಈ ಬೆಟ್ಟವು ಸುಮಾರು 2500–3000 ಮಿಲಿಯನ್ ವರ್ಷಗಳಷ್ಟು ಹಳೆಯದಾದ 'ಪೆನಿನ್ಸುಲರ್ ಗ್ರೆಸ್' ಶಿಲಾ ಜಾತಿಗೆ ಸೇರಿದೆ. ಬೆಟ್ಟದ ಮಣ್ಣು ಮತ್ತು ಕಲ್ಲುಗಳು ಬೂದಿ ಬಣ್ಣದಲ್ಲಿವೆ. ಸುತ್ತಲಿನ ಬೆಟ್ಟಗಳಂತೆ ಇಲ್ಲಿ ಹಸಿರು ಹೊದಿಕೆ ಕಾಣುವುದಿಲ್ಲ. **ಐತಿಹಾಸಿಕ ಮಹತ್ವ:** ಸೀತಿ ಬೆಟ್ಟದ ಭೈರವೇಶ್ವರ ದೇವಾಲಯದಲ್ಲಿ 10–11ನೇ ಶತಮಾನದ ಚೋಳರ ಶಾಸನಗಳಿವೆ. ಬೆಟ್ಟದ ತಪ್ಪಲಿನಲ್ಲಿ ಕದಂಬ ಮತ್ತು ಗಂಗರ ಕಾಲದ ವೀರಗಲ್ಲುಗಳು ಸಿಕ್ಕಿವೆ. **ಪ್ರಸಕ್ತ ಸ್ಥಿತಿ:** ಕಾರ್ತಿಕ ಮಾಸ ಮತ್ತು ಮಹಾಶಿವರಾತ್ರಿಯಂದು ಭಕ್ತರು ಸೀತಿ ಬೆಟ್ಟದ ದೇವಸ್ಥಾನಕ್ಕೆ ಬಂದು ಎದುರಿನ ಭಸ್ಮಾಸುರ ಬೆಟ್ಟಕ್ಕೂ ನಮಸ್ಕರಿಸುತ್ತಾರೆ. ಈ ಬೆಟ್ಟವನ್ನು ಸರ್ಕಾರ ಅಭಿವೃದ್ಧಿಪಡಿಸಬೇಕು. ಇದು ಉತ್ತಮ ಪ್ರವಾಸೋದ್ಯಮ ತಾಣವಾಗಬಲ್ಲದುಎಂದು ಯುವ ಮುಖಂಡ ಸಂತೋಷ್ ಕುಮಾರ್ ಅಭಿಪ್ರಾಯಪಟ್ಟಿದ್ದಾರೆ.

## ಮತದಾರರ ಪಟ್ಟಿ ಪರಿಷ್ಕರಣೆ ವಿರುದ್ಧ ತುಮಕೂರು ಜನ ಜಾಗೃತಿ ಜಾಥಾ

• **ಉದಯವಾಹಿನಿ ,ತುಮಕೂರು**

ಸರ್ಕಾರ, ರಾಜಕೀಯ ಪಕ್ಷಗಳು ಹಿತಾಸಕ್ತಿ ಬಿಟ್ಟು, ಜನಪರವಾದ, ಸಂವಿಧಾನ ಬದ್ಧವಾದ ಮತ ಪರಿಷ್ಕರಣೆಗೆ ಮುಂದಾಗಬೇಕು ಎಂದು ಪಿಯುಸಿಎಲ್ ಅಧ್ಯಕ್ಷ ಕೆ.ದೊರೈರಾಜ್ ಹೇಳಿದರು. ನಗರದಲ್ಲಿ ಎದ್ದೇಳು ಕರ್ನಾಟಕ, ಪ್ರಗತಿಪರ ಮತ್ತು ಜನಪರ ಸಂಘಟನೆಗಳ ಒಕ್ಕೂಟದಿಂದ ಹಮ್ಮಿಕೊಂಡಿದ್ದ ಎಸ್‌ಐಆರ್ ವಿರುದ್ಧದ ಜನ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು. ಲಕ್ಷಾಂತರ ಜನರನ್ನು ಮತದಾರರ ಪಟ್ಟಿಯಿಂದ ಹೊರಗಿಡುವುದು ಆಘಾತಕಾರಿ ವಿಚಾರ. ಈ ಕುರಿತು ಜನರಲ್ಲಿನ ಆತಂಕ ನಿವಾರಣೆ ಮಾಡುವುದು ಜಾಥಾದ ಮುಖ್ಯ ಉದ್ದೇಶ ಎಂದರು. ಲೇಖಕಿ ಬಾ.ಹ.ರಮಾಕುಮಾರಿ, ನಮ್ಮ ಮತ, ಹಕ್ಕು ರಕ್ಷಣೆಯಾಗಬೇಕು. ಜಾಥಾ, ಜಾಗೃತಿ ಕಾರ್ಯಕ್ರಮದಲ್ಲಿ ಎಲ್ಲರು ಸಕ್ರಿಯವಾಗಿ ಪಾಲ್ಗೊಳ್ಳಬೇಕು' ಎಂದು ಕರೆ ನೀಡಿದರು.

# ಮಾಗಡಿ ರೈತರಿಗೆ ಬಿತ್ತನೆ ಹಂಗಾಮಿನಲ್ಲಿ ರಸಗೊಬ್ಬರ ವಿತರಣೆಗೆ ಚಾಲನೆ

• **ಉದಯವಾಹಿನಿ, ಮಾಗಡಿ**


ಉದಯವಾಹಿನಿ ಚಿತ್ರ

ತಾಲ್ಲೂಕಿನ ರೈತರಿಗೆ ಬಿತ್ತನೆ ಹಂಗಾಮಿನಲ್ಲಿ ರಸಗೊಬ್ಬರ ಕೊರತೆ ಆಗದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ ಎಂದು ಟಿಎಪಿಸಿಎಂಎಸ್ ಅಧ್ಯಕ್ಷ ಶಿವಪ್ರಸಾದ್ ತಿಳಿಸಿದರು.ಪಟ್ಟಣದ ಹೊಸಪೇಟೆ ವೃತ್ತದಲ್ಲಿರುವ ಟಿಎಪಿಸಿಎಂಎಸ್ ಗೋದಾಮಿನಲ್ಲಿ ರೈತರಿಗೆ ರಸಗೊಬ್ಬರ ವಿತರಣೆಗೆ ಚಾಲನೆ ನೀಡಿ ಮಾತನಾಡಿದರು.ಬಿತ್ತನೆ ಸಮಯದಲ್ಲಿ ಸಮರ್ಪಕವಾಗಿ ರಸಗೊಬ್ಬರ ವಿತರಣೆ ಮಾಡಲಾಗುತ್ತಿದ್ದು, ತಾಲ್ಲೂಕಿನ ರೈತರಿಗೆ ಸಮಸ್ಯೆ ಆಗದಂತೆ ನೋಡಿಕೊಳ್ಳಲಾಗಿದೆ. ಪ್ರತಿದಿನ ಬೆಳಗ್ಗೆ 9 ಗಂಟೆಯಿಂದ ಸಂಜೆ 6ರ ವರೆಗೂ ಗೋಡನ್ ತೆರೆದಿರುತ್ತದೆ ಎಂದರು. **500 ಟನ್‌ಗೆ ಬೇಡಿಕೆ:** ರೈತರ ಹಿತದೃಷ್ಟಿಯಿಂದ ಕೃಷಿ ಇಲಾಖೆ ಹಾಗೂ ಮಾರ್ಕೆಟಿಂಗ್ ಫೆಡರೇಷನ್‌ಗೆ ಈಗಾಗಲೇ ಒಟ್ಟು 500 ಟನ್ ರಸಗೊಬ್ಬರ ಪೂರೈಸುವಂತೆ ಬೇಡಿಕೆ ಸಲ್ಲಿಸಲಾಗಿದೆ. ಬೆಂಗಳೂರಿನ ಫೆಡರೇಷನ್‌ನಿಂದ ತಾಲ್ಲೂಕಿಗೆ ರಸಗೊಬ್ಬರ ಸರಬರಾಜಾಗುತ್ತಿದೆ ಎಂದು ಮಾಹಿತಿ ನೀಡಿದರು. **ಎಫ್‌ಐಡಿ ಸಂಖ್ಯೆ ಕಡ್ಡಾಯ:** ರಸಗೊಬ್ಬರ ವಿತರಣೆಯಲ್ಲಿ ಯಾವುದೇ ಅಕ್ರಮ ನಡೆಯದಂತೆ ತಡೆಯಲು, ಅರ್ಹ ರೈತರಿಗೆ ತಲುಪಿಸುವ ಉದ್ದೇಶದಿಂದ ಸರ್ಕಾರದ ನಿಯಮದಂತೆ 'ಎಫ್ ಐಡಿ' ಸಂಖ್ಯೆಯನ್ನು ಕಡ್ಡಾಯಗೊಳಿಸಲಾಗಿದೆ. ಪ್ರತಿ ಎಕರೆಗೆ 20:20 ರಸಗೊಬ್ಬರವನ್ನು ಒಂದು ಚೀಲ ನೀಡಬೇಕು. ರೈತರಿಗೆ ಅನುಕೂಲವಾಗುವ ನಿಟ್ಟಿನಲ್ಲಿ 5 ಎಕರೆ ವರೆಗೆ 2 ಚೀಲ ರಸಗೊಬ್ಬರ ನೀಡಲಾಗಿದೆ. ತಾಲ್ಲೂಕಿನಲ್ಲಿ ಈವರೆಗೆ ರಸಗೊಬ್ಬರಕ್ಕೆ ಸಮಸ್ಯೆಯಾಗಿಲ್ಲ ಎಂದರು. ಡಿಎಪಿ ರಸಗೊಬ್ಬರ ದರ 50 ಕೆ.ಜಿ ಚೀಲಕ್ಕೆ ಸರ್ಕಾರವೇ 1,350 ನಿಗದಿಪಡಿಸಿದೆ.

ಈಗಾಗಲೇ 15 ಟನ್ ಡಿಎಪಿ ಬಂದಿದ್ದು, ಸದ್ಯ 7 ಟನ್ ದಾಸ್ತಾನು ಇದೆ. ಸೋಮವಾರ ಮತ್ತೊಂದು ಲೋಡ್ 30 ಟನ್ ಡಿಎಪಿ ಗೊಬ್ಬರ ಬರಲಿದೆ ಎಂದರು.ಯೂರಿಯಾ 45 ಕೆ.ಜಿ ಚೀಲಕ್ಕೆ 266 ದರ ಇರಲಿದೆ.

ಬಂದಿದ್ದ ಯೂರಿಯಾ ವಿತರಣೆಯಾಗಿದ್ದು, ಕೃಷಿ ಇಲಾಖೆ ಮೂಲಕ ಮತ್ತಷ್ಟು ತರಿಸಲು ಕ್ರಮ ಕೈಗೊಳ್ಳಲಾಗಿದೆ. ಫೆಡರೇಷನ್‌ನಲ್ಲಿ ಸದ್ಯಕ್ಕೆ 20:20 ರಸಗೊಬ್ಬರ ದಾಸ್ತಾನು ಇಲ್ಲದ ಕಾರಣ, ನಮ್ಮಲ್ಲೂ ಲಭ್ಯವಿಲ್ಲ ಎಂದು ತಿಳಿಸಿದರು.

# ರೌಡಿಶೀಟರ್ ಜೊತೆ ಬಂಡೀಪುರ ಅರಣದಲ್ಲಿ ಎಣ್ಣೆ ಪಾರ್ಟಿ ಮಾಡಿದ ಆರ್‌ಎಫ್‌ಒ ಅಮಾನತು ಸಂರಕ್ಷಣಾಧಿಕಾರಿ ಆದೇಶ

• **ಉದಯವಾಹಿನಿ, ಹುಣಸೂರು:**


ಉದಯವಾಹಿನಿ ಚಿತ್ರ

ಚಾಮರಾಜನಗರ, – ರೌಡಿಶೀಟರ್ ಜೊತೆ ಎಣ್ಣೆ ಪಾರ್ಟಿ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ತವ್ಯಲೋಪ ಹಿನ್ನಲೆಯಲ್ಲಿ ಬಂಡೀಪುರದ ಮದ್ದೂರು ವನ್ಯಜೀವಿ ವಲಯದ ವಲಯ ಅರಣ್ಯಾಧಿಕಾರಿ ಡಿ. ಪುನೀತ್ ಕುಮಾರ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿ ಸರ್ಕಾರದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಆದೇಶ ಹೊರಡಿಸಿದ್ದಾರೆ.

ಗುಂಡ್ಲುಪೇಟೆ ತಾಲ್ಲೂಕಿನ ಬಂಡೀಪುರ ಅರಣ್ಯದ ಮದ್ದೂರು ವಲಯದ ಹುಲಿ ಕಟ್ಟೆ ಎಂಬಲ್ಲಿರುವ ಕಳ್ಳಬೇಟೆ ತಡೆ ಶಿಬಿರದ ಮುಂಭಾಗದಲ್ಲೇ ಕುಖ್ಯಾತ ರೌಡಿಶೀಟರ್ ಸತೀಶ್ ಯಾನೆ ಮಹದೇವಪ್ರಸಾದ್ ಹಾಗೂ ಆತನ ಸ್ನೇಹಿತರಾದ ಗಂಗಾಧರ್ ಮತ್ತು ಚೇತನ್ ಅಕ್ರಮವಾಗಿ ಪ್ರವೇಶಿಸಿ ಮದ್ಯದ ಪಾರ್ಟಿ ಮಾಡಿದ್ದರು. ಶಿಬಿರದ ಸೌರ ಫಲಕವನ್ನೇ ಟೇಬಲ್ ಮಾಡಿಕೊಂಡು, ಅದರ ಮೇಲೆ ಮದ್ಯದ ಬಾಟಲಿಗಳು, ಪ್ಲಾಸ್ಟಿಕ್ ಲೋಟ ಹಾಗೂ ತಿಂಡಿಯ ಪ್ಯಾಕೆಟ್‌ಗಳನ್ನು ಇಟ್ಟು ಮೋಜು ಮಾಡಿದ್ದ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ಭಾರಿ ವೈರಲ್ ಆಗಿದ್ದವು.

ಅತ್ಯಂತ ಸಂರಕ್ಷಿತ ಹಾಗೂ ವನ್ಯಜೀವಿಗಳ ಓಡಾಟವಿರುವ ಪ್ರಮುಖ ವಲಯದೊಳಗೆ ಇಂತಹ ಕೃತ್ಯ ನಡೆದಿದ್ದಕ್ಕೆ ಪರಿಸರವಾದಿಗಳಿಂದ ತೀವ್ರ ಆಕ್ರೋಶ ವ್ಯಕ್ತವಾಗಿತ್ತು.

ಈ ಅಕ್ರಮ ಪಾರ್ಟಿಯ ಹಿಂದೆ ಸ್ಥಳೀಯ ಅರಣ್ಯ ಸಿಬ್ಬಂದಿಯ ಕೈವಾಡವಿರುವ ಶಂಕೆ ವ್ಯಕ್ತವಾದ ಬೆನ್ನಲ್ಲೇ, ಬಂಡೀಪುರ ಹುಲಿ ಯೋಜನೆ ನಿರ್ದೇಶಕ ನಂದೀಶ್ ಅವರು ಎಸಿಎಫ್ ಸುರೇಶ್ ಅವರಿಗೆ ತನಿಖೆ ನಡೆಸಿ ವರದಿ ನೀಡುವಂತೆ ಸೂಚಿಸಿದ್ದರು.

**ಸಿಬ್ಬಂದಿಯ ಕೈವಾಡ ಶಂಕೆ**

### ಕರ್ತವ್ಯ ಲೋಪ ಎಸಗಿರುವುದು ಸಾಬೀತು

**ಎಸಿಎಫ್ ನೀಡಿದ ತನಿಖಾ ವರದಿಯಲ್ಲಿ, ಮದ್ದೂರು ವಲಯದ ಆರ್‌ಎಫ್‌ಒ ಪುನೀತ್ ಕುಮಾರ್ ಅವರು ತಮಗಿಂತ ಮೇಲಧಿಕಾರಿಗಳಿಗೆ ಈ ಗಂಭೀರ ವಿಷಯದ ಬಗ್ಗೆ ಯಾವುದೇ ಮಾಹಿತಿ ನೀಡದೆ ಮುಚ್ಚಿಟ್ಟಿರುವುದು ಹಾಗೂ ಫೋಟೋಗಳಲ್ಲಿ ಗುರುತಿಸಲಾದ ಶಂಕಿತರ ಹೆಸರನ್ನು ಅಧಿಕೃತವಾಗಿ ದಾಖಲಿಸದೆ ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗಿದೆ. ಈ ಹಿನ್ನೆಲೆಯಲ್ಲಿ ಇಲಾಖೆಯ ಶಿಸ್ತು ಕ್ರಮಕ್ಕೆ ಬಾಕಿ ಇರುವಂತೆ ಅವರನ್ನು ಅಮಾನತು ಮಾಡಲಾಗಿದೆ.**

# ಚಾವಣಿ ಕುಸಿಯುವ ಹಂತದಲ್ಲಿ ರಾಜವಂತಿ ಸರ್ಕಾರಿ ಶಾಲೆ

• **ಉದಯವಾಹಿನಿ, ಪಾವಗಡ**


ಉದಯವಾಹಿನಿ ಚಿತ್ರ

ತಾಲ್ಲೂಕು ಕೇಂದ್ರದಿಂದ ಕೂಗಳತೆ ದೂರದಲ್ಲಿರುವ ರಾಜವಂತಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕಟ್ಟಡ ಸಂಪೂರ್ಣ ಶಿಥಿಲಗೊಂಡಿದ್ದು ಅಪಾಯಕಾರಿ ಸ್ಥಿತಿಯಲ್ಲಿಯೇ ಮಕ್ಕಳು ಕಲಿಯುತ್ತಿದ್ದಾರೆ.

ದಶಕಗಳ ಹಳೆಯ ಕಟ್ಟಡ ಸಂಪೂರ್ಣ ಶಿಥಿಲಗೊಂಡಿದೆ. ಮಳೆ ಬಂದರೆ ನೀರು ಬೀಳದಿರುವ ಜಾಗ ಹುಡುಕಿಕೊಂಡು ಮಕ್ಕಳು ಕುಳಿತುಕೊಳ್ಳಬೇಕಿದೆ. ನಿರ್ವಹಣೆಯಿಲ್ಲದೆ ಚಾವಣಿ ಕುಸಿಯುವ ಹಂತದಲ್ಲಿದೆ.

ಶಾಲೆಯಲ್ಲಿ 1ರಿಂದ 7ನೇ ತರಗತಿ ವರೆಗೆ 43 ವಿದ್ಯಾರ್ಥಿಗಳಿದ್ದಾರೆ. ನಾಲ್ವರು ಶಿಕ್ಷಕಿಯರು ಕಾರ್ಯನಿರ್ವಹಿಸುತ್ತಿದ್ದಾರೆ. ಮಳೆ ಬಂದರೆ ಸಂಪೂರ್ಣ ಕಟ್ಟಡದಲ್ಲಿ ನೀರು ನಿಲ್ಲುತ್ತದೆ. ಚಾವಣಿ, ಗೋಡೆಗಳು ನೆನೆದು ಯಾವಾಗ ಏನಾಗುವುದೊ ಎಂಬ ಆತಂಕದಲ್ಲಿ ಪೋಷಕರು ದಿನ ದೂಡಬೇಕಿದೆ. ಚಾವಣಿ ಬೀಳುವ ಆತಂಕದಿಂದ ವಿದ್ಯಾರ್ಥಿಗಳನ್ನು ಶಾಲೆ ಆವರಣದಲ್ಲಿ ಕೂರಿಸಿ ಪಾಠ ಮಾಡಲಾಗುತ್ತಿದೆ. ಬಿಸಿಲು ಇದ್ದಾಗ ಶಾಲೆ ಬಳಿಯ ದೇಗುಲ ಮುಂಭಾಗದ ಮರದ ಕೆಳಗೆ ಕೂರಿಸಿ ಪಾಠ ಹೇಳುವ ಅನಿವಾರ್ಯ ಶಿಕ್ಷಕರದ್ದು.


ಮಳೆ ಬಂದು ನಿಂತ ಮೂರ್ನಾಲ್ಕು ದಿನದವರೆಗೆ ಶಾಲೆ ಕೊಠಡಿ ಒಳಗೆ ಪ್ರವೇಶಿಸಲು ಶಿಕ್ಷಕರು, ಅಡುಗೆ ಸಿಬ್ಬಂದಿ ಭಯಪಡುತ್ತಾರೆ. ಗೋಡೆಗಳನ್ನು ಮುಟ್ಟಿದರೂ ವಿದ್ಯುತ್ ಪ್ರವಹಿಸುತ್ತದೆ ಎಂಬ ಆತಂಕದಿಂದ ಯಾವ ವಸ್ತುವನ್ನು ಮುಟ್ಟಲೂ ಭಯಪಡುತ್ತಾರೆಗ್ರಾಮಸ್ಥರು, ಶಾಲಾ ಅಭಿವೃದ್ಧಿ ಸಮಿತಿ ಪದಾಧಿಕಾರಿಗಳು ಕಟ್ಟಡ ದುರಸ್ತಿ ಮಾಡುವಂತೆ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಪತ್ರ ಬರೆದರೂ ಯಾವುದೇ ಪ್ರಯೋಜನವಾಗಿಲ್ಲ. ಶಾಲೆಯಲ್ಲಿ ಶೌಚಾಲಯ ಇಲ್ಲದ ಕಾರಣ ಪಕ್ಕದ ಹಳ್ಳ, ಜಮೀನುಗಳ ಬಳಿ ಕುರುಚಲು ಗಿಡ, ಪೊದೆಗಳ ಮರೆಗೆ ಮಕ್ಕಳು ಹೋಗಬೇಕಿದೆ.

ಆಗಾಗ ಹಾವು, ವಿಷ ಜಂತುಗಳನ್ನು ಕಂಡ ಮಕ್ಕಳು ಚೀರುತ್ತಾ ಓಡಿ ಬಂದ ನಿದರ್ಶನಗಳಿವೆ ಎನ್ನುತ್ತಾರೆ ಶಿಕ್ಷಕರು.ಶುದ್ಧ ಕುಡಿಯುವ ನೀರಿನ ಸಮಸ್ಯೆ ಇದ್ದು, ಮನೆಯಿಂದ ನೀರು ತುರುವುದು ಅನಿವಾರ್ಯ. ಹಳೆಯ ಕೊಠಡಿಗಳನ್ನು ದುರಸ್ತಿ ಪಡಿಸುವುದರ ಜೊತೆಗೆ ನೂತನ ಕಟ್ಟಡ ನಿರ್ಮಾಣ ಮಾಡುವ ಅಗತ್ಯವಿದೆ.

ಮಕ್ಕಳಿಗೆ ಕುಡಿಯುವ ನೀರು, ಆಟದ ಮೈದಾನ, ಶೌಚಾಲಯಗಳ ವ್ಯವಸ್ಥೆ ಕಲ್ಪಿಸಿ ಉತ್ತಮ ಶಾಲಾ ಸಂಕೀರ್ಣ ನಿರ್ಮಿಸುವ ತುರ್ತು ಇದೆ ಎನ್ನುವುದು ಗ್ರಾಮದ ಒತ್ತಾಯ.


### ರಸ್ತೆ ಉಬ್ಬು ಅಳವಡಿಸಲು ಆಗ್ರಹ

**ಪಾವಗಡ-ತುಮಕೂರು ಕೆ- ಷಿಪ್ ರಾಜ್ಯ ಹೆದ್ದಾರಿ ಬದಿಯಲ್ಲಿಯೇ ಶಾಲೆ ಇರುವುದರಿಂದ ಮಕ್ಕಳು ರಸ್ತೆ ದಾಟುವುದು ಸಾಹಸವೇ ಸರಿ. ಅತ್ಯಂತ ವೇಗವಾಗಿ ವಾಹನಗಳು ಸಂಚರಿಸುತ್ತಿರುತ್ತವೆ. ಜೀವ ಅಂಗೈಯಲ್ಲಿ ಹಿಡಿದು ಶಾಲೆಗೆ ಹೋಗಬೇಕಾದ ಅನಿವಾರ್ಯ ಇದೆ. ಈ ಪ್ರದೇಶ 'ಅಪಾಯಕಾರಿ ವಲಯ' ಎಂದೂ ಗುರುತಿಸಿದ್ದರೂ ಈವರೆಗೆ ವೇಗ ನಿಯಂತ್ರಿಸಲು ಯಾವುದೇ ಕ್ರಮ ಜರುಗಿಸಿಲ್ಲ ಎನ್ನುವುದು ಗ್ರಾಮಸ್ಥರ ಆರೋಪ.**




## ಮಿನಿ ನ್ಯೂಸ್

### ಅಗಲಿದ ಪೊಲೀಸ್ ಪೇದೆಗೆ ವೀರಶೈವ ಮಹಾಸಭಾ ವತಿಯಿಂದ ಸಂತಾಪ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಗುಂಡ್ಲುಪೇಟೆ**

ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡಿದ್ದ ಪಟ್ಟಣ ಪೊಲೀಸ್ ಠಾಣೆಯ ಪೇದೆ ಗಣೇಶ್ ರವರು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟ ಹಿನ್ನಲೆ ವೀರಶೈವ ಲಿಂಗಾಯತ ಮಹಾಸಭಾ ಯುವಘಟಕ ವತಿಯಿಂದ ಸಂತಾಪ ಸೂಚಿಸಲಾಯಿತು. ಪಟ್ಟಣದ ಬಸವೇಶ್ವರ ವೃತ್ತದ ಬಳಿ ಮೃತ ಗಣೇಶ್ ರವರ ಭಾವಚಿತ್ರವನ್ನಿರಿಸಿ ಒಂದು ನಿಮಿಷಗಳ ಕಾಲ ಮೌನಾಚರಣೆ ನಡೆಸಿ ಶಾಂತಿ ಕೋರಲಾಯಿತು.

### ರಾಮನಗರದಲ್ಲಿ ಧಾರಾಕಾರ ಮಳೆ, ರಸ್ತೆಗಳು ಜಲಾವೃತಗೊಂಡವು


ಉದಯವಾಹಿನಿ ಚಿತ್ರ

• **ಉದಯವಾಹಿನಿ, ರಾಮನಗರ**

ನಗರದಲ್ಲಿ ಕೆಲ ದಿನಗಳಿಂದ ಸಾಧಾರಣವಾಗಿ ಸುರಿಯುತ್ತಿದ್ದ ಮಳೆಯು ಧಾರಾಕಾರ ಸ್ವರೂಪ ಪಡೆಯಿತು. ಬೆಳಿಗ್ಗೆಯಿಂದಲೇ ಇದ್ದ ಮೋಡ ಕವಿದ ವಾತಾವರಣವು ಸಂಜೆ ಹೊತ್ತಿಗೆ ಭಾರಿ ಮಳೆ ತಂದಿತು. ನಿರಂತರವಾಗಿ ಒಂದೂವರೆ ತಾಸು ಸುರಿದ ಮಳೆಗೆ ನಗರವು ತೋಯಿದ್ದಿತು. ಮಳೆ ಅಬ್ಬರಕ್ಕೆ ನಗರದ ರಸ್ತೆಗಳು ಕೆಲ ಹೊತ್ತು ಹಳ್ಳಗಳಾಂತದವು. ಚರಂಡಿಗಳು ತುಂಬಿ ಹರಿದವು. ರಸ್ತೆ ಮೇಲೆ ನೀರು ಹರಿಯುತ್ತಿದ್ದ ರಭಸಕ್ಕೆ ಕೆಲವೆಡೆ ವಾಹನಗಳ ಚಾಲಕರು ಕೆಲ ಹೊತ್ತು ರಸ್ತೆ ಬದಿ ವಾಹನಗಳನ್ನು ನಿಲ್ಲಿಸಿಕೊಂಡರು. ಮಳೆ ನಿಂತ ಬಳಿಕ ಮುಂದಕ್ಕೆ ಸಾಗಿದರು. ದ್ವಿಚಕ್ರ ವಾಹನಗಳ ಸವಾರರು ರಸ್ತೆ ಬದಿಯ ಕಟ್ಟಡಗಳ ಬಳಿ ತಮ್ಮ ವಾಹನ ನಿಲ್ಲಿಸಿಕೊಂಡು ಆಶ್ರಯ ಪಡೆದರು. ಐಜೂರು ಬಸ್ ನಿಲ್ದಾಣ, ಬಿ.ಎಂ. ರಸ್ತೆ, ಮುಖ್ಯರಸ್ತೆ, ಎಂ.ಜಿ. ರಸ್ತೆ, ರೈಲು ನಿಲ್ದಾಣ ವೃತ್ತ, ಮಾಗಡಿ ರಸ್ತೆ, ವಿವೇಕಾನಂದನಗರ ವಿಜಯನಗರ ಸೇರಿದಂತೆ ವಿವಿಧೆಡೆ ರಸ್ತೆಗಳಲ್ಲಿ ಮಳೆ ನೀರು ರಭಸವಾಗಿ ಹರಿಯಿತು. ಜನರು ಛತ್ರಿ ಹಿಡಿದು ಸಹ ಓಡಾಡಲಾಗದಷ್ಟು ಮಳೆ ಅಬ್ಬರಿಸಿತು.

ನಗರದ ಹೊರವಲಯದ ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯ ಕೆಲವೆಡೆ ಮಳೆ ನೀರು ನಿಂತಿತು.

ಇದರಿಂದಾಗಿ ವಾಹನಗಳು ಮಂದಗತಿಯಲ್ಲಿ ಸಾಗಿದವು. ಮಾಗಡಿ ರಸ್ತೆ, ದ್ಯಾವರಸೇಗೌಡನದೊಡ್ಡಿ, ಬಿಳಗುಂಬ, ಸಂಗಬಸವನದೊಡ್ಡಿ ಬಳಿ ಇರುವ ಹೆದ್ದಾರಿಯ ಕೆಳಸೇತುವೆಗಳಲ್ಲಿ ಕೆಲ ಹೊತ್ತು ನೀರು ನಿಂತಿದ್ದರಿಂದ ವಾಹನ ಸವಾರರು ತೊಂದರೆ ಅನುಭವಿಸಿದರು.

### ಬ್ರಾಹ್ಮಣರ ಸಂಘಟನೆ ಬಲಪಡಿಸಬೇಕಿದೆ – ಡಿ.ಟಿ. ಪ್ರಕಾಶ್

• **ಉದಯವಾಹಿನಿ, ಮೈಸೂರು**

ಬ್ರಾಹ್ಮಣರ ಸಂಘಟನೆ ಬಲಪಡಿಸಬೇಕಿದೆ' ಎಂದು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್ ಹೇಳಿದರು. ಇಲ್ಲಿನ ಸರಸ್ವತಿಪುರಂನಲ್ಲಿರುವ ಸಂಘದ ಕಚೇರಿಯಲ್ಲಿ ನೂತನ ಪದಾಧಿಕಾರಿಗಳಿಗೆ ನೇಮಕಾತಿ ಪತ್ರ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮೈಸೂರಿನಲ್ಲಿ ಬ್ರಾಹ್ಮಣ ಸಮುದಾಯವನ್ನು ಸಾಮಾಜಿಕವಾಗಿ ಬಲಿಷ್ಠಗೊಳಿಸುವ ನಿಟ್ಟಿನಲ್ಲಿ ನೂತನ ಸಮಿತಿ ರಚಿಸಲಾಗಿದೆ. ಶಿಕ್ಷಣ, ಆರೋಗ್ಯ, ಉದ್ಯೋಗ, ಧಾರ್ಮಿಕ, ಸಾಂಸ್ಕೃತಿಕ, ಸಾಹಿತ್ಯ, ಸಹಕಾರಿ ಸೇರಿದಂತೆ ವಿವಿಧ ಕ್ಷೇತ್ರದಲ್ಲಿ ವಿಪ್ರ ಸಮುದಾಯವರಿಗೆ ಬೆನ್ನುಲುಬಾಗಿ ನಿಂತು ಪ್ರಾತಿನಿಧ್ಯಕ್ಕೆ ಸಹಕಾರ ನೀಡಲಾಗುವುದು' ಎಂದರು.

**ನೂತನ ಪದಾಧಿಕಾರಿಗಳು:** ಉಪಾಧ್ಯಕ್ಷರಾಗಿ ಗೋಪಾಲ್ ರಾವ್, ಕೆ.ಆರ್. ಸತ್ಯನಾರಾಯಣ್, ಎಂ.ಆರ್. ಬಾಲಕೃಷ್ಣ, ಡಾ.ಲಕ್ಷ್ಮೀದೇವಿ, ರಾಜಗೋಪಾಲ್, ಕಡಕೋಳ ಜಗದೀಶ್, ರವಿ ಶಾಸ್ತ್ರಿ, ಪ್ರಧಾನ ಕಾರ್ಯದರ್ಶಿಯಾಗಿ ವಿ.ಹರೀಶ್, ಸಂಘಟನಾ ಕಾರ್ಯದರ್ಶಿಗಳಾಗಿ ಸೌಭಾಗ್ಯಾ, ಮೂರ್ತಿ, ಎಸ್. ರಂಗನಾಥ, ಸುರೇಶ್, ಕೆ.ಎಂ. ನಿಶಾಂತ್, ಅಜಯ್ ಶಾಸ್ತ್ರಿ, ಕಲ್ಕೆರೆ ನಾಗರಾಜ್ ಖಚಾಂಚಿಗಳಾಗಿ, ಎಂ.ಎ. ಸುಮಾ, ಮಂಜುನಾಥ, ಜಂಟಿ ಕಾರ್ಯದರ್ಶಿಗಳಾಗಿ ಜ್ಯೋತಿ, ಲತಾ, ಅರುಣ್ ಟಿ.ಎಸ್., ಮಾಧ್ಯಮ ಸಂಚಾಲಕರಾಗಿ ವಿಕ್ರಮ್ ಅಯ್ಯಂಗಾರ್ ನೇಮಕಗೊಂಡಿದ್ದಾರೆ.

### ಎಲ್ಲೆಲ್ಲೂ ನೇರಳೆ: ಖರೀದಿ ಬಿರುಸು

• **ಉದಯವಾಹಿನಿ, ಹುಳಿಯಾರು**

ಪಟ್ಟಣವೂ ಸೇರಿದಂತೆ ಜನನಿಬಿಡ ಸ್ಥಳಗಳಲ್ಲಿ ಇದೀಗ ಎಲ್ಲಿ ನೋಡಿದರೂ ನೇರಳೆ ಹಣ್ಣಿನ ರಾಶಿ. ಜೂನ್, ಜುಲೈನಲ್ಲಿ ಮಾತ್ರ ಸಿಗುವುದರಿಂದ ಮಾರಾಟವೂ ಬಿರುಸಾಗಿದೆ. ಮರಗಳು ಹಣ್ಣು ತುಂಬಿಕೊಂಡಿವೆ. ಆದರೆ ಸೂಕ್ತ ಧಾರಣೆ ಸಿಗದಾಗಿದೆ. ಹಿಂದಿನ ವರ್ಷಗಳಲ್ಲಿ ಒಂದು ಕೆ.ಜಿ ನೇರಳೆ ಹಣ್ಣಿಗೆ ಮಾರುಕಟ್ಟೆಯಲ್ಲಿ 240ರಿಂದ 280, 320ರಂತೆ ಮಾರಾಟವಾಗಿತ್ತು. ಆದರೆ ಈ ವರ್ಷ 100, 120ಕ್ಕೆ ಮಾರಾಟವಾಗುತ್ತಿದೆ. ಇದು ಗ್ರಾಹಕರಲ್ಲಿ ಖುಷಿ ಮೂಡಿಸಿದ್ದರೆ, ಬೆಳೆಗಾರರಿಗೆ ಬೇಸರ ಮೂಡಿಸಿದೆ. ರೈತರ ಜಮೀನಿನ ಬದುವಿನಲ್ಲಿ ಬೆಳೆಯುತ್ತಿದ್ದ ನೇರಳೆ ಇದೀಗ ವಾಣಿಜ್ಯ ಬೆಳೆಯಾಗಿ ಮಾರ್ಪಡುತ್ತಿದೆ. ಈ ಹಂತದಲ್ಲೇ ಬೆಲೆ ಕುಸಿದಿರುವುದು ಬೆಳೆಗಾರರನ್ನು ಕಂಗಾಲಾಗಿಸಿದೆ. ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ನೇರಳೆ ಕೃಷಿ ಅಷ್ಟಿಲ್ಲ. ಹೊರಗಿನಿಂದ ತಂದು ಮಾರಾಟ ಮಾಡುತ್ತಿದ್ದಾರೆ. ಉತ್ತಮ ತಳಿಯ ಸಸಿಗಳನ್ನು ಆಯ್ಕೆ ಮಾಡಿ ನೆಟ್ಟರೆ ನಾಲ್ಕೈದು ವರ್ಷಗಳಲ್ಲಿ ಫಲ ಸಿಗಲಿದೆ. ನೇರಳೆ ಗಿಡ ಮರವಾಗಿ ಬೆಳೆದ ಬಳಿಕ ನಿರ್ವಹಣೆಗೆ ಹೆಚ್ಚು ವೆಚ್ಚ ಮಾಡಬೇಕಿಲ್ಲ. ಕೊಯ್ಲು ಹೊರತುಪಡಿಸಿ ಬೇರೆ ಯಾವ ಕೆಲಸವೂ ಇರುವುದಿಲ್ಲ ಎನ್ನುತ್ತಾರೆ ನೇರಳೆ ಹಣ್ಣಿನ ವ್ಯಾಪಾರಿ ಕೆಂಕೆರೆ ಗ್ರಾಮದ ಅಡಾಣಿಕಲ್ಲು ವಾಸಿ ಪರಮೇಶ್.ನಮ್ಮ ಭಾಗದಲ್ಲಿ ನೇರಳೆ ಹಣ್ಣು ಸಿಗುವುದು ಕಡಿಮೆ. ನೆರೆಯ ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲ್ಲೂಕಿನ ಪಂಚನಹಳ್ಳಿ ಭಾಗದಲ್ಲಿ ತೋಟಗಳಿದ್ದು, ಅಲ್ಲಿಂದ ತಂದು ಮಾರಾಟ ಮಾಡುತ್ತಿದ್ದೇವೆ ಎಂದು ನೇರಳೆ ವ್ಯಾಪಾರಿಗಳು ಹೇಳುತ್ತಾರೆ. ನೇರಳೆ ಹಣ್ಣಿನಲ್ಲಿ ಔಷಧಿಯ ಗುಣವಿರುವುದರಿಂದ ಮಿತವಾಗಿ ಸೇವಿಸುವುದರಿಂದ ಆರೋಗ್ಯ ವೃದ್ಧಿಗೆ ಪೂರಕವಾಗಿದೆ.

## ಖೇತಿ ಬಚಾವ್ರೋ ಅಭಿಯಾನದ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ (ಕೆವಿಕೆ), ಬೀದರ ಹಾಗೂ ಐ.ಐ.ಎಂ.ಆರ್.

# ಮಾವು ಬೆಳೆ ಆಧುನಿಕ ತಂತ್ರಜ್ಞಾನ ಅಳವಡಿಕೆಗೆ ರೈತರು ಅನುಸರಿಸಿ

• ಉದಯವಾಹಿನಿ ಬೀದರ

ಮಾವು ಬೆಳೆಗಾರರು, ರೈತರು, ರೈತ ಮಹಿಳೆಯರು ಹಾಗೂ ಗ್ರಾಮೀಣ ಯುವಕರಿಗಾಗಿ ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು

1 : ಹೈದರಾಬಾದ್ ಐ.ಐ.ಎಂ.ಆರ್ ರೈತ ಉತ್ಪಾದಕರ ಸಂಸ್ಥೆ
2 : ''ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು''
3 : ನೀರು ಮತ್ತು ಪೊ?ಷಕಾಂಶಗಳ ಸಮತೋಲನ ಬಳಕೆ

ಅಳವಡಿಕೆಗೆ ರೈತರು ಅನುಸರಿಸಬೇಕು ಎಂದು ಕಲಬುರಗಿ ಕೃಷಿ ವಿಜ್ಞಾನ ಕೇಂದ್ರ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರು ಡಾ.ರಾಜು ಜಿ.ತೆಗ್ಗೆಳ್ಳಿ ಅವರು ಹೇಳಿದರು.

ಬಸವಕಲ್ಯಾಣ ತಾಲ್ಲೂಕಿನ ಹಳ್ಳಿ ಗ್ರಾಮದ ರೈತ ಭವನದಲ್ಲಿ ಇತ್ತೀಚಿನ ಖೇತಿ ಬಚಾವ್ರೋ ಅಭಿಯಾನದ ಐಸಿಎಆರ್-ಕೃಷಿ ವಿಜ್ಞಾನ ಕೇಂದ್ರ (ಕೆವಿಕೆ), ಬೀದರ ಹಾಗೂ ಐ.ಐ.ಎಂ.ಆರ್. - ಅಮೃತವಾಹಿನಿ ರೈತ ಉತ್ಪಾದಕರ ಸಂಸ್ಥೆ ಖೇಳಗಿ ಸಂಯುಕ್ತಾಶ್ರಯದಲ್ಲಿ ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು ಕುರಿತು ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ವಸ್ತು ಪ್ರದರ್ಶನ ಮಳಿಗೆ ಉದ್ಘಾಟಿಸುವ ಮೂಲಕ ಚಾಲನೆ ನೀಡಿದರು ಅವರು ಮಾತನಾಡಿದರು.

**ಐ.ಐ.ಎಂ. ಆರ್ ರೈತ ಉತ್ಪಾದಕ**



ಉದಯವಾಹಿನಿ ಚಿತ್ರ

> ಕಾರ್ಯಕ್ರಮದ ಪ್ರಾಸ್ತಾವಿಕ ಭಾಷಣದಲ್ಲಿ ಬೀದರ ಕೆವಿಕೆ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥರು ಡಾ.ರಾಜಶೇಖರ ಬಸನಾಯಕ್ ಅವರು ಮಾತನಾಡಿ, ಕೃಷಿ ವಿಜ್ಞಾನ ಕೇಂದ್ರದ ಉದ್ದೇಶ ವಿವರಗಳು ಖೇತಿ ಬಚಾವ್ರೋ ಅಭಿಯಾನದ ಮಹತ್ವ, ನೈಸರ್ಗಿಕ ಕೃಷಿ ಮತ್ತು ಸಾವಯವ ಕೃಷಿಯ ಅವಶ್ಯಕತೆ ಎಂದು ಹೇಳಿದರು.
> -ಡಾ.ರಾಜಶೇಖರ ಬಸನಾಯಕ್

ಮಾವು ಬೆಳೆಗಾರರು, ರೈತರು, ರೈತ ಮಹಿಳೆಯರು ಹಾಗೂ ಗ್ರಾಮೀಣ ಯುವಕರಿಗಾಗಿ ''ಮಾವು ಬೆಳೆಯಲ್ಲಿ ಹೊಸ ತಂತ್ರಜ್ಞಾನಗಳು'' ಅಳವಡಿಕೆಗೆ ರೈತರು ಅನುಸರಿಸಬೇಕು, ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ ಮಾವು ಬೆಳೆಯಲ್ಲಿ ವೈಜ್ಞಾನಿಕ ಹಾಗೂ ಆಧುನಿಕ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

> ಕಲಬುರಗಿ ವಲಯ ಕೃಷಿ ಸಂಶೋಧನಾ ಕೇಂದ್ರ, ಹಿರಿಯ ವಿಜ್ಞಾನಿ (ಸಸ್ಯರೋಗಶಾಸ್ತ್ರ) ಡಾ.ಮಲ್ಲಿಕಾರ್ಜುನ ಕೆಂಗನಾಳ ಅವರು ಮಾತನಾಡಿ, ಮಾವು ಬೆಳೆಯಲ್ಲಿ ಸಮಗ್ರ ರೋಗ ನಿರ್ವಹಣೆ ಹಾಗೂ ರಫ್ತು ಗುಣಮಟ್ಟದ ಹಣ್ಣುಗಳ ಉತ್ಪಾದನೆಗೆ ಒತ್ತು ನೀಡುವಂತೆ ರೈತರಿಗೆ ಸಲಹೆ ನೀಡಿದರು
> -ಡಾ.ಮಲ್ಲಿಕಾರ್ಜುನ ಕೆಂಗನಾಳ.

ಉತ್ತಮ ಗುಣಮಟ್ಟದ ಸಸಿಗಳ ಆಯ್ಕೆ, ತೋಟದ ಸಮರ್ಪಕ ನಿರ್ವಹಣೆ, ನೀರು ಮತ್ತು ಪೊ?ಷಕಾಂಶಗಳ ಸಮತೋಲನ ಬಳಕೆ, ಸಮಗ್ರ ಕೀಟ ನಿರ್ವಹಣೆ ಹಾಗೂ ಮಾರುಕಟ್ಟೆ ಸಂಪರ್ಕದ ಮಹತ್ವ ಕುರಿತು ರೈತರಿಗೆ ಮಾಹಿತಿ ನೀಡಿದರು. ಬೀದರ ಕೃಷಿ ವಿಜ್ಞಾನ ಕೇಂದ್ರ ವಿಜ್ಞಾನಿ (ಮಣ್ಣು ವಿಜ್ಞಾನ) ಡಾ.ಚಂದ್ರಕಾಂತ

### ಮಾವು ಬೆಳೆಯ ಸುಧಾರಿತ ಬೇಸಾಯ

> ಕಲಬುರಗಿ ಕೃಷಿ ಮಹಾವಿದ್ಯಾಲಯ ಸಹಾಯಕ ಪ್ರಾಧ್ಯಾಪಕರು (ತೋಟಗಾರಿಕೆ) ಡಾ.ಮಹಾಂತೇಶ ಜೋಗಿ ಅವರು ಮಾತನಾಡಿ, ಮಾವು ಬೆಳೆಯ ಸುಧಾರಿತ ಬೇಸಾಯ ಕ್ರಮಗಳು, ವಿವಿಧ ತಳಿಗಳ ಆಯ್ಕೆ, ಕೊಯ್ಲಿನ ನಂತರದ ನಿರ್ವಹಣೆ, ಶ್ರೇಣೀಕರಣ, ಪ್ಯಾಕಿಂಗ್ ಹಾಗೂ ಮೌಲ್ಯವರ್ಧನೆ ಕುರಿತು ಸಮಗ್ರ ಮಾಹಿತಿ ನೀಡಿದರು.

ಅವರು ಮಾತನಾಡಿ, ಮಣ್ಣು ಮತ್ತು ನೀರಿನ ಪರೀಕ್ಷೆಯ ಮಹತ್ವ, ಸಮಗ್ರ ಪೊಷಕಾಂಶ ನಿರ್ವಹಣೆ ಹಾಗೂ ಮಣ್ಣಿನ ಸಾವಯವ ಇಂಗಾಲ ಹೆಚ್ಚಿಸುವ ತಂತ್ರಜ್ಞಾನಗಳ ಕುರಿತು ರೈತರಿಗೆ ವಿವರಿಸಿದರು. ಹೈದರಾಬಾದ್ ಐ.ಐ.ಎಂ.ಆರ್ ರೈತ ಉತ್ಪಾದಕರ ಸಂಸ್ಥೆ (ಎಫ್ ಪಿಓ) ಸಂಯೋಜಕರು ಅಶೋಕ ಸಜ್ಜನ್ ಅವರು ಮಾತನಾಡಿ, ರೈತ ಉತ್ಪಾದಕರ ಸಂಸ್ಥೆಗಳ ಮೂಲಕ ಸಮೂಹ ಮಾರಾಟ ಕೈಗೊಳ್ಳುವುದರಿಂದ ರೈತರಿಗೆ ಉತ್ತಮ ಬೆಲೆ ಹಾಗೂ ಹೆಚ್ಚಿನ ಲಾಭ ದೊರೆಯುವ ಸಾಧ್ಯತೆಗಳ ಕುರಿತು ಮಾಹಿತಿ ನೀಡಿದರು. ತರಬೇತಿಯಲ್ಲಿ ಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ತೋಟಗಳಲ್ಲಿ ಎದುರಾಗುತ್ತಿರುವ ವಿವಿಧ ಸಮಸ್ಯೆಗಳ ಕುರಿತು ತಜ್ಞರೊಂದಿಗೆ ಚರ್ಚಿಸಿ ಸೂಕ್ತ ಪರಿಹಾರಗಳನ್ನು ಪಡೆದುಕೊಂಡರು ಎಂದು ತಿಳಿಸಿದರು.

# ಟ್ರಸ್ಟ ಮತ್ತು ಅಂಬೇಡ್ಕರ್ ಮೂರ್ತಿ ಸ್ಥಾಪನೆಗೆ ಅವಿರೋಧ ಆಯ್ಕೆ

• ಉದಯವಾಹಿನಿ ಚಿಂಚೋಳಿ:

ಪಟ್ಟಣದಲ್ಲಿ ಡಾ.ಬಿ.ಆರ್ ಅಂಬೇಡ್ಕರ್ ಮೂರ್ತಿ ಸ್ಥಾಪನೆ ಹಾಗೂ ಎಡ ಮತ್ತು ಬಲ ಸಮೂದಾಯದ ತಾಲ್ಲೂಕಾ ಟ್ರಸ್ಟ್ ಅಧ್ಯಕ್ಷರಾಗಿ ಆರ್‌ಟಿಓ ಅಧಿಕಾರಿ ಮಂಜುನಾಥ ಕೋರವಿ ಅವರಿಗೆ ಸಮಾಜದ ಹಿರಿಯ ಕಿರಿಯ ಮುಖಂಡರ ಸಮ್ಮುಖದಲ್ಲಿ ಸರ್ವಾನುಮತದಿಂದ ಅವಿರೋಧವಾಗಿ ಆಯ್ಕೆಗೊಳಿಸಲಾಗಿದೆ ಎಂದು ಮಾದಿಗ ಮಹಾಸಭಾದ ಜಿಲ್ಲಾಧ್ಯಕ್ಷ ಗೋಪಾಲರಾವ ಕಟ್ಟಿಮನಿ ಘೋಷಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಅಂಬೇಡ್ಕರ್ ಮೂತಿ ಸ್ಥಾಪನೆ ಹಾಗೂ ಎಡ,ಬಲ ಸಮೂದಾಯದ ಟ್ರಸ್ಟ್ ಅಧ್ಯಕ್ಷ ಪದಾಧೀಕಾರಿಗಳ ಪೂರ್ವಸಭೆಯು ಆರ್‌ಟಿಓ ಮಂಜುನಾಥ ಕೋರವಿ ನೇತೃತ್ವದಲ್ಲಿ ಹಮ್ಮಿಕೊಂಡ ಸಭೆಯಲ್ಲಿ ಮಾತನಾಡಿದ ಅವರು,ರಾಜ್ಯದಲ್ಲಿ ಎಡ,ಬಲವೆಂದು ನಾವೆಲ್ಲರೂ ಒಬ್ಬರೊಬ್ಬರನ್ನು ಬಡೆದಾಡುತ್ತಿರುವಾಗ ಎಡ ಮತ್ತು ಬಲ ಎರಡು ಸಮೂದಾಯ ಒಂದೇ ನಾವೇಲ್ಲರು ಒಗ್ಗಟಾಗಿ ಇರಬೇಕೆಂದು ಎರಡು ಸಮಾಜಕ್ಕೆ ಬಾಬಾ ಸಾಹೇಬ್ ಅಂಬೇಡ್ಕರ್ ಮೂರ್ತಿ,ಡಾ.ಬಾಬುಜಗಜೀವನ್



ಉದಯವಾಹಿನಿ ಚಿತ್ರ

ರಾಮ್ ಮೂರ್ತಿ ಸ್ಥಾಪನೆ ಮಾಡುತ್ತೇನೆಂದು ಹೇಳುತ್ತಿರುವುದು ಅತ್ಯಂತ ಶ್ಲಾಘನೀಯವಾಗಿದೆ ಎಂದರು. ಆರ್‌ಟಿಓ ಮಂಜುನಾಥ ಕೊರವಿ ಮಾತನಾಡಿ ಎಡ ಮತ್ತು ಬಲ ಸಮೂದಾಯಕ್ಕೆ ಒಂದು ಮಾಡುವುದೆ ನನ್ನ ಗುರಿಯಗಿದೆ,ಎಡ,ಬಲ ಸಮಾಜವೆಂದರೆ ಭೂಮಿ,ಆಕಾಶ ಇದ್ದಂಗೆ ನಮ್ಮ ದೊಡ್ಡ ಸಮಾಜವಾಗಿದೆ ಆಕಾಶ ಎಲ್ಲಾ ಕಡೆ ಹರಡಿದೆ,ಭೂಮಿ ಎಲ್ಲ ಕಡೆ ವಿಸ್ತರಿಸಿದೆ ಹಾಗೆ ನಮ್ಮ ಸಮಾಜ ವಿಶ್ವದ್ಯಾಂತ ಹರಡಿದೆ ಹಾಗಾಗಿ ನಾವೇಲ್ಲರೂ ಒಂದಾಗಬೇಕು,ಅಂಬೇಡ್ಕರ್ ಮತ್ತು ಜಗಜೀವನ್‌ರಾಮ್ ಎರಡು ಮೂರ್ತಿ ಪಟ್ಟಣದಲ್ಲಿ ಸ್ಥಾಪಿಸುತ್ತೇನೆ ಎಂದರು.

**ಹಿರಿಯ ಮುಖಂಡರು:** ನಿವೃತ್ತ ನ್ಯಾಯಾಧೀಶ ಜಿಕೆ ಗೋಖಲೇ,ಅಶೋಕ ಸುತಾರ್,ರೇವಣಸಿದ್ದಪ್ಪ ಸುಬೇದಾರ,ಶಾಮರಾವ ಓಂಕಾರ,ವಿಜಯಕುಮಾರ ಘಾಟಗೆ,ಮಾಣಿಕರಾವ ಗುಲಗುಂಜಿ,ಬಸವರಾಜ ಮೇತ್ರಿ,ಸುರೇಶ ಕೋರವಿ,ನರಸಪ್ಪ ಕಿವಣೋರಕರ್,ಪಂಡರಿ ಲೋಡನೂರ,ಒಮನರಾವ ಕೋರವಿ,ಆರ್,ಗಣಪತರಾವ,ಸುರೇಶ ಶೇರಿಕಾರ,

**ಯುವ ಮುಖಂಡರು;** ರಾಜಕುಮಾರ ಕೋಳ್ಳುರ,ಪವನಕುಮಾರ ಮೇತ್ರಿ,ಲಕ್ಷ್ಮಿಕಾಂತ ಹೋಸಮನಿ, ಸುನೀಲ್,ಪ್ರದೀಪ ಮೇತ್ರಿ, ಪಂಡರಿ ಶೇರಿಕಾರ,ನಾಗಾರ್ಜುನ್ ಕಟ್ಟಿ,ಶ್ರೀಕಾಂತ ಜಾನಕಿ,ಜಗದೇವ ಗೌತಮ್,ಗೋಪಾಲ ರಾಂಪೂರೆ,ರೇವಣಸಿದ್ದ,ಕಾಶಿನಾಥ ಶಿಂದೆ, ಶಿವಯೋಗಿ ರುಸ್ತಾಂಪೂರ,ರಾಧಕೃಷ್ಣ ಹೋಸಮನಿ,ವೈಜಿನಾಥ ಮಿತ್ರ,ಮಹೇಶ,ರಾಜು,ರಾಘವೇಂದ್ರ ಹುವಿನಭಾವಿ, ಶ್ರೀಧರ ವಗ್ಗಿ,ಸಿದ್ದು ರಂಗನೂರ,ಸಾಗರ್ ಆನಂದಿ ಸೇರಿದಂತೆ ಅನೇಕ ಎಡ,ಬಲ ಸಮೂದಾಯದ ಮುಖಂಡರು ಇದ್ದರು,ಎಡ ಮತ್ತು ಬಲ ಸಮೂದಾಯದ ಅನೇಕ ಮುಖಂಡರು ಟ್ರಸ್ಟ ಮತ್ತು ಮೂರ್ತಿ ಸ್ಥಾಪನೆಗೆ ಬೆಂಬಲ ಸೂಚಿಸಿದರು.

# ಗಡಿ ಜಿಲ್ಲೆಯಲ್ಲಿ ಕನ್ನಡ ಬಳಕೆ ಕಡ್ಡಾಯ ಜಾರಿಗೆ ಒತ್ತು

• ಉದಯವಾಹಿನಿ ಬೀದರ್

ಜಿಲ್ಲೆಯ ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಸಾರ್ವಜನಿಕ ಸೇವಾ ಸಂಸ್ಥೆಗಳಲ್ಲಿ ಕನ್ನಡ ಭಾಷೆಯ ಬಳಕೆಯನ್ನು ಮತ್ತಷ್ಟು ವಿಸ್ತರಿಸುವ ಅಗತ್ಯವಿದ್ದು, ಸರ್ಕಾರದ ನಿಯಮಾನುಸಾರ ಶೇ.60ರಷ್ಟು ಕನ್ನಡ ಬಳಕೆಯನ್ನು ಕಡ್ಡಾಯವಾಗಿ ಜಾರಿಗೊಳಿಸಲು ಕ್ರಮ ಕೈಗೊಳ್ಳಬೇಕಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಕಾರಳೆ ಅವರು ಹೇಳಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಕನ್ನಡ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕನ್ನಡದ ಬಳಕೆ ಕುರಿತು ಈಗಾಗಲೇ ವಿವಿಧ ರೀತಿಯ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆದರೂ ಇನ್ನೂ ಕೆಲವು ಇಲಾಖೆಗಳಲ್ಲಿ ಕನ್ನಡದ ಬಳಕೆ ನಿರೀಕ್ಷಿತ ಮಟ್ಟದಲ್ಲಿಲ್ಲ. ಶಾಲೆಗಳಲ್ಲಿ ಕನ್ನಡ ಶಿಕ್ಷಕರ ನೇಮಕಾತಿಯನ್ನು ಹೆಚ್ಚಿಸುವುದರ ಜೊತೆಗೆ ಕನ್ನಡದ ಅರಿವು ಮೂಡಿಸುವುದು ಅಷ್ಟೇ ಅತ್ಯಗತ್ಯವಾಗಿದೆ ಎಂದು ಅವರು ತಿಳಿಸಿದರು.

# ರಸಗೊಬ್ಬರ ಅಕ್ರಮ ಮಾರಾಟ ಜಾಲದ ಮೇಲೆ ದಾಳಿ

• ಉದಯವಾಹಿನಿ ಬಂಟ್ವಾಳ

ರೈತರಿಗೆ ನೀಡಲಾಗಿದ್ದ ಸಬ್ಸಿಡಿ ಯೂರಿಯಾ ಗೊಬ್ಬರವನ್ನು ಅಕ್ರಮವಾಗಿ ಬೇರೆಡೆಗೆ ಸಾಗಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದ ರಾಜ್ಯ ಮಟ್ಟದ ಸಂಘಟಿತ ಜಾಲವನ್ನು ವಿಟ್ಲ ಪೊಲೀಸ್ ಇನ್ಸ್ಪೆಕ್ಟರ್ ಪ್ರಕಾಶ್ ದೇವಾಡಿಗ ನೇತೃತ್ವದ ಪೊಲೀಸರ ತಂಡ ಕಾರ್ಯಾಚರಣೆಯಲ್ಲಿ ಬಯಲಿಗೆಳೆದಿದ್ದಾರೆ. ಓರ್ವ ಆರೋಪಿಯನ್ನು ಬಂಧಿಸಲಾಗಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ರಸಗೊಬ್ಬರ ಮತ್ತು ಸಾಗಣೆಗೆ ಬಳಸಲಾಗುತ್ತಿದ್ದ ಟ್ರಕ್ ಅನ್ನು ವಶಪಡಿಸಿಕೊಳ್ಳಲಾಗಿದೆ. ಬಂಧಿತ ಆರೋಪಿಯನ್ನು ಬಂಟ್ವಾಳ ತಾಲೂಕಿನ ಕೊಳ್ನಾಡು ಗ್ರಾಮದ ಖಂಡಿಗ ಸರ್ಕಾರಿ ಶಾಲೆಯ ಬಳಿಯ ನಿವಾಸಿ ಮೊಹಮ್ಮದ್ ಅಶ್ರಫ್ (40) ಎಂದು ಗುರುತಿಸಲಾಗಿದೆ. ಪೊಲೀಸರ ಪ್ರಕಾರ, ಈತ ತನ್ನ ಮನೆಯಲ್ಲಿ ಅಕ್ರಮವಾಗಿ ಯೂರಿಯಾ ಗೊಬ್ಬರವನ್ನು ಸಂಗ್ರಹಿಸಿ ದಂಧೆ ನಡೆಸುತ್ತಿದ್ದ ಎನ್ನಲಾಗಿದೆ. ತನಿಖೆಯಿಂದ ಕೇಂದ್ರ ಸರ್ಕಾರವು ವಿವಿಧ ಕೃಷಿ ಸಾಲ ಸಹಕಾರ ಸಂಘಗಳು ಮತ್ತು ಸಂಘಗಳ ಮೂಲಕ ಬೇನಾಮಿ ರೈತರ ಹೆಸರುಗಳನ್ನು ಬಳಸಿಕೊಂಡು ರೈತರಿಗೆ ಪೂರೈಸಿದ ಸಬ್ಸಿಡಿ ಯೂರಿಯಾವನ್ನು ಈ ಜಾಲವು ಖರೀದಿಸಿದೆ. ನಂತರ ಸರ್ಕಾರಿ ಗುರುತುಗಳನ್ನು ಹೊಂದಿರುವ ಅಧಿಕೃತ ಹಳದಿ ಚೀಲಗಳಿಂದ ರಸಗೊಬ್ಬರವನ್ನು ತೆಗೆದು 'ತಾಂತ್ರಿಕ



ಉದಯವಾಹಿನಿ ಚಿತ್ರ

ದರ್ಜೆ ಎಂದು ಲೇಬಲ್ ಮಾಡಲಾದ 50 ಕೆಜಿ ಬಿಳಿ ಚೀಲಗಳಲ್ಲಿ ಮರು ಪ್ಯಾಕ್ ಮಾಡಲಾಗಿದೆ. ಮರು ಪ್ಯಾಕ್ ಮಾಡಲಾದ ರಸಗೊಬ್ಬರವನ್ನು ಕೇರಳದ ಪ್ಲೈವುಡ್ ಕಾರ್ಖಾನೆಗಳಿಗೆ ಅಕ್ರಮವಾಗಿ ಸಾಗಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಒಟ್ಟು, 642 ಚೀಲ ರಸಗೊಬ್ಬರ ಮತ್ತು ಸಾಗಣೆಗೆ ಬಳಸಲಾಗಿದ್ದ ನೋಂದಣಿ ಸಂಖ್ಯೆ ಎಂ-11-ಒ-6017 ಹೊಂದಿರುವ ಟಾಟಾ ಟ್ರಕ್ ಅನ್ನು ವಶಕ್ಕೆ ಪಡೆಯಲಾಗಿದೆ.

### ಯೂರಿಯಾ ಗೊಬ್ಬರ ಪೊಲೀಸರು ವಶ

> ದಾಳಿಯ ಸಮಯದಲ್ಲಿ, ಅಕ್ರಮವಾಗಿ ದಾಸ್ತಾನು ಮಾಡಿದ್ದ 50 ಕೆಜಿ ತೂಕದ 342 ಚೀಲ ಯೂರಿಯಾ ಗೊಬ್ಬರವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಇದಲ್ಲದೆ, ತುಮಕೂರು ಮತ್ತು ಹಾಸನ ಪ್ರದೇಶಗಳಿಂದ ಚೀಲಕ್ಕೆ 300 ರೂ.ಗಳಂತೆ ಖರೀದಿಸಿದ ನಂತರ ಟ್ರಕ್ನಲ್ಲಿ ಸಾಗಿಸಲಾಗುತ್ತಿದ್ದ 300 ಚೀಲ ಯೂರಿಯಾವನ್ನು ವಶಪಡಿಸಿಕೊಳ್ಳಲಾಗಿದೆ.

# ದೇಶದ ಆಧ್ಯಾತ್ಮಿಕ ಶಕ್ತಿಯಿಂದ ಸಾಂಸ್ಕೃತಿಕ ಪರಂಪರೆ ಜೀವಂತ

• ಉದಯವಾಹಿನಿ ಸುಳ್ಯ

ಭಾರತ ದೇಶದ ಮೌಲ್ಯವೇ ಆಧ್ಯಾತ್ಮಿಕದಲ್ಲಿದೆ. ದೇಶದ ಆಧ್ಯಾತ್ಮಿಕ ಶಕ್ತಿ ಸಮೃದ್ಧವಾಗಿರುವ ವಿಶ್ವಕ್ಕೆ ಶಾಂತಿ ಮತ್ತು ನೆಮ್ಮದಿಯ ಮಾರ್ಗ ಸೂಚಿಸುತ್ತದೆ. ಇದರಿಂದ ದೇಶದ ಸಾಂಸ್ಕೃತಿಕ ಪರಂಪರೆ ಜೀವಂತವಾಗಿದೆ ಎಂದು ಒಡಿಯೂರು ಗುರುದೇವಾನಂದ ಸ್ವಾಮೀಜಿ ಹೇಳಿದರು.ಅವರು ದೊಡ್ಡತೋಟದ ಶ್ರೀ ರಾಮ ಭಜನಾ ಮಂದಿರದ ಜೀರ್ಣೋದ್ಧಾರ ಪುನರ್ ಪ್ರತಿಷ್ಠಾ ಮಹೋತ್ಸವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು. ಭಜನಾ ಮಂದಿರಗಳು ಜನರನ್ನು ಒಗ್ಗೂಡಿಸುವ ಕಾರ್ಯ ಮಾಡುತ್ತದೆ.

ಭಜನೆಯಿಂದ ಭಕ್ತಿಯ ಒಳಗಣ್ಣು ತೆರೆಯಲು ಸಾಧ್ಯ. ಪ್ರತಿಯೊಬ್ಬರಲ್ಲಿಯೂ ತ್ಯಾಗಮನೋಭಾವನೆ ಇದ್ದಾಗ ಮಾತ್ರ ಜನ್ಮ ಸಾರ್ಥಕವಾಗಲು ಸಾಧ್ಯ ಎಂದು ಹೇಳಿದರು. ಭಜನಾ ಮಂದಿರದ ಆಡಳಿತ ಸಮಿತಿ ಅಧ್ಯಕ್ಷ ಮಹೇಶ್ ಮೇರ್ಕಜೆ, ಉಪಾಧ್ಯಕ್ಷ ದಾಮೋದರ ಕೆ, ಕಾರ್ಯದರ್ಶಿ ಪ್ರವೀಣ್ ಎಸ್.ರಾವ್, ಜತೆ ಕಾರ್ಯದರ್ಶಿ ಹರೀಶ್ ಜಿ, ಕೋಶಾಧಿಕಾರಿ ಮಾಧವ ಎನ್, ಜತೆ ಕೋಶಾಧಿಕಾರಿ ಶರತ್ ಕೆ, ಉಪಸ್ಥಿತರಿದ್ದರು. ಜೂ. 9 ರಂದು ಸಂಜೆ ಅಘೋರ ಹೋಮ ಮತ್ತು ವಾಸ್ತುಪೂಜೆಯು ನಡೆಯಿತು. ಜೂನ್. 10 ರಂದು ಬೆಳಗ್ಗೆ ಗಣಪತಿ ಹವನವಾಗಿ ಪೂರ್ವಾಹ್ನ ಗಂಟೆ 9-33 ರ ಶುಭ ಮುಹೂರ್ತದಲ್ಲಿ ಛಾಯಾಬಿಂಬ ಪ್ರತಿಷ್ಠೆಯಾಯಿತು. ವೇದ



ಮೂರ್ತಿ ರಾಮಚಂದ್ರ ಶಬರಾಯರವರ ಮಾರ್ಗದರ್ಶನದಲ್ಲಿ ಶ್ರೀಹರಿ ಯಳಚಿತ್ತಾಯರವರ ನೇತೃತ್ವದಲ್ಲಿ ಮಂದಿರದ ಪುನರ್ ಪ್ರತಿಷ್ಠಾ ಕಾರ್ಯ ನಡೆಯಿತು.

> ಲೋಕಕಲ್ಯಾಣಾರ್ಥವಾಗಿ ಹಮ್ಮಿಕೊಂಡ ಸಾರ್ವಜನಿಕ ಶ್ರೀ ರಾಮ ತಾರಕ ಯಜ್ಞವನ್ನು ಸ್ವಾಮೀಜಿಯವರ ಉಪಸ್ಥಿತಿಯಲ್ಲಿ ಪೂರ್ಣಾಹುತಿ ಮಾಡಿ ಪ್ರಸಾದ ನೀಡಲಾಯಿತು. ಬೆಳಗ್ಗೆ ಸ್ಥಳೀಯ ವಿವಿಧ ಭಜನಾ ಮಂಡಳಿಯ ವರಿಂದ ಭಜನಾ ಸೇವೆ ನಡೆಯಿತು.

# ಡಾ. ರಾಜಶೇಖರ ದ್ಯಾಬೇರಿ ಜಿಲ್ಲಾ ಆಸ್ಪತ್ರೆಗೆ ಭೇಟಿ, ಪರಿಶೀಲನೆ

• ಉದಯವಾಹಿನಿ ವಿಜಯಪುರ,

ಜಿಲ್ಲೆಯ ಜನರ ಬಹುಕಾಲದ ಕನಸಾಗಿರುವ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆಯೊಂದು ನಡೆದಿದೆ. ರಾಜ್ಯ ಸರ್ಕಾರದ ವಿಶೇಷಾಧಿಕಾರಿ ಡಾ. ರಾಜಶೇಖರ್ ದ್ಯಾಬೇರಿ ಅವರು ವಿಜಯಪುರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಅಗತ್ಯವಿರುವ ಮೂಲ ಸೌಕರ್ಯ, ಆಸ್ಪತ್ರೆಯ ಸೌಲಭ್ಯಗಳು ಹಾಗೂ ಲಭ್ಯವಿರುವ ಸಂಪನ್ಮೂಲಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿದರು. ಪರಿಶೀಲನೆ ವೇಳೆ ವಿಜಯಪುರ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನಾ ಹೋರಾಟ ಸಮಿತಿಯ ಸದಸ್ಯರು ವಿಶೇಷಾಧಿಕಾರಿಗಳನ್ನು ಭೇಟಿ ಮಾಡಿ ಜಿಲ್ಲೆಯ ಜನರ ಬಹುವರ್ಷಗಳ ಬೇಡಿಕೆ, ವೈದ್ಯಕೀಯ ಶಿಕ್ಷಣದ ಅಗತ್ಯತೆ ಹಾಗೂ ಜಿಲ್ಲೆಯ ಆರೋಗ್ಯ ಕ್ಷೇತ್ರದ ಸವಾಲುಗಳ ಕುರಿತು ವಿವರವಾದ ಮಾಹಿತಿಯನ್ನು ನೀಡಿದರು.

> ಆಸ್ಪತ್ರೆಯ ವಿವಿಧ ವಿಭಾಗಗಳನ್ನು ಪರಿಶೀಲಿಸಿ, ಅಗತ್ಯ ಮಾಹಿತಿಯನ್ನು ಸಂಗ್ರಹಿಸಿದರು. ಪರಿಶೀಲನೆ ವರದಿಯನ್ನು ಶೀಘ್ರದಲ್ಲೇ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಅವರು ಭರವಸೆ ನೀಡಿದರು.
> -ವಿಶೇಷಾಧಿಕಾರಿ ಡಾ. ರಾಜಶೇಖರ ದ್ಯಾಬೇರಿ

ಸಮಿತಿಯ ಸದಸ್ಯರು ವಿಜಯಪುರವು ಉತ್ತರ ಕರ್ನಾಟಕದ ಪ್ರಮುಖ ಜಿಲ್ಲೆಯಾಗಿದ್ದರೂ ಇಲ್ಲಿಯವರೆಗೆ ಸರ್ಕಾರಿ ವೈದ್ಯಕೀಯ ಕಾಲೇಜು



ಸ್ಥಾಪನೆಯಾಗದಿರುವುದು ಜಿಲ್ಲೆಯ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನ್ಯಾಯವಾಗಿದೆ ಎಂದು ಅಭಿಪ್ರಾಯಪಟ್ಟರು.

ವೈದ್ಯಕೀಯ ಶಿಕ್ಷಣ ಪಡೆಯಲು ವಿದ್ಯಾರ್ಥಿಗಳು ದೂರದ ಜಿಲ್ಲೆಗಳಿಗೆ ತೆರಳಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದು, ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮೇಲೆ ಹೆಚ್ಚುವರಿ ಆರ್ಥಿಕ ಹೊರೆ ಬೀಳುತ್ತಿದೆ ಎಂದು ತಿಳಿಸಿದರು.

ಇದಲ್ಲದೆ, ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯಾದಲ್ಲಿ ಜಿಲ್ಲೆಯ ಆರೋಗ್ಯ ಸೇವೆಗಳ ಗುಣಮಟ್ಟ ಹೆಚ್ಚುವುದರ ಜೊತೆಗೆ ತಜ್ಞ ವೈದ್ಯರ ಲಭ್ಯತೆ, ಆಧುನಿಕ ಚಿಕಿತ್ಸಾ ಸೌಲಭ್ಯಗಳು ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗಲಿವೆ ಎಂದು ಹೋರಾಟ ಸಮಿತಿ ಪ್ರತಿಪಾದಿಸಿತು.

# ವನ ಮಹೋತ್ಸವ ಆಚರಣೆ

• ಉದಯವಾಹಿನಿ ಜಮಖಂಡಿ, :

ತಾಲ್ಲೂಕು ಆಡಳಿತ ಸೌಧ ಆವರಣದಲ್ಲಿ ಜಿಲ್ಲಾ ದಸ್ತೂ ಬರಹಗಾರರ ಕ್ಷೇಮಾಭಿವೃದ್ಧಿ ಸಂಘ ಜಮಖಂಡಿ ಹಾಗೂ ಲಯನ್ಸ್ ಕ್ಲಬ್ ಜಮಖಂಡಿಯವರ ಸಂಯುಕ್ತ ಆಶ್ರಯದಲ್ಲಿ ವನ ಮಹೋತ್ಸವವನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ದಸ್ತೂ ಬರಹಗಾರರು ಹಾಗೂ ಅವರ ಸಹಾಯಕರು ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಯ ಮಹತ್ವವನ್ನು ಸಾರಿದರು. ಹಸಿರು ಪರಿಸರ ನಿರ್ಮಾಣ, ಪರಿಸರ ಸಮತೋಲನ ಕಾಪಾಡುವುದು ಹಾಗೂ ಮರಗಳ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಮೋಹನ್ ಸಬರದ, ಪರಿಸರ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಇಂದಿನ ದಿನಗಳಲ್ಲಿ ಪರಿಸರ ಮಾಲಿನ್ಯ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಕನಿಷ್ಠ ಒಂದು ಸಸಿಯನ್ನಾದರೂ ನೆಟ್ಟು ಅದನ್ನು ಪೋಷಿಸುವ ಸಂಕಲ್ಪ ಮಾಡಬೇಕು. ಮರಗಳು ಮಾನವ ಜೀವನದ ಅವಿಭಾಜ್ಯ ಅಂಗವಾಗಿದ್ದು, ಮುಂದಿನ ಪೀಳಿಗೆಗೆ ಉತ್ತಮ ಪರಿಸರವನ್ನು ನೀಡಲು ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

# ಪ್ರತಿ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕು ಇದೆ!

## ಮಕ್ಕಳು ದುಡಿಮೆಯಲ್ಲಿ ತೊಡಗಿಸಿಕೊಳ್ಳುವುದಕ್ಕಿಂತ ಶಿಕ್ಷಣ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು.

• ಉದಯವಾಹಿನಿ ಧಾರವಾಡ,

ಬಾಲಕಾರ್ಮಿಕ ನಿಷೇಧ ಮತ್ತು ನಿಯಂತ್ರಣ ಕಾಯ್ದೆ ಜಾರಿಯಾದ ನಂತರ 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ಯೋಗಕ್ಕೆ ನೇಮಿಸಬಾರದು. ಮಕ್ಕಳನ್ನು ಹೋಟೆಲ್, ಗ್ಯಾರೇಜ್ ಹಾಗೂ ಇತರೆ ಕೆಲಸಗಳಿಗೆ ನೇಮಿಸುವುದು ಕಾನೂನುಬಾಹಿರವಾಗಿದ್ದು, ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು.ಅವರು ಧಾರವಾಡ ರಾಮನಗರದ ಆದರ್ಶ ಬಾಲಿಕಾ ಪ್ರೌಢ ಶಾಲೆಯಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘ, ಶಾಲಾ ಶಿಕ್ಷಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟದ ಇವರ ಸಂಯುಕ್ತ ಆಶ್ರಯದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ, ಪ್ರತಿಜ್ಞಾವಿಧಿ ಬೋಧಿಸಿ, ಮಾತನಾಡಿದರು.

ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕು ಇದ್ದು, ಪೋಷಕರು ಹಾಗೂ ಸಮಾಜವು ಮಕ್ಕಳನ್ನು ಶಾಲೆಗೆ ಕಳುಹಿಸುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ಸಹಕರಿಸಬೇಕು. ಮಕ್ಕಳು



ಉದಯವಾಹಿನಿ ಚಿತ್ರ

ಈ ದೇಶದ ಅಭಿವೃದ್ಧಿಯ ಪಥಗಳಾಗಿದ್ದು, ಅವರಿಗೆ ಉತ್ತಮ ಶಿಕ್ಷಣ ಮತ್ತು ಸುರಕ್ಷಿತ ವಾತಾವರಣ ಒದಗಿಸುವುದು ಎಲ್ಲರ ಜವಾಬ್ದಾರಿಯಾಗಿದೆ. ದುಡಿಮೆ ಮಾಡುತ್ತಿರುವ ಮಕ್ಕಳು ಕಂಡು ಬಂದಲ್ಲಿ **ಮಕ್ಕಳ ಸಹಾಯವಾಣಿ ಸಂಖ್ಯೆ:** 1098 ಗೆ ಕರೆ ಮಾಡಿ, ಮಕ್ಕಳನ್ನು ರಕ್ಷಣೆ ಮಾಡಲು ಸಹಾಯವಾಗುತ್ತದೆ ಎಂದು ಅವರು ಹೇಳಿದರು. ಭಾರತೀಯ ಶಿಕ್ಷಣ ಪ್ರಸಾರ ಸಮಿತಿ ಅಧ್ಯಕ್ಷ ವಿಜಯಾನಂದ ಶೆಟ್ಟಿ ಅವರು ಮಾತನಾಡಿ, ಮಕ್ಕಳು ದೇಶದ ಭವಿಷ್ಯ. ಅವರಿಗೆ ಶಿಕ್ಷಣ, ಆರೋಗ್ಯ ಮತ್ತು ಸುರಕ್ಷತೆಯನ್ನು ಒದಗಿಸಬೇಕು. ಆದರೆ ಕೆಲ ಮಕ್ಕಳು ಬಡತನ ಹಾಗೂ ಇತರ ಕಾರಣಗಳಿಂದ ಶಾಲೆಗೆ ಹೋಗದೆ ದುಡಿಮೆಯಲ್ಲಿ ತೊಡಗುತ್ತಾರೆ. 14 ವರ್ಷದೊಳಗಿನ ಮಕ್ಕಳನ್ನು ಕೆಲಸಕ್ಕೆ ಹಾಕುವುದು ಕಾನೂನುಬಾಹಿರ. ಮಕ್ಕಳಿಗೆ ದುಡಿಮೆ ಬೇಡ, ಶಿಕ್ಷಣ ಬೇಕು. ಪ್ರತಿಯೊಬ್ಬ ಮಗುವೂ ಶಾಲೆಗೆ ಹೋಗಿ ತನ್ನ ಕನಸುಗಳನ್ನು ನನಸು ಮಾಡಿಕೊಳ್ಳುವ ಅವಕಾಶ ಪಡೆಯಬೇಕು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಅಂಗವಾಗಿ ಆಯೋಜಿಸಿದ್ದ ಪ್ರಬಂಧ, ಭಾಷಣ ಹಾಗೂ ಚಿತ್ರಕಲೆ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಜಿಲ್ಲಾ ಕಾರ್ಮಿಕ ಅಧಿಕಾರಿ ಅಕ್ಬರ್ ಹಬೀಬಸಾಬ ಮುಲ್ಲಾ ಅವರು ಸ್ವಾಗತಿಸಿದರು. ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸಂಘದ ಯೋಜನಾ ನಿರ್ದೇಶಕ ಬಸವರಾಜ ಸಿ. ಪಂಚಾಕ್ಷರಿಮಠ ನಿರೂಪಿಸಿದರು. ಹಿರಿಯ ಕಾರ್ಮಿಕ ನಿರೀಕ್ಷಕ ಅಕ್ರಮ್ ಅಲ್ಲಾಪುರ ಅವರು ವಂದಿಸಿದರು.

> ಸರ್ಕಾರವು ಮಕ್ಕಳ ಶಿಕ್ಷಣಕ್ಕೆ ಉತ್ತೇಜನ ನೀಡಲು ಶಾಲೆಗಳಲ್ಲಿ ಉಚಿತ ಪಠ್ಯಪುಸ್ತಕ, ಸಮವಸ್ತ್ರ, ಹಾಲು ಹಾಗೂ ಮಧ್ಯಾಹ್ನದ ಬಿಸಿಯೂಟ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಒದಗಿಸುತ್ತಿದೆ. ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಿ ಸರ್ಕಾರದ ಸೌಲಭ್ಯಗಳ ಪ್ರಯೋಜನ ಪಡೆಯಬೇಕು ಎಂದು ಅವರು ಹೇಳಿದರು.
> -ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ.

> ಮಕ್ಕಳು ದುಡಿಮೆಯಲ್ಲಿ ತೊಡಗಿಸಿಕೊಳ್ಳುವುದಕ್ಕಿಂತ ಶಿಕ್ಷಣ ಪಡೆದು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ಶಿಕ್ಷಣದ ಮೂಲಕ ಉತ್ತಮ ಜ್ಞಾನ, ಕೌಶಲ್ಯಗಳನ್ನು ಗಳಿಸಿ ಮುಂದಿನ ದಿನಗಳಲ್ಲಿ ಉನ್ನತ ಹುದ್ದೆಗಳನ್ನು ಅಲಂಕರಿಸುವ ಅವಕಾಶಗಳನ್ನು ಪಡೆದುಕೊಳ್ಳಬಹುದು ಎಂದು ಅವರು ತಿಳಿಸಿದರು.
> -ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ.

### ಕಡ್ಡಾಯವಾಗಿ ಶಿಕ್ಷಣ ಪಡೆಯುವ ಮೂಲಕ ತಮ್ಮ ಭವಿಷ್ಯ

> ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ. ಎಂ. ಬಡಿಗೇರ ಅವರು ಮಾತನಾಡಿ, 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ರೀತಿಯ ದುಡಿಮೆಗೆ ತೊಡಗಿಸಬಾರದು. ಮಕ್ಕಳು ಕಡ್ಡಾಯವಾಗಿ ಶಿಕ್ಷಣ ಪಡೆಯುವ ಮೂಲಕ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

## ಮಿನಿ ನ್ಯೂಸ್

### ಲಮಾಣಿ ವಸತಿ ಗೃಹಕ್ಕೆ ರಾಜಶೇಖರ್ ಅಧ್ಯಕ್ಷರಾಗಿ ಅವಿರೋಧ ಆಯ್ಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿಂಚೋಳಿ;

ಪಟ್ಟಣದ ಚಂದಾಪೂರದ ಗಂಗೂನಾಯಕ ತಾಂಡದ ಲಮಾಣಿ ವಸತಿ ಗೃಹಕ್ಕೆ ನೂತನವಾಗಿ ರಾಜಶೇಖರ ಚವ್ಹಾಣ ಅವರಿಗೆ ಲಮಾಣಿ ಸಮಾಜದ ಮುಖಂಡರು ಸರ್ವಾನುಮತದಿಂದ ಎಲ್ಲರ ಸಮ್ಮುಖದಲ್ಲೇ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೋಳಿಸಲಾಗಿದೆ ಎಂದು ರಾಜು ಪವ್ಹಾರ್ ತಿಳಿಸಿದ್ದಾರೆ.

ಚಂದಾಪೂರದ ಲಮಾಣಿ ವಸತಿ ಗೃಹದಲ್ಲಿ ಹಾಲಿ ಅಧ್ಯಕ್ಷ ರಾಜು ಪವ್ಹರ ಅಧ್ಯಕ್ಷತೆಯಲ್ಲಿ ಸಮಾಜದ ಮುಖಂಡರ ಸಮ್ಮುಖದಲ್ಲಿ ಕರೆದ ಸಭೆಯಲ್ಲಿ ಮುಂದಿನ ಮೂರು ವರ್ಷಕ್ಕೆ ರಾಜಶೇಖರ್ ಚವ್ಹಾಣ ಅವರಿಗೆ ಅವಿರೋಧವಾಗಿ ಆಯ್ಕೆಗೋಳಿಸಿದರು,ರಾಜು ಪವ್ಹಾರ್ ಅಧ್ಯಕ್ಷ ಸ್ಥಾನವನ್ನು ರಾಜಶೇಖರ್ ಚವ್ಹಾಣ ಅವರಿಗೆ ಅಧಿಕಾರ ಹಸ್ತಾಂತರ ಮಾಡಿ ಸಮಾಜದ ವಸತಿ ನಿಲಯವು ಚನ್ನಾಗಿ ನಡೆಸಿಕೋಂಡು ಸಮಾಜದ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಮಾಡಿ ಅವರ ಉನ್ನತ ಶಿಕ್ಷಣಕ್ಕೆ ಒತ್ತು ನೀಡಬೇಕು ಎಂದರು.

ಈ ಸಂದರ್ಭದಲ್ಲಿ: ಅಶೋಕ ಚವ್ಹಾಣ,ವಿಜಯಕುಮಾರ ರಾಠೋಡ,ಪ್ರೇಮಸಿಂಗ್ ಜಾಧವ,ಡಿ.ಕೆ ಚವ್ಹಾಣ,ರಾಮಶೇಟ್ಟಿ ಪವ್ಹರ,ತುಕ್ಕಾರಾಮ ಪವ್ಹಾರ್,ಸಂಜುಕುಮಾರ ಚವ್ಹಾಣ,ಭೀಮರಾವ ರಾಠೋಡ್,ಶಂಕರ ರಾಠೊಡ್,ಗೋಪಾಲ ಜಾಧವ ಸೇರಿದಂತೆ ಸಮಾಜದ ಅನೇಕ ಮುಖಂಡರು ಇದ್ದರು.

### ರಸ್ತೆ ತಡೆ ಹೋರಾಟದ ಎಚ್ಚರಿಕೆ !

• ಉದಯವಾಹಿನಿ ಜಮಖಂಡಿ

ತಾಲ್ಲೂಕಿನ ಸಾವಳಗಿ ಗ್ರಾಮದ ಇಂದ್ರಾನಗರ ಕಾಲೋನಿಯಲ್ಲಿ ಲಘು ವಾಹನಗಳ ಅಕ್ರಮ ಹಾಗೂ ನಿಯಂತ್ರಣರಹಿತ ಸಂಚಾರದಿಂದ ಸಾರ್ವಜನಿಕರ ಜೀವನ ಅಸ್ತವ್ಯಸ್ತಗೊಂಡಿದ್ದು, ಸ್ಥಳೀಯ ನಿವಾಸಿಗಳು ತೀವ್ರ ಆತಂಕ ಮತ್ತು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಲೋನಿಯ ಕಿರಿದಾದ ರಸ್ತೆಯಲ್ಲಿ ಪರವಾನಗಿ ಇಲ್ಲದಿದ್ದರೂ ನಿತ್ಯ ನೂರಾರು ಲಘು ವಾಹನಗಳು ಸಂಚರಿಸುತ್ತಿದ್ದು, ವಾಹನ ಚಾಲಕರು ಅತಿವೇಗ ಹಾಗೂ ನಿರ್ಲಕ್ಷ್ಯದಿಂದ ವಾಹನ ಚಲಾಯಿಸುತ್ತಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಇದರಿಂದ ಶಾಲಾ ಮಕ್ಕಳು, ವೃದ್ಧರು, ಮಹಿಳೆಯರು ಹಾಗೂ ಪಾದಚಾರಿಗಳು ಜೀವಭಯದಲ್ಲೇ ರಸ್ತೆ ಬಳಸುವಂತಾಗಿದೆ. ವಾಹನಗಳ ಅತಿಯಾದ ಓಡಾಟದಿಂದ ರಸ್ತೆಗಳು ಹದಗೆಟ್ಟಿದ್ದು, ಕೆಲ ಮನೆಗಳಿಗೆ ಹಾನಿಯಾಗಿರುವುದಲ್ಲದೆ ಸಾರ್ವಜನಿಕ ಆಸ್ತಿಗೂ ನಷ್ಟ ಉಂಟಾಗಿದೆ ಎಂದು ನಿವಾಸಿಗಳು ದೂರಿದ್ದಾರೆ. ಹಲವು ಬಾರಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ''ಈ ರಸ್ತೆ ಕಿರಿದಾಗಿದ್ದು, ಭಾರೀ ಹಾಗೂ ಲಘು ವಾಣಿಜ್ಯ ವಾಹನಗಳ ಸಂಚಾರಕ್ಕೆ ಸೂಕ್ತವಲ್ಲ. ಆದರೂ ನಿಯಮಗಳನ್ನು ಗಾಳಿಗೆ ತೂರಿ ವಾಹನಗಳು ಓಡಾಡುತ್ತಿವೆ. ಯಾವುದೇ ಕ್ಷಣದಲ್ಲಿ ದೊಡ್ಡ ಅನಾಹುತ ಸಂಭವಿಸುವ ಸಾಧ್ಯತೆ ಇದೆ'' ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

### ವ್ಯಕ್ತಿಯ ಮೇಲೆ ಭೀಕರ ಮಾರಣಾಂತಿಕ ಹಲ್ಲೆ

• ಉದಯವಾಹಿನಿ ಯಾದಗಿರಿ

ತಾಲ್ಲೂಕಿನ ಬಾಚವಾರ ಗ್ರಾಮದಲ್ಲಿ ನಡೆದಿರುವ ಕುಟುಂಬ ಕಲಹವೊಂದು ಇದೀಗ ಭೀಕರ ಸ್ವರೂಪ ಪಡೆದುಕೊಂಡಿದ್ದು, ವ್ಯಕ್ತಿಯೊಬ್ಬರ ಮೇಲೆ ನಡೆದಿರುವ ಮಾರಣಾಂತಿಕ ಹಲ್ಲೆ ಪ್ರಕರಣ ಗ್ರಾಮಸ್ಥರಲ್ಲಿ ಆತಂಕ ಹಾಗೂ ಆಕ್ರೋಶದ ವಾತಾವರಣವನ್ನು ನಿರ್ಮಿಸಿದೆ.

ಗ್ರಾಮದ ನಿವಾಸಿ ಭೀಮರಾಯ ನಾಯ್ಕಲ್ ಎಂಬುವರ ಮೇಲೆ ಅವರದೇ ಕುಟುಂಬದ ಸದಸ್ಯರಾದ ಪತ್ನಿ, ಅತ್ತೆ ಹಾಗೂ ಇಬ್ಬರು ಪುತ್ರರು ಸೇರಿಕೊಂಡು ಏಕಾಏಕಿ ಹಲ್ಲೆ ನಡೆಸಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ತಡರಾತ್ರಿ ಸಂಭವಿಸಿದ ಈ ಘಟನೆ ವೇಳೆ ಭೀಮರಾಯ ನಾಯ್ಕಲ್ ಅವರಿಗೆ ತಲೆ, ಮುಖ ಹಾಗೂ ದೇಹದ ವಿವಿಧ ಭಾಗಗಳಲ್ಲಿ ತೀವ್ರ ಸ್ವರೂಪದ ಗಾಯಗಳಾಗಿದ್ದು, ಅಪಾರ ಪ್ರಮಾಣದ ರಕ್ತಸ್ರಾವ ಉಂಟಾಗಿದೆ.

ಹಲ್ಲೆಯಿಂದ ಅಸ್ವಸ್ಥಗೊಂಡ ಅವರನ್ನು ಸ್ಥಳೀಯರು ಹಾಗೂ ಸಂಬಂಧಿಕರು ತಕ್ಷಣವೇ ರಕ್ಷಿಸಿ ತುರ್ತು ಚಿಕಿತ್ಸೆಗಾಗಿ ಯಾದಗಿರಿ ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

### ಪ್ರತಿಯೊಂದು ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದೆ:ಸಜ್ಜನಶೆಟ್ಟಿ

• ಉದಯವಾಹಿನಿ ಸೈದಾಪುರ:



ಉದಯವಾಹಿನಿ ಚಿತ್ರ

ಬಾಲಕಾರ್ಮಿಕ ಪದ್ಧತಿ ಸಮಾಜಕ್ಕೆ ಒಂದು ಶಾಪವಾಗಿದ್ದು, ಪ್ರತಿಯೊಂದು ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದೆ.

ಮಕ್ಕಳನ್ನು ದುಡಿಮೆಗೆ ತಳ್ಳದೆ ಶಾಲಾ-ಕಾಲೇಜುಗಳಿಗೆ ಕಳುಹಿಸುವುದು ಪ್ರತಿಯೊಬ್ಬ ಪೋಷಕರ ಮತ್ತು ಸಮಾಜದ ಜವಾಬ್ದಾರಿಯಾಗಿದೆ ಎಂದು ಪ್ರಾಂಶುಪಾಲ ಹಂಪಣ್ಣ ಸಜ್ಜನಶೆಟ್ಟಿ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾ ವರ್ಧಕ ವಾಣಿಜ್ಯ ಮತ್ತು ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ಜರುಗಿದ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರಮಾಣ ವಚನ ಸ್ವೀಕರಿಸಿ ಮಾತನಾಡಿದರು. ಪ್ರಜ್ಞಾವಂತರಾದ ನಾವುಗಳು ನಮ್ಮ ಸುತ್ತಮುತ್ತಲ್ಲಿ ಬಾಲಕಾರ್ಮಿಕರು ಕಂಡು ಬಂದಲ್ಲಿ ನೇಮಿಸಿಕೊಂಡ ಮಾಲೀಕರು ಹಾಗೂ ಪೋಷಕರಿಗೆ ತಿಳುವಳಿಕೆ ಹೇಳಿ ಮಗುವನ್ನು ಶಾಲೆಗೆ ಸೇರಿಸುವ ಕೆಲಸ ಮಾಡಬೇಕು.

ಈ ವಿದಧ ಪ್ರಮಾಣ ಮಾಡುವ ಮೂಲಕ ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಪ್ರಯತ್ನ ಮಾಡೋಣ ಎಂದು ಹೇಳಿದರು. ಬಾಲಕಾರ್ಮಿಕ ಪದ್ಧತಿಯ ದುಷ್ಪರಿಣಾಮಗಳು, ಮಕ್ಕಳ ಹಕ್ಕುಗಳು ಹಾಗೂ ಶಿಕ್ಷಣದ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

ವಿದ್ಯಾರ್ಥಿಗಳಿಗೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸಕ ಭೀಮರೆಡ್ಡಿ ಪ್ರಮಾಣ ವಚನ ಬೋಧಿಸಿದರು. ಡಿ.ಎಲ್.ಇಡಿ ಕಾಲೇಜಿನ ಪ್ರಾಂಶುಪಾಲ ಕರಬಸಯ್ಯ ದಂಡಿಗಿಮಠ, ಉಪನ್ಯಾಸಕರಾದ ಭೀಮರೆಡ್ಡಿ, ಶ್ವೇತಾ ರಾಘವೇಂದ್ರ, ಪೂರಿ. ಸೌಭಾಗ್ಯ. ಲಕ್ಷ್ಮೀ, ಮೇಘಾ, ವಿದ್ಯಾರ್ಥಿಗಳು ಸೇರಿದಂತೆ ಇತರರು ಪ್ರಮಾಣ ವಚನ ಸ್ವೀಕರಿಸಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ನಿಮ್ಮಿಂದ ಸ್ವಲ್ಪ ಉದಾಸೀನತೆಯೂ ಸಮಸ್ಯೆಯನ್ನು ಉಲ್ಬಣಗೊಳಿಸುವುದರಿಂದ ಸರಿಯಾದ ಸಲಹೆ ತೆಗೆದುಕೊಳ್ಳಿ. ನೀವು ಇಂದು ಪ್ರೀತಿ ಮಾಲಿನ್ಯವನ್ನು ಹರಡುತ್ತೀರಿ. ಇಂದು ನಿಮ್ಮ ಕೆಲಸದ ಸ್ಥಳದಲ್ಲಿ ಇದ್ದಕ್ಕಿದ್ದಂತೆ ನಿಮ್ಮ ಕೆಲಸದ ತನಿಖೆ ಮಾಡಬಹುದು.

**ವೃಷಭ** ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಪ್ರಣಯ ರೋಮಾಂಚಕಾರಿಯಾಗಿರುತ್ತದೆ ಆದ್ದರಿಂದ ನೀವು ಪ್ರೀತಿಸುವವರನ್ನು ಸಂಪರ್ಕಿಸಿ ಮತ್ತು ದಿನದ ಅತ್ಯುತ್ತಮ ಲಾಭ ಪಡೆಯಿರಿ. ನಿಮ್ಮ ಪಾಲುದಾರರನ್ನು ಲಘುವಾಗಿ ತೆಗೆದುಕೊಳ್ಳಬೇಡಿ.

**ಮಿಥುನ** ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು.

**ಕರ್ಕಾಟಕ** ಎಲ್ಲರನ್ನೂ ನಿಮ್ಮ ದೊಡ್ಡ ಪಾರ್ಟಿಗೆ ಕರೆಯಿರಿ ? ನೀವು ಇಂದು ಆ ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ. ನಿಮ್ಮ ಸಂಗಾತಿಯ ಅನುಪಸ್ಥಿತಿ ಕಾಡುವ ಸಾಧ್ಯತೆಯಿದೆ

**ಸಿಂಹ** ದಿನದಆರಂಭವು ಚೆನ್ನಾಗಿ ಆಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ನಿಮ್ಮ ಪತ್ನಿಯ ಸಾಧನೆಯನ್ನು ಶ್ಲಾಘಿಸಿ ಮತ್ತು ಅವರ ಯಶಸ್ಸು ಮತ್ತು ಉತ್ತಮ ಭವಿಷ್ಯವನ್ನು ಆನಂದಿಸಿ.

**ಕನ್ಯಾ** ಹೊರಾಂಗಣ ಕ್ರೀಡೆ ನಿಮ್ಮನ್ನು ಸೆಳೆಯುತ್ತದೆ–ಧ್ಯಾನ ಮತ್ತು ಯೋಗ ಲಾಭ ತರುತ್ತವೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

**ತುಲಾ** ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ ಮತ್ತು ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ.

**ವೃಶ್ಚಿಕ** ಒತ್ತಡದ ದಿನದ ಹೊರತಾಗಿಯೂ ಆರೋಗ್ಯ ಪರಿಪೂರ್ಣವಾಗಿರುತ್ತದೆ. ಹಣದ ಚಲನೆ ದಿನವಿಡೀ ಮುಂದುವರಿಯುತ್ತದೆ ಮತ್ತು ದಿನದ ಅಂತ್ಯದ ನಂತರ ನೀವು ಉಳಿಸಲು ಸಾಧ್ಯವಾಗುತ್ತದೆ. ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ.

**ಧನಸ್ಸು** ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ದೂರದ ಸಂಬಂಧಿಯೊಬ್ಬರಿಂದ ಒಂದು ಬಹುನಿರೀಕ್ಷಿತವಾದ ಸಂದೇಶ ಇಡೀ ಕುಟುಂಬ ಮತ್ತು ವಿಶೇಷವಾಗಿ ನಿಮಗೆ ಒಳ್ಳೆಯ ಸುದ್ದಿ ತರುತ್ತದೆ.

**ಮಕರ** ನೀವು ಸಂಪ್ರದಾಯಬದ್ಧ ಹೂಡಿಕೆಗಳನ್ನು ಮಾಡಿದಲ್ಲಿ ಒಳ್ಳೆಯ ಹಣ ಮಾಡುತ್ತೀರಿ. ನೀವು ನಂಬುವ ಯಾರಾದರೂ ನಿಮಗೆ ಸಂಪೂರ್ಣ ನಿಜ ಹೇಳದಿರಬಹುದು – ಇತರರು ಮನವೊಲಿಸುವ ನಿಮ್ಮ ಸಾಮರ್ಥ್ಯ ಬರುವ ಸಮಸ್ಯೆಗಳನ್ನು ಪರಿಹರಿಸಲು ಸಹಾಯ ಮಾಡುತ್ತದೆ.

**ಕುಂಭ** ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ಈ ದಿನ ನಿಮ್ಮ ಪ್ರೀತಿ ಜೀವನದ ವಿಚಾರದಲ್ಲಿ ಅಸಾಧಾರಣವಾಗಿದೆ. ಪ್ರೀತಿ ಮಾಡುತ್ತಿರಿ. ನೀವು ಕೆಲಸದಲ್ಲಿ ಅಭಿನಂದನೆಗಳನ್ನು ಪಡೆಯಬಹುದು.

**ಮೀನ** ಒಂದು ಒಳ್ಳೆಯ ಸುದ್ದಿ ಪಡೆಯುವ ಸಾಧ್ಯತೆಯಿದ್ದು ಇದು ನಿಮ್ಮನ್ನಷ್ಟೇ ಅಲ್ಲದೇ ನಿಮ್ಮ ಕುಟುಂಬವನ್ನೂ ಉತ್ಸಾಹಿಗಳನ್ನಾಗಿಸುತ್ತದೆ. ನೀವೂ ಕೂಡ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಬೇಕು. ಕೆಲವರಿಗೆ ಹೊಸ ಪ್ರಣಯ ಖಂಡಿತವೆನಿಸುತ್ತದೆ.

# ಕೇಂದ್ರದಿಂದ ಹೆಚ್ಚೇ ರಸಗೊಬ್ಬರ ಪೂರೈಕೆ; ಸಚಿವ ಪ್ರಲ್ಹಾದ ಜೋಶಿ

## ಕರ್ನಾಟಕಕ್ಕೆ ಕೇಂದ್ರದಿಂದ ಸಾಕಷ್ಟು ರಸಗೊಬ್ಬರ ಪೂರೈಸಲಾಗಿದೆ. ಆದ್ರೆ ರಾಜ್ಯ ಸರ್ಕಾರ ಸರಿಯಾಗಿ ವಿತರಿಸಿಲ್ಲ!

• **ಉದಯವಾಹಿನಿ ಹುಬ್ಬಳ್ಳಿ:**

ರೈತರ ಹಿತಕ್ಕೆ ಬದ್ಧವಾಗಿ ಕೇಂದ್ರವು ಕರ್ನಾಟಕಕ್ಕೆ ಅಗತ್ಯಕ್ಕಿಂತ ಹೆಚ್ಚೇ ರಸಗೊಬ್ಬರ ಪೂರೈಸಿದೆ. ಆದರೆ, ರಾಜ್ಯ ಕಾಂಗ್ರೆಸ್ ಸರ್ಕಾರ ರಸಗೊಬ್ಬರ ಅಭಾವ ಬಿಂಬಿಸಿ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಲು ನೋಡುತ್ತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಕಿಡಿಕಾರಿದ್ದಾರೆ.

ಈ ಕುರಿತಂತೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಕೇಂದ್ರ

1: ಜಾಗತಿಕ ಬಿಕ್ಕಟ್ಟಿದ್ದರೂ ಸಮರ್ಪಕ ಪೂರೈಕೆ
2: ಮುಂಗಾರು ಮುನ್ನವೇ ಹೆಚ್ಚು ಪೂರೈಕೆ
3: ರಾಜ್ಯಕ್ಕಿಷ್ಟು ಗೊಬ್ಬರ ಕೇಂದ್ರ ಸರ್ಕಾರ

ಸಚಿವರು, ಕರ್ನಾಟಕದಲ್ಲಿ ಮುಂಗಾರು ಕೃಷಿ ಚಟುವಟಿಕೆ ಆರಂಭವಾಗುತ್ತಿದ್ದಂತೆಯೇ ರಾಜ್ಯ ಕಾಂಗ್ರೆಸ್ ಸರ್ಕಾರ ರಸಗೊಬ್ಬರ ಕೊರತೆಯೆಂದು ಬಿಂಬಿಸಿ, ಅನಾವಶ್ಯಕವಾಗಿ ಕೇಂದ್ರದ ವಿರುದ್ಧ ಆರೋಪ ಮಾಡುತ್ತಿದೆ ಎಂದು ರಸಗೊಬ್ಬರ ಪೂರೈಕೆ ಬಗ್ಗೆ ಪ್ರಸ್ತುತ ಅಂಕಿ ಅಂಶ ತೆರೆದಿಟ್ಟು ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ ಜೋಶಿ.


ಉದಯವಾಹಿನಿ ಚಿತ್ರ

> ಮುಂಗಾರು ಹಂಗಾಮಿಗೂ ಮುನ್ನವೇ ಕರ್ನಾಟಕಕ್ಕೆ ಅಗತ್ಯಕ್ಕಿಂತ ಹೆಚ್ಚಿನ ಪ್ರಮಾಣದ ರಸಗೊಬ್ಬರವನ್ನು ಪೂರೈಸಲಾಗಿದೆ. ಮುಂಗಡ ದಾಸ್ತಾನಿಗೆ ಅನುವಾಗುವಂತೆ ಜನವರಿ–ಮಾರ್ಚ್ ಅವಧಿಯಲ್ಲೇ ಅಗತ್ಯಕ್ಕಿಂತ ಹೆಚ್ಚುವರಿ 0.33 ಲಕ್ಷ ಮೆಟ್ರಿಕ್ ಟನ್ ಯೂರಿಯಾ, 1.29 ಲಕ್ಷ ಮೆಟ್ರಿಕ್ ಟನ್ ಡಿಎಪಿ ಮತ್ತು 1.58 ಲಕ್ಷ ಮೆಟ್ರಿಕ್ ಟನ್ ಎನ್‌ಪಿಕೆಎಸ್ ಅನ್ನು ನೀಡಲಾಗಿದೆ ಎಂದಿದ್ದಾರೆ. –ಪ್ರಲ್ಹಾದ್ ಜೋಶಿ

ಜಾಗತಿಕವಾಗಿ ಬಿಕ್ಕಟ್ಟಿದ್ದರೂ ಕೇಂದ್ರ ಸರ್ಕಾರ, ಕರ್ನಾಟಕದ ರೈತರಿಗಾಗಿ 2026ರ ಮುಂಗಾರು ಹಂಗಾಮಿಗೆ ಸಾಕಷ್ಟು ಪ್ರಮಾಣದ ರಸಗೊಬ್ಬರ ಲಭ್ಯತೆಯನ್ನು ಖಚಿತಪಡಿಸಿದೆ. ಇರಾನ್–ಇಸ್ರೇಲ್ ಸಂಘರ್ಷ ಮತ್ತು ರಫ್ತು ಸವಾಲುಗಳ ಮಧ್ಯೆಯೂ ಕೇಂದ್ರ ಸರ್ಕಾರ ಮುಂಜಾಗ್ರತೆ ವಹಿಸಿದ್ದು, ದೇಶಿಯವಾಗಿ ಯೂರಿಯಾ ಉತ್ಪಾದನೆ ಹೆಚ್ಚಿಸಿದ್ದಲ್ಲದೆ, ಆಮದನ್ನು ಸಹ ಸರಿಯಾಗಿ ನಿಭಾಯಿಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ವಿವಿಧ ಜಿಲ್ಲೆಗಳ ನಡುವೆ ರಸಗೊಬ್ಬರವನ್ನು ಸಮರ್ಪಕವಾಗಿ ವಿತರಣೆ ಮಾಡದೆ, ದಾಸ್ತಾನು ದಂಧೆ, ಕಾಳಸಂತೆ ಮತ್ತು ಸಬ್ಸಿಡಿ ದುರುಪಯೋಗ ತಡೆಗಟ್ಟದೇ ರೈತರಿಗೆ ವಂಚಿಸುತ್ತಿದೆ. ಅಗತ್ಯವಿರುವೆಡೆ ಹೆಚ್ಚಿನ ದಾಸ್ತಾನು ಲಭ್ಯವಾಗುವಂತೆ ಮಾಡದೇ ಇರುವುದು ಈ ಸರ್ಕಾರದ ಬೇಜವಾಬ್ದಾರಿಯೇ ಸರಿ ಎಂದು ಪ್ರಲ್ಹಾದ ಜೋಶಿ ಕಿಡಿಕಾರಿದ್ದಾರೆ.

ಡಿಎಪಿ 1.89 ಅಗತ್ಯತೆಯಲ್ಲಿ 2.57 ಲಭ್ಯತೆ ಖಚಿತಪಡಿಸಿದ್ದು, ಪ್ರಸ್ತುತ ದಾಸ್ತಾನು 1.09 ಇದೆ. ಹೆಚ್ಚುವರಿ ರಸಗೊಬ್ಬರ ಪೂರೈಕೆಯಲ್ಲಿದೆ. 4.36 ಅಗತ್ಯತೆಯಿದ್ದರೆ 9.28 ಲಭ್ಯತೆ ಖಾತರಿಪಡಿಸಲಾಗಿತ್ತು. ಗಣನೀಯ ಪ್ರಮಾಣದ ಮಾರಾಟದ ನಂತರವೂ 5.6 ಲಕ್ಷ ಹೆಚ್ಚು ರಸಗೊಬ್ಬರ ಲಭ್ಯವಿದೆ ಎಂದು ಸಚಿವರು ಅಂಕಿ ಅಂಶ ಸಹಿತ ರಾಜ್ಯ ಸರ್ಕಾರಕ್ಕೆ ಚಾಟಿ ಬೀಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಯಾವತ್ತೂ ರೈತರ ಹಿತ ಕಾಯಲು ಬದ್ಧವಾಗಿದೆ.

**ಸಾಕಷ್ಟು ಪ್ರಮಾಣದ ರಸಗೊಬ್ಬರ ಲಭ್ಯತೆ**

**ಕೇಂದ್ರ ಸರ್ಕಾರ ಕರ್ನಾಟಕಕ್ಕೆ ಅದಾಗಲೇ ಜೂನ್ 10ರ ವರೆಗೆ ಯೂರಿಯಾ: 3.13 ಲಕ್ಷ ಮೆಟ್ರಿಕ್ ಟನ್ ಅಗತ್ಯತೆಯಲ್ಲಿ 5.59 ಲಭ್ಯತೆಯನ್ನು ಖಾತರಿಪಡಿಸಿದೆ. 2.47 ಮಾರಾಟದ ನಂತರವೂ 3.12 ದಾಸ್ತಾನು ಬಾಕಿಯಿದೆ. ಅಲ್ಲದೇ, ಇನ್ನೂ 17,190 ಸಾಗಣೆಯಲ್ಲಿದೆ.**

ಸದಾ ರೈತ ಸಮೂಹವನ್ನು ಬೆಂಬಲಿಸುತ್ತ ಬಂದಿದೆ. ಅಂತೆಯೇ ಕರ್ನಾಟಕದಾದ್ಯಂತ ಸಹ ಸಾಕಷ್ಟು ರಸಗೊಬ್ಬರ ಲಭ್ಯತೆಗೆ ಬದ್ಧವಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಸ್ಪಷ್ಟಪಡಿಸಿದ್ದಾರೆ.

> **ವಾಸ್ತವವಾಗಿ ರಾಜ್ಯದಲ್ಲಿ ಸಮರ್ಪಕ ರಸಗೊಬ್ಬರ ಲಭ್ಯತೆಯಿದೆ. ಇದೊಂದು ಸಮಸ್ಯೆಯೇ ಅಲ್ಲ. ಆದರೆ ರಾಜ್ಯ ಸರ್ಕಾರ ಅಗತ್ಯವಿರುವಲ್ಲಿ ರೈತರಿಗೆ ರಸಗೊಬ್ಬರ ತಲುಪಿಸದೆ ತೀರಾ ಬೇಜವಾಬ್ದಾರಿಯಾಗಿ ವರ್ತಿಸುತ್ತಿದೆ. ಇದು ಆಡಳಿತ ವೈಫಲ್ಯಕ್ಕೆ ಸಾಕಷ್ಟು ಪ್ರಮಾಣದ ರಸಗೊಬ್ಬರ ಲಭ್ಯತೆ ಕೈಗನ್ನಡಿ ಎಂದು ವಾಗ್ದಾಳಿ ನಡೆಸಿದ್ದಾರೆ.–ಪ್ರಲ್ಹಾದ್ ಜೋಶಿ**

## ಸಂಗೀತದಿಂದ ಮನಸ್ಸಿಗೆ ನೆಮ್ಮದಿ, ರೋಗಮುಕ್ತಿಗೆ ಸಹಕಾರಿ

• **ಉದಯವಾಹಿನಿ ಕಲಬುರಗಿ,**

ಸಂಗೀತವು ಮನಸ್ಸಿಗೆ ನೆಮ್ಮದಿ ನೀಡುವುದರ ಜೊತೆಗೆ ರೋಗಮುಕ್ತಿಗೂ ಸಹಕಾರಿಯಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಕೆಲವು ಆಸ್ಪತ್ರೆಗಳಲ್ಲಿ ಚಿಕಿತ್ಸೆಯೊಂದಿಗೆ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದ್ದು, ಇದರಿಂದ ರೋಗಿಗಳಿಗೆ ಮಾನಸಿಕ ಶಾಂತಿ ದೊರೆಯುತ್ತದೆ ಎಂದು ಪೊರ.ಶಿವರಾಜ ಪಾಟೀಲ ಹೇಳಿದರು.

ನಗರದ ಆರಾಧನಾ ಪಿಯು ಕಾಲೇಜಿನಲ್ಲಿ ಪಾಳಾದ ಶ್ರೀ ಸುಭಾಶ್ಚಂದ್ರ ಪಾಟೀಲ ಸ್ಮಾರಕ ಜನಕಲ್ಯಾಣ ಟ್ರಸ್ಟ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಆಯೋಜಿಸಿದ್ದ ರಮಾತಾಯಿ ನಾಟಕ ಮತ್ತು ಸಂಗೀತ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕಲ್ಯಾಣ ಕರ್ನಾಟಕ ಭಾಗವು ಕಲೆ, ಸಾಹಿತ್ಯ ಮತ್ತು ಸಂಸ್ಕೃತಿಯಲ್ಲಿ ಶ್ರೀಮಂತ ಪರಂಪರೆಯನ್ನು ಹೊಂದಿದ್ದು, ಸಂಗೀತದ ಮೂಲಕ ವ್ಯಕ್ತಿತ್ವ ವಿಕಸನ ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಆರಾಧನಾ ಪಿಯು ಕಾಲೇಜಿನ ಪ್ರಾಚಾರ್ಯ ಚೇತನಕುಮಾರ್ ಗಾಂಗಜಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ನೀಲೂರಿನ ಶರಣಯ್ಯ ಸ್ವಾಮಿಗಳು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಸಂಗೀತವನ್ನೂ ಆಲಿಸಬೇಕು.


ಉದಯವಾಹಿನಿ ಚಿತ್ರ

ಇದರಿಂದ ಓದಿನತ್ತ ಹೆಚ್ಚಿನ ಆಸಕ್ತಿ ಮತ್ತು ಉಲ್ಲಾಸ ಮೂಡುತ್ತದೆ ಎಂದು ಹೇಳಿದರು.

ಸಾಹಿತಿ ವಿಶ್ವನಾಥ ಭಕರೆ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಟ್ರಸ್ಟ್ ಅಧ್ಯಕ್ಷ ಶರಣಗೌಡ ಪಾಟೀಲ ಪಾಳಾ ಪ್ರಾಸ್ತಾವಿಕವಾಗಿ ಮಾತನಾಡಿದರು.ಮರಲಿಂಗ ತಂಡದವರಿಂದ ನಾಟಕ ಪ್ರದರ್ಶನ ನಡೆಯಿತು.

ಸಂಗೀತಗಾರರಾದ ಅಣ್ಣಾರಾಯ ಮತ್ತಿಮಡು, ಸೈದಪ್ಪ ಚೌಡಾಪೂರ, ನಾಗಲಿಂಗಯ್ಯ ಸ್ಥಾವರಮಠ, ನಾಗೇಂದ್ರ ಸಪ್ಪನಗೋಳ, ಶಿವರಾಜ ಪಾಟೀಲ, ನಿರ್ಮಲ ಕೋಣೆ, ಶಿವಶರಣಯ್ಯ ಲಿಂಗದಳ್ಳಿ ಹಾಗೂ ವಿನೋದ ದಸ್ತಾಪೂರರವರು ಜನರ ಮನಮುಟ್ಟುವಂತೆ ಹಾಡುಗಳನ್ನು ಹಾಡಿದರು.

## ರಂಗಭೂಮಿಗೆ ಬಳ್ಳಾರಿ ಜಿಲ್ಲೆಯ ಕೊಡುಗೆ ಅನನ್ಯ

• **ಉದಯವಾಹಿನಿ ಬಳ್ಳಾರಿ**

ರಂಗಭೂಮಿ ಪರಂಪರೆಗೆ ಬಳ್ಳಾರಿ ಜಿಲ್ಲೆಯ ಕೊಡುಗೆ ಅನನ್ಯವಾದುದೆಂದು ಶ್ರೀಧರಗಡ್ಡೆಯ ಕೊಟ್ಟೂರುಸ್ವಾಮಿ ಮಠದ ಮರಿ ಕೊಟ್ಟೂರು ದೇವರು ಹೇಳಿದ್ದಾರೆ.

ಅವರು ಮೊನ್ನೆ ತಾಲ್ಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ರಂಗತೋರಣ ಸಾಂಸ್ಕೃತಿಕ ಸಂಘಟನೆ ಹಮ್ಮಿಕೊಂಡಿದ್ದ ''ಕಪ್ಪಗಲ್ಲು ನಾಟಕೋತ್ಸವ''ಕ್ಕೆ ಚಾಲನೆ ನೀಡಿ ಮಾತನಾಡಿದರು.

ಬಳ್ಳಾರಿ ರಾಘವರು ರಂಗಭೂಮಿಯ ಮೂಲಕ ಕನ್ನಡ ಹಾಗೂ ತೆಲುಗು ಭಾಷೆಯ ಸೌಹಾರ್ದತೆಗೆ ಸೇತುವೆಯಂತೆ ಕಾರ್ಯನಿರ್ವಹಿಸಿದವರು. ಜೋಳದರಾಶಿ ದೊಡ್ಡನಗೌಡರು, ಸುಭದ್ರಮ್ಮ ಮನ್ಸೂರು, ಬೆಳಗಲ್ಲು ವೀರಣ್ಣ ಸೇರಿದಂತೆ ಅನೇಕರು ರಂಗಭೂಮಿ ಬೆಳವಣಿಗೆಗೆ ಸಾಕಷ್ಟು ಶ್ರಮಿಸಿದ್ದಾರೆಂದರು. ಗ್ರಾಮೀಣ ಪರಿಸರದಲ್ಲಿ ನಾಟಕೋತ್ಸವ ಹಮ್ಮಿಕೊಳ್ಳುವ ಮೂಲಕ ರಂಗತೋರಣ ಸಂಸ್ಥೆಯ ರಂಗಕಾಳಜಿಯ ಕಾರ್ಯನಿರ್ವಹಿಸಿದೆ. ಯಾವುದೇ ಸಾಂಸ್ಕೃತಿಕ, ಸಾಹಿತ್ಯಿಕ ಚಟುವಟಿಕೆಗಳು ನಗರ ಪ್ರದೇಶಕ್ಕೆ ಸೀಮಿತಗೊಳ್ಳದೆ ಹಳ್ಳಿಹಳ್ಳಿಗೆ ಪಸರಿಸುವಂತಾಗಬೇಕು. ಗ್ರಾಮೀಣರಲ್ಲಿ ಸಾಂಸ್ಕೃತಿಕ ಪರಿಸರ ಬೆಳೆಸುವ ದಿಸೆಯ ಕೆಲಸವನ್ನು ಎಲ್ಲಾ ರಂಗ ಸಂಸ್ಥೆಗಳು ಸಹ ಮಾಡಬೇಕು. ಅನೇಕ ವರ್ಷಗಳಿಂದ


ಉದಯವಾಹಿನಿ ಚಿತ್ರ

ರಂಗಸಂಸ್ಕೃತಿಯನ್ನು ಬಿತ್ತುತ್ತಿರುವ ರಂಗತೋರಣ ಸಂಸ್ಥೆ ಸೇವಾ ಕಾರ್ಯ ಶ್ಲಾಘನೀಯವಾದದ್ದು. ನಾಡಿನ ಅನೇಕ ರಂಗಸಾಧಕರಿಗೆ ಪ್ರಶಸ್ತಿಯನ್ನು ನೀಡಿ ಗೌರವಿಸುವ ಮೂಲಕ ರಂಗಭೂಮಿಯ ಬೆಳವಣಿಗೆಗೆ ರಂಗತೋರಣ ಸಂಸ್ಥೆ ಶ್ರಮಿಸುತ್ತಿದೆಂದರು. ರಂಗತೋರಣ ಸಂಸ್ಥೆಯ ಅಡವಿಸ್ವಾಮಿ, ಸಂಸ್ಥೆಯ ಈವರೆಗೆ ನಡೆಸಿರುವ ಸಾಂಸ್ಕೃತಿಕ ಚಟುವಟಿಕೆಗಳ ಕುರಿತು ತಿಳಿಸಿದರು. ಕಾರ್ಯದರ್ಶಿ ಪ್ರಭುದೇವ ಕಪ್ಪಗಲ್ಲು, ಗ್ರಾಮದ ಮುಖಂಡರಾದ ಕೋರಿ ಬಸವರಾಜ್, ಕೆ.ಎಂ ಮಂಜುನಾಥಸ್ವಾಮಿ, ಬುಶ್ಯಪ್ಪ, ಉಪ್ಪಾರ ಬಸವರಾಜ್, ದ್ಯಾವಣ್ಣ ಉಪಸ್ಥಿತರಿದ್ದರು. ಚಂದ್ರಶೇಖರ ಆಚಾರ್ ಕಪ್ಪಗಲ್ಲು ಹಾಗೂ ಮೆಹತಾಬ್ ಕಾರ್ಯಕ್ರಮ ನಿರ್ವಹಿಸಿದರು. ಬಳಿಕ ಜೇವರ್ಗಿ ರಾಜಣ್ಣ ರಚನೆ–ನಿರ್ದೇಶನದ ''ಮುತ್ತಿನಂತ ಅತ್ತಿಗೆ'' ನಾಟಕ ಪ್ರದರ್ಶನಗೊಂಡಿತು.

## ಸರ್ಕಾರಿ ಬಾಲಕಿಯರ ಕಾಲೇಜು ಕಟ್ಟಡದ ಮೇಲ್ಛಾವಣಿ ಕುಸಿತಕ್ಕೆ ಕಳಪೆ ಕಾಮಗಾರಿ ಕಾರಣ

• **ಉದಯವಾಹಿನಿ ಕಲಬುರಗಿ,**

**ಕಳಪೆ ಕಾಮಗಾರಿ ಕಾರಣ**

2016 ರಲ್ಲಿ ನಿರ್ಮಾಣವಾಗಿರೋ ಕಟ್ಟಡ 8 ವರ್ಷದಲ್ಲೇ ಹೀಗೆಲ್ಲಾ ಚಾವಣಿ ಕುಸಿದು ಮಕ್ಕಳ ಪ್ರಾಣಕ್ಕೆ ಕುತ್ತಾಗಿದೆ. ಈ ಪ್ರಕರಣದ ಸಂಪೂರ್ಣ ತನಿಖೆಗೆ ತಾವು ಜಿಪಂ ಸಿಇಓ, ಡೀಸಿಯವರಿಗೆ ಸೂಚಿಸಿರೋದಾಗಿ ಶಾಸಕ ಅಲ್ಲಂಪ್ರಭು ಪಾಟೀಲ್ ಹಳಿದ್ದಾರೆ.ಗಾಯಗೊಂಡ ಶೀತಲ್, ಸ್ನೇಹಾ, ದಿವ್ಯಾ ಸೇರಿದಂತೆ ಹಲವರು ವಿದ್ಯಾರ್ಥಿನಿಯರನ್ನು ಆಸ್ಪತ್ರೆಯಲ್ಲಿ ಭೇಟಿ ಮಾಡಿ ಆರೋಗ್ಯ ವಿಚಾರಿಸಿ ವೈಯಕ್ತಿಕ ತಲಾ 5 ಸಾ.ರು ನ ಸಹಾಯ ಗಾಯಗಂಡವರಿಗೆ ನೀಡಿದ ಶಾಸಕರು ಸರ್ಕಾರಿ ಕಾಲೇಜಿನ ಕಟ್ಟಡ ಕಳಪೆ ಕಟ್ಟಿದ್ದೇ ಅವಘಡಕ್ಕೆ ಕಾರಣವೆಂದು ದೂರಿದರು.

ಕಟ್ಟಡ ಕಟ್ಟಿರೋ ಗುತ್ತಿಗೆದಾರರವಿರುದ್ಧ ಕ್ರಮವಾಬೇಕು. ಶೀಘ್ರ ವಿಚಾರಣೆ ನಡೆಸಿ ಕಳಪೆತನಕ್ಕಿರೋ ಕಾರಣ ಪತ್ತೆ ಹಚ್ಚುವಂತೆ ಶಾಸಕರು ಸೂಚಿಸಿದ್ದಾರೆ.ಪಾಠ ನಡೆಯುವಾಗಲೇ ಮೇಲ್ಛಾವಣಿ ಕುಸಿದಿದೆ, ಇದರಿಂದ 80 ಕ್ಕೂ ಹೆಚ್ಚು ಮಕ್ಕಳು ತರಗತಿ ಕೋಣೆಯಲ್ಲಿದ್ದರು. ಅವರೆಲ್ಲರೂ ಅಪಾಯ ಎದುರಿಸಿದ್ದಾರೆ.

ಶಾಲೆಗಳು ಗುಣಮಟ್ಟದ ಕಾಮಗಾರಿಗೆ ತೆರೆದುಕಳ್ಳಬೇಕು. ಇವು ಜೀವತ ದೇವರ ಕೋಣೆಗಳು. ಹೀಗಾಗಿ ಕಳಪೆ ತನದ ಈ ಪ್ರಕರಣಕ್ಕೆ ಸೂಕ್ತ ತನಿಖೆ ಹಾಗೂ ಕಾನೂನು ಕ್ರಮದ ಬಿಸಿ ಮುಟ್ಟಿಸೋ ಮೂಲಕ ಜಿಲ್ಲಾಡಳಿತ, ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಶಾಸಕ ಅಲ್ಲಂಪ್ರಭು ಆಗ್ರಹಿಸಿದರು.

## ಜೂ.17 ನಗರಕ್ಕೆ ಎಸ್ ಐ ಆರ್ ಜನಜಾಗೃತಿ ಜಾಥಾ

• **ಉದಯವಾಹಿನಿ ಬಳ್ಳಾರಿ**

ಮತಪಟ್ಟಿ ವಿಶೇಷ ಪರಿಷ್ಕರಣೆ(ಎಸ್ ಐ ಆರ್ ) ವಿರೋಧಿ ಜನ ಜಾಗೃತಿ ಜಾಥಾ ನಿನ್ನೆಯಿಂದ ರಾಜ್ಯದಲ್ಲಿ ಆರಂಭಗೊಂಡಿದ್ದು. ಬೀದರ್ ನಿಂದ ಆರಂಭಗೊಂಡಿರುವ ಜಾಥಾ ಜೂ 17 ಕ್ಕೆ ಬಳ್ಳಾರಿ ನಗರಕ್ಕೆ ಆಗಮಿಸಲಿದೆಂದು ನಗರಸಭೆ ಮಾಜಿ ಅಧ್ಯಕ್ಷ ಹೆಚ್.ಸಿದ್ದಣ್ಣ ಹೇಳಿದ್ದಾರೆ. ಅವರು ನಗರದ ಪತ್ರಿಕಾ ಭವನದಲ್ಲಿ ಇಂದು ಎಸ್ ಐ ಆರ್ ವಿರೋಧಿ ಜಾತ್ಯತೀತ ಪಕ್ಷಗಳು – ಜನಪರ ಸಂಘಟನೆಗಳ ಒಕ್ಕೂಟ ಹಮ್ಮಿಕೊಂಡಿದ್ದ ಸುದ್ದಿಗೋಷ್ಟಿಯಲ್ಲಿ ಮಾತನಾಡುತ್ತಿದ್ದರು.

ರಜ್ಯದೆಲ್ಲೆಡೆ ನಡೆಯುವ ಜಾಥಾ ಜೂ 20 ಕ್ಕೆ ಪ್ರತಿರೋಧದ ಬೃಹತ್ ಪಾದಯಾತ್ರೆ, ಬೆಂಗಳೂರಿನಲ್ಲಿ ಹಮ್ಮಿಕೊಂಡಿದೆಂದರು. ಅಕ್ಷರ ದೋಷ, ವಯಸ್ಸಿನ ವ್ಯತ್ಯಾಸ ವೆಂದು ಮತದಾರರ ಹೆಸರನ್ನು ಪಟ್ಟಿಯಿಂದ ತೆಗೆಯುವುದು ಸರಿಯಲ್ಲ ಎಂದರು.

ಈಗಾಗಲೇ ಅನೇಕ ರಾಜ್ಯಗಳಲ್ಲಿ ನಡೆದ ಈ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ತೋರದೆ ವಿನಾಕಾರಣ ಲಕ್ಷಾಂತರ ಜನರನ್ನು ಪತಪಟ್ಟಿಯಿಂದ ಹೊರಗಿಟ್ಟಿದೆ. ಅದಕ್ಕಾಗಿ ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುತ್ತಿದೆಂದು ಹೇಳಿದರು. ಜಾಥಾ ಜೂ.17 ಸಂಜೆ ನಗರಕ್ಕೆ ಬರಲಿದ್ದು ಗವಿಯಪ್ಪ ಸರ್ಕಲ್ ನಿಂದ ಗಾಂಧಿಬವನದ ವರೆಗೆ ಸಾಗಿ ಅಲ್ಲಿ ಜಾಗೃತಿ ಸಭೆ ನಡೆಯಲಿದೆ. ರೈತ ಸಂಘದ ಮುಖಂಡ ವೀರಸಂಗಯ್ಯ ಮೊದಲಾದವರು ಜನತೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆಂದರು.

ಸುದ್ದಿಗೋಷ್ಟಿಯಲ್ಲಿ ಸಂಗನಕಲ್ಲು ವಿಜಯಕುಮಾರ್, ಅಮ್ಜದ್, ಎರುಕುಲಸ್ವಾಮಿ, ವೀರೇದ್ರ, ಗೋವರ್ಧನ, ವಸಂತ ಕಾಳೆ ವೀಣಾ ಕುಮಾರಿ, ಹುಮಾಯೂನ್ ಖಾನ್ ಮೊದಲಾದವರು ಇದ್ದರು.


ಉದಯವಾಹಿನಿ ಚಿತ್ರ

## ಪ್ರಕರಣ ದಾಖಲಿಸಲು ಆಗ್ರಹಿಸಿ ಎಬಿವಿಪಿ ಪ್ರತಿಭಟನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಕಲಬುರಗಿ,**

ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಮೇಲ್ಛಾವಣಿ ಕುಸಿದು ಬಿದ್ದು ಘಟನೆ ವಿರುದ್ಧ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಜಿಲ್ಲಾ ಘಟಕದ ವತಿಯಿಂದ ಕಾಲೇಜಿನ ಮುಂದೆ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿಗಳಿಗೆ ಹಾಗೂ ಶಿಕ್ಷಣ ಇಲಾಖೆಯ ಅವರಿಗೆ ಪೊಲೀಸ್ ಇಲಾಖೆ ಮುಖಾಂತರ ಮನವಿ ಸಲ್ಲಿಸಲಾಯಿತು.

ನಗರದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನಲ್ಲಿ ತರಗತಿ ನಡೆಸುತ್ತಿದ್ದಾಗಲೇ ಮೇಲ್ಛಾವಣಿ ಕುಸಿದು ಬಿದ್ದು ವಿದ್ಯಾರ್ಥಿನಿಯರು ಗಂಭೀರ ಗಾಯಗೊಂಡ ಆಸ್ಪತ್ರೆಯ ಸೇರಿದ್ದಾರೆ. ಸರ್ಕಾರಿ ಕಾಲೇಜು ಕಟ್ಟಡದ ದುಸ್ಥಿತಿಯಿಂದಾಗಿ ಸುಮಾರ 2000ಕ್ಕೂ ಹೆಚ್ಚು ಬಡ ವಿದ್ಯಾರ್ಥಿನಿಯರ ಪ್ರತಿದಿನ ಆತಂಕದಲ್ಲೇ ಕಲಿಯುವಂತಾಗಿದೆ.

ಈಗಾಗಲೇ ತರಗತಿಗಳ ಮೇಲ್ಛಾವಣಿ ಕುಸಿದಿದ್ದು, ಇಡೀ ಕಾಲೇಜಿನ ಕಟ್ಟಡ ಬಿರುಕು ಬಿಟ್ಟಿದೆ. ರಾಜ್ಯ ಸರ್ಕಾರಕ್ಕೆ ಶಿಕ್ಷಣದ ಬಗ್ಗೆ ಯಾಕಿಷ್ಟು ನಿರ್ಲಕ್ಷ್ಯ ,ಅಧಿಕಾರಗಳ ಬೇಜವಾಬ್ದಾರಿಗೆ ವಿದ್ಯಾರ್ಥಿನಿಯರ ಜೀವ ಬಲಿಯಾಗಬೇಕೇ ?ರಾಜ್ಯದಲ್ಲಿ ಶಾಲಾ ಕಾಲೇಜುಗಳು ಪ್ರಾರಂಭವಾಗಿವೆ. ಆದರೆ ವಿದ್ಯಾರ್ಥಿಳಿಗೆ ಪಾಠ ಕೇಳುವುದಕ್ಕೆ ಕೊಠಡಿಯಗಳಿಲ್ಲ, ಮೂಲಭೂತ ಸೌಕರ್ಯ ಕೇಳವುಬೇಡ.

ಆ ಮಟ್ಟಕ್ಕೆ ಶಾಲಾ ಕಾಲೇಜುಗಳು ಪರಿಸಿತ್ಥಿ ಇದೆ. ರಾಜ್ಯದಲ್ಲಿ 1,200ಕ್ಕೂ ಹೆಚ್ಚು ಸರ್ಕಾರಿ ಪದವಿ ಪೂರ್ವ ಕಾಲೇಜಿಗಳ ಪರಿಸಿತ್ಥಿ ಒಮ್ಮೆ ಮುಖ್ಯಮಂತ್ರಿಯವರು ನೋಡಬೇಕು ಇದಕ್ಕೆ ಈ ಕಟ್ಟಡದ ಗುತ್ತಿಗೆದಾರ ಮೇಲೆ ಪ್ರಕರಣ ದಾಖಲಿಸಿ ಅವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಹಾಗೂ ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆ ಕೂಡಲೇ ಎಚ್ಚೆತ್ತುಕೊಂಡು ಕಟ್ಟಡ ಪರಿಶೀಲಿಸಿ ವಿದ್ಯಾರ್ಥಿನಿಯರ ಸುರಕ್ಷತೆಗೆ ತಕ್ಷಣ ಕ್ರಮ ಕೈಗೊಳ್ಳುಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದರು.

## ಜಾತ್ಯಾತೀತ ಪಕ್ಷಗಳಿಂದ ಜೂ.17 ರಂದು ಪ್ರತಿಭಟನೆ

• **ಉದಯವಾಹಿನಿ ಹಗರಿಬೊಮ್ಮನಹಳ್ಳಿ:**

ಕೇಂದ್ರ ಚುನಾವಣೆ ಆಯೋಗ ಕರ್ನಾಟಕದಲ್ಲಿ ಜಾರಿಗೊಳಿಸುತ್ತಿರುವ ಎಸ್‌ಐಆರ್ ವಿರೋಧಿಸಿ ವಿರೋಧಿ ಜಾತ್ಯತೀತ ಪಕ್ಷಗಳು ಮತ್ತು ಜನಪರ ಸಂಘಟನೆಗಳ ಒಕ್ಕೂಟ ದಿಂದ ಜೂ.17 ರಾಜ್ಯಾದ್ಯಂತ ಜನಜಾಗೃತಿ ಜಾಥಾ ಹಾಗೂ ಜೂನ್ 20ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ನಲ್ಲಿ ಬೃಹತ್ ಪ್ರತಿ–ರೋಧ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಜನ ಪರ ಸಂಘಟನೆ ಒಕ್ಕೂಟದ ಸಂಚಾಲಕ ಹುರುಕಡ್ಡಿ ಶಿವಕುಮಾರ್ ತಿಳಿಸಿದರು.

ಪಟ್ಟಣದ ಬೀದಿ ಬದಿ ವ್ಯಾಪಾರಿ ಘಟನೆಯ ಕಚೇರಿಯಲ್ಲಿ ಆಯೋಜಿಸಿದ್ದ ಎಸ್‌ಐಆರ್ ಪ್ರಕ್ರಿಯೆ ಕುರಿತು ಪ್ರತಿಭಟನೆ ಹಮ್ಮಿಕೊಳ್ಳುವ ಜನಜಾಗೃತಿ ಪೂರ್ವಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿದ್ದು,ಬಡ ಹಾಗೂ ಕೊನೆ ಅಂಚಿನ ಸಮುದಾಯಗಳ ಮತದಾನದ ಹಕ್ಕಿಗೆ ಧಕ್ಕೆಯುಂಟು ಮಾಡುವ ಸಾಧ್ಯತೆ ಇದೆ.

**ರಾಜ್ಯಾದ್ಯಂತ ಜನಜಾಗೃತಿ ಜಾಥಾ**

ಈ ಪ್ರಕ್ರಿಯೆಯು ಸಿಎಎ ಹಾಗೂ ಎನ್ ಆರ್ಸಿ ಮಾದರಿಯ ಕ್ರಮಗಳಿಗೆ ದಾರಿ ಮಾಡಿಕೊಡುವ ಪ್ರಯತ್ನವಾಗಿದೆ ಎಂದರು ಎಸ್‌ಐಆರ್ ಜಾರಿಗೊಂಡ ಕೆಲವು ರಾಜ್ಯಗಳಲ್ಲಿ ಲಕ್ಷಾಂತರ ಅರ್ಹ ಮತದಾರರು ಮತಪಟ್ಟಿಯಿಂದ ಹೊರಗುಳಿದಿರುವ ಉದಾಹರಣೆಗಳಿವೆ.


ಉದಯವಾಹಿನಿ ಚಿತ್ರ

ಈ ಹಿನ್ನೆಲೆಯಲ್ಲಿ ಎಸ್‌ಐಆರ್ ಪ್ರಕ್ರಿಯೆ ಲಾಜಿಕಲ್ ಡಿಸ್ಕ್ರಿಬೆನ್ಸಿ ಸಾಫ್ಟ್ವೇರ್ ಬಳಕೆ ನಿಲ್ಲಿಸುವುದು ಗ್ರಾಮಸಭೆಗಳ ಮೂಲಕ ಸಾರ್ವಜನಿಕ ಪರಿಶೀಲನೆ ನಡೆಸುವುದು. ಪಾರದರ್ಶಕವಾಗಿ ಪಟ್ಟಿಯನ್ನು ಪ್ರಕಟಿಸುವುದು ಹಾಗೂ ಆಕ್ಷೇಪಣೆ ಸಲ್ಲಿಕೆಗೆ ಕನಿಷ್ಠ ಆರು ತಿಂಗಳ ಕಾಲಾವಕಾಶ ನೀಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟಿದೆ ಎಂದು ತಿಳಿಸಿದರು. ಮೇ 30ರಂದು ರಾಜ್ಯದ 80ಕ್ಕೂ ಹೆಚ್ಚು ವಿಧಾನಸಭಾ ಕ್ಷೇತ್ರಗಳಲ್ಲಿ ಜಿಲ್ಲಾಧಿಕಾರಿಗಳ ಮೂಲಕ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಲಾಗಿದ್ದರೂ ಯಾವುದೇ ಪ್ರತಿಕ್ರಿಯೆ ದೊರೆತಿಲ್ಲ ಎಂದು ಒಕ್ಕೂಟ ಅಸಮಾಧಾನ ವ್ಯಕ್ತಪಡಿಸಿದರು.

## ಚಿನ್ನಸ್ವಾಮಿ ಮೈದಾನವನ್ನು 55 ಸಾವಿರ ಪ್ರೇಕ್ಷಕರ ಸಾಮರ್ಥ್ಯಕ್ಕೆ ಏರಿಸಲಾಗುವುದು

### ಚಿನ್ನಸ್ವಾಮಿ ಪ್ರೇಕ್ಷಕಸ್ನೇಹಿ ಮೈದಾನ ಅಲ್ಲ. ಯಾಕೆಂದರೆ, ಅಲ್ಲಿ 360 ಡಿಗ್ರಿಯಲ್ಲಿ ಪಂದ್ಯ ನೋಡಲು ಸಾಧ್ಯವಿಲ್ಲ.

• **ಉದಯವಾಹಿನಿ ಬೆಳಗಾವಿ:**

ಈಡನ್ ಗಾರ್ಡನ್, ವಾಂಖೆಡೆ ಕ್ರೀಡಾಂಗಣ, ನರೇಂದ್ರ ಮೋದಿ ಸೇರಿ ಹಲವಾರು ಮೈದಾನಗಳನ್ನು ನಾನು ನೋಡಿದ್ದೇನೆ. ಅವುಗಳ ಹತ್ತಿರವೂ ನಮ್ಮ ಬೆಂಗಳೂರಿನ ಚಿನ್ನಸ್ವಾಮಿ ಮೈದಾನ ಬರುವುದಿಲ್ಲ.

**1: ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಭರವಸೆ.**
**2: ಮಹಾರಾಜ ಟ್ರೋಫಿ ತಂಡಗಳನ್ನು ಹೆಚ್ಚಿಸುತ್ತೇವೆ.**
**3: ಬೆಳಗಾವಿಯಲ್ಲಿ ಆಡಿಸಲು ಲಾಜಿಸ್ಟಿಕ್ ಸಮಸ್ಯೆ ಆಗುತ್ತದೆ.**

ಹೀಗಾಗಿ, ಇದನ್ನು ಮೇಲ್ದರ್ಜೆಗೇರಿಸಲು ಯೋಜನೆ ಹಾಕಿಕೊಂಡಿದ್ದೇವೆ ಎಂದು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ)ಯ ಅಧ್ಯಕ್ಷ ವೆಂಕಟೇಶ ಪ್ರಸಾದ್ ತಿಳಿಸಿದರು. ಬೆಳಗಾವಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿನ್ನಸ್ವಾಮಿ ಪ್ರೇಕ್ಷಕಸ್ನೇಹಿ ಮೈದಾನ ಅಲ್ಲ. ಯಾಕೆಂದರೆ, ಅಲ್ಲಿ 360 ಡಿಗ್ರಿಯಲ್ಲಿ ಪಂದ್ಯ ನೋಡಲು ಸಾಧ್ಯವಿಲ್ಲ. 32 ಸಾವಿರ ಪ್ರೇಕ್ಷಕರ ಸಾಮರ್ಥ್ಯದ ಮೈದಾನದಲ್ಲಿ ಡಗೌಟ್ ಕಾಣಿಸುವುದಿಲ್ಲ. ಅಂತಿಮವಾಗಿ 22 ಸಾವಿರ ಟಿಕೆಟ್ ನೀಡಬಹುದು. ಅದರಲ್ಲಿ ಪಾಸ್ ಎಲ್ಲಾ ಕಳೆದು 20 ಸಾವಿರ ಪ್ರೇಕ್ಷಕರು ಮಾತ್ರ ಟಿಕೆಟ್ ಪಡೆದು ಪಂದ್ಯ ವೀಕ್ಷಿಸಬಹುದು. ಅಹಮದಾಬಾದ್‌ನಲ್ಲಿರುವ ನರೇಂದ್ರ ಮೋದಿ ಮೈದಾನದಲ್ಲಿ 80 ಸಾವಿರ ಜನರು ಟಿಕೆಟ್ ಖರೀದಿಸಿ


ಉದಯವಾಹಿನಿ ಚಿತ್ರ

ಐಪಿಎಲ್ ಫೈನಲ್ ಪಂದ್ಯ ವೀಕ್ಷಿಸಿದ್ದಾರೆ. ಹೀಗಾಗಿ, ಚಿನ್ನಸ್ವಾಮಿ ಮೈದಾನವನ್ನು 55 ಸಾವಿರ ಪ್ರೇಕ್ಷಕರ ಸಾಮರ್ಥ್ಯಕ್ಕೆ ಮೇಲ್ದರ್ಜೆಗೇರಿಸುವ ಯೋಜನೆ ಹಾಕಿದ್ದೇವೆ.

ಇದಕ್ಕೆ ರಾಜ್ಯ ಸರ್ಕಾರದ ನೆರವಿನ ಅವಶ್ಯಕತೆ ಇದೆ ಎಂದರು.ಕರ್ನಾಟಕ ಕ್ರಿಕೆಟ್ ಅಸೋಸಿಯೇಷನ್‌ಗೆ ಬೇರೆ ಯಾರೇ ಆಯ್ಕೆಯಾಗಿ ಬಂದಿದ್ದರೂ ಕೂಡ ಅವರ ಕೈಯಲ್ಲಿ ಬೆಂಗಳೂರಿನಲ್ಲಿ ಐಪಿಎಲ್ ಪಂದ್ಯ ಆಡಿಸಲು ಆಗುತ್ತಿರಲಿಲ್ಲ. ಅಂತಾರಾಷ್ಟ್ರೀಯ ಪಂದ್ಯಗಳನ್ನು ಅಲ್ಲಿಗೆ ತೆಗೆದುಕೊಂಡು ಬರುತ್ತಿರಲಿಲ್ಲ. ಆನೇಕಲ್‌ನಲ್ಲಿ ನಿರ್ಮಾಣಗೊಳ್ಳಲಿರುವ 2ನೇ ಅಂತಾರಾಷ್ಟ್ರೀಯ ಮೈದಾನಕ್ಕೂ ನಮಗೂ ಯಾವುದೇ ಸಂಬಂಧ ಇಲ್ಲ. ನಮ್ಮನ್ನು ಸರ್ಕಾರ ಗಮನಕ್ಕೆ ತೆಗೆದುಕೊಳ್ಳುತ್ತದೋ ಅಥವಾ ಇಲ್ಲವೋ ಎನ್ನುವುದು ನಮ್ಮ ಕೈಯಲ್ಲಿಲ್ಲ

**360 ಡಿಗ್ರಿಯಲ್ಲಿ ಪಂದ್ಯ ನೋಡಲು ಸಾಧ್ಯವಿಲ್ಲ.**

> ನಮ್ಮ ತಂಡ ಆಯ್ಕೆ ಆಗಿದ್ದಕ್ಕೆ ಇದು ಸಾಧ್ಯವಾಗಿದೆ. ಸಂತೋಷ್ ಮೆನನ್, ವಿನಯ್ ಮೃತ್ಯುಂಜಯ್, ಮಧುಕರ್, ಅವಿನಾಶ್ ವೈದ್ಯ, ಸುಜೀತ್ ಸೋಮಸುಂದರ್ ಹಾಗೂ ದಿಗ್ಗಜ ಆಟಗಾರರಾದ ರಾಹುಲ್ ದ್ರಾವಿಡ್, ಅನಿಲ್ ಕುಂಬ್ಳೆ ಅವರು ನಮ್ಮ ಜೊತೆಗಿದ್ದು, ಸಹಕಾರ ನೀಡಿದ್ದಕ್ಕೆ ಕರ್ನಾಟಕಕ್ಕೆ ಕ್ರಿಕೆಟ್ ಬಂದಿದೆ ಎಂದಿರುವ ಅವರು, ಅಕ್ಟೋಬರ್ ತಿಂಗಳಲ್ಲಿ ಏಕದಿನ, ಡಿಸೆಂಬರ್‌ನಲ್ಲಿ ಚಿನ್ನಸ್ವಾಮಿಯಲ್ಲಿ ಅಂತಾರಾಷ್ಟ್ರೀಯ ಟಿ20 ಪಂದ್ಯಗಳು ನಡೆಯಲಿವೆ ಎಂದು ಹೇಳಿದರು. –ಅಧ್ಯಕ್ಷ ವೆಂಕಟೇಶ್ ಪ್ರಸಾದ್

> ಬೆಳಗಾವಿ ಕ್ರಿಕೆಟ್ ಮೈದಾನದಲ್ಲಿ ಅಂತಾರಾಷ್ಟ್ರೀಯ ಪಂದ್ಯಗಳನ್ನು ಆಡಿಸಲು ಸಾಧ್ಯವಿಲ್ಲ. ಯಾಕೆಂದರೆ ಬೆಳಗಾವಿಯಿಂದ ಬೆಂಗಳೂರಿಗೆ ತಂಡ ಕರೆದೊಯ್ಯಲು ಸಮಸ್ಯೆ ಆಗುತ್ತದೆ. ಆದರೆ, ಅಭ್ಯಾಸ ಪಂದ್ಯ, ಬಿಸಿಸಿಐ ದೇಶೀಯ ಪಂದ್ಯಗಳನ್ನು ಆಡಿಸಬಹುದು. ಮಹಾರಾಜ ಟ್ರೋಫಿ ಪಂದ್ಯಗಳನ್ನು ಬೆಳಗಾವಿಯಲ್ಲಿ ಆಡಿಸಲು ಲಾಜಿಸ್ಟಿಕ್ ಸಮಸ್ಯೆ ಆಗುತ್ತದೆ ಎಂದು ಸ್ಪಷ್ಟಪಡಿಸಿದರು. –ಅಧ್ಯಕ್ಷ ವೆಂಕಟೇಶ್ ಪ್ರಸಾದ್

ಎಂದು ಇದೇ ವೇಳೆ ಪ್ರಶ್ನೆಯೊಂದಕ್ಕೆ ಉತ್ತರಿಸಿದರು. ಮಹಾರಾಜ ಟ್ರೋಫಿ ತಂಡಗಳನ್ನು ಹೆಚ್ಚಿಸುತ್ತೇವೆ

**ಐಪಿಎಲ್‌ನಲ್ಲಿ ಮೊದಲು 8 ತಂಡಗಳಿದ್ದವು:** ಆಮೇಲೆ 10 ತಂಡಗಳಾಗಿವೆ. ಅದೇ ರೀತಿ, ಮುಂದಿನ ದಿನಗಳಲ್ಲಿ ಮಹಾರಾಜ ಟ್ರೋಪಿಯಲ್ಲೂ ತಂಡಗಳನ್ನು ಹೆಚ್ಚಿಸಲಾಗುವುದು.ಅದರಲ್ಲಿ ಬೆಳಗಾವಿ ತಂಡವನ್ನು ನೋಡಬಹುದು ಎಂದರು.

ಇದಾದ ಬಳಿಕ ಬೆಳಗಾವಿ ಸತ್ಯಾತ್ಮತೀರ್ಥ ಶಿಕ್ಷಣ ಸಂಸ್ಥೆಯ ವತಿಯಿಂದ ಬಿ.ಕೆ. ಮಾಡೆಲ್ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ವೆಂಕಟೇಶ ಪ್ರಸಾದ್? ಪಾಲ್ಗೊಂಡು, ಸಸಿ ನೆಟ್ಟರು. ಸಂಸ್ಥೆಯ ಧರ್ಮದರ್ಶಿ ವಿ.ಎನ್.ಪಾಟೀಲ, ಬಿ.ಇ.ಸೊಸೈಟಿ ಅಧ್ಯಕ್ಷ ಅವಿನಾಶ್ ಪೋತದಾರ, ಎಸ್‌ಇಎಸ್ ಸೊಸೈಟಿಯ ಅಧ್ಯಕ್ಷ ವಿಲಾಸ ಜೋಶಿ ಸೇರಿ ಮತ್ತಿತರಿದ್ದರು.

## ಎಂ.ಪಿ.ಪ್ರಕಾಶ್ ನಗರದಲ್ಲಿ ನಡು ರಸ್ತೆಯಲ್ಲಿಯೇ ಚಾಕುವಿನಿಂದ ಚುಚ್ಚಿ ವ್ಯಕ್ತಿಯ ಭೀಕರ ಕೊಲೆ

• **ಉದಯವಾಹಿನಿ ಹೊಸಪೇಟೆ.**

1 : ರಸ್ತೆಯಲ್ಲಿ ಬಿದ್ದಿದ್ದ ದೇಹ
2 : ಪೊಲೀಸರಿಗೆ ಶರಣು
3 : ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ

ನಡು ರಸ್ತೆಯಲ್ಲಿಯೇ ವ್ಯಕ್ತಿಯೊರ್ವನನ್ನು ಚಾಕುವಿನಿಂದ ಚುಚ್ಚಿ ಭೀಕರವಾಗಿ ಕೊಲೆ ಮಾಡಿರುವ ಘಟನೆ ನಗರದಲ್ಲಿ ರಾತ್ರಿ ಜರುಗಿದೆ.

ನಗರದ ಎಂ.ಪಿ.ಪ್ರಕಾಶ್ ನಗರದಲ್ಲಿ ರಾತ್ರಿ 10 ಗಂಟೆ ಸುಮಾರಿಗೆ ಜರುಗಿದ ಘಟನೆಯಲ್ಲಿ ಸ್ಥಳೀಯ ನಿವಾಸಿ ಯೂನೂಸ್(28) ಎಂಬ ವ್ಯಕ್ತಿಯನ್ನು ಎಂ.ಪಿ.ಪ್ರಕಾಶ್ ನಗರದ ರಸ್ತೆಯಲ್ಲಿ ಅಟ್ಟಾಡಿಸಿಕೊಂಡು ಹೋಗಿ ಕಣ್ಣಿಗೆ ಕಾರದಪುಡಿ ಎರಚಿ, ಹೊಟ್ಟೆ, ಕತ್ತು ಭಾಗಕ್ಕೆ ಚಾಕುವಿನಿಂದ ಇರಿದು ನಡು ರಸ್ತೆಯಲ್ಲಿಯೇ ಭೀಕರವಾಗಿ ಕೊಲೆ ಮಾಡಲಾಗಿದೆ. ಎಂ.ಪಿ.ಪ್ರಕಾಶ್ ನಗರದ ನಿವಾಸಿ ಯೂನೂಸ್ ನನ್ನು ಕೊಲೆ ಮಾಡಿದ ನಂತರ ಕೊಲೆಗಾರರು ಅಲ್ಲಿಂದ ಪರಾರಿ ಆಗಿದ್ದರು. ಮೃತ ದೇಹ ಪೊಲೀಸರು ಬರುವವರೆಗೆ ರಸ್ತೆ

> ಕ್ಷುಲ್ಲಕ ಕಾರಣಕ್ಕೆ ಎಂ.ಪಿ.ಪ್ರಕಾಶ್ ನಗರದಲ್ಲಿ ಯೂನೂಸ್ ಎಂಬ ವ್ಯಕ್ತಿಯನ್ನು ಇಬ್ಬರು ಆರೋಪಿಗಳು ಚಾಕುವಿನಿಂದ ಚುಚ್ಚಿ ಕೊಲೆ ಮಾಡಿದ್ದಾರೆ. ಕೊಲೆ ಆರೋಪಿಗಳು ಪೊಲೀಸರಿಗೆ ಶರಣಾಗಿದ್ದಾರೆ. ಈ ಕುರಿತು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ತನಿಖೆ ಮುಂದುವರೆದಿದೆ.


ಉದಯವಾಹಿನಿ ಚಿತ್ರ

ಮಧ್ಯದಲ್ಲಿಯೇ ಬಿದ್ದಿತ್ತು. ಸುದ್ದಿ ತಿಳಿಯುತ್ತಲೇ ಸ್ಥಳಕ್ಕೆ ಆಗಮಿಸಿದ ಗ್ರಾಮೀಣ ಪೊಲೀಸರು ಮೃತ ದೇಹವನ್ನು ನಗರದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಿದರು. ವ್ಯಕ್ಯಿಯನ್ನು ಕೊಲೆ ಬರ್ಭರವಾಗಿ ಕೊಲೆ ಮಾಡಿದ ಇಬ್ಬರು ಆರೋಪಿಗಳಾದ ಖಾಜಾ ಹಾಗೂ ಇರ್ಫಾನ್ ಎಂಬುವವರು ತಾವೇ ಕೊಲೆ ಮಾಡಿದ್ದಾಗಿ ಒಪ್ಪಿಕೊಂಡು ಚಾಕು ಸಮೇತ ಪೊಲೀಸರಿಗೆ ಶರಣಾಗಿದ್ದಾರೆ.

**ಪ್ರೀತಿಗೆ ಅಡ್ಡಿ ಕೊಲೆಗೆ ಕಾರಣ:** ಪ್ರೀತಿ ವಿಷಯಕ್ಕೆ ಅಡ್ಡಿಪಡಿಸಿದ ಎಂಬ ಕಾರಣಕ್ಕೆ ವ್ಯಕ್ತಿಯ ಬರ್ಭರ ಕೊಲೆ ಜರುಗಿದೆ. ಚಿತ್ತವಾಡ್ಗಿಯ ನಿವಾಸಿ ಖಾಜಾ ಎಂಬುವಾತ ಯುವತಿಯೊಬ್ಬಳನ್ನು ಪ್ರೀತಿಸಿದ್ದು. ಅದಕ್ಕೆ ಯೂನೂಸ್ ಅಡ್ಡಿಪಡಿಸಿದ ಎಂಬ ಕಾರಣಕ್ಕೆ, ಆರೋಪಿಗಳಾದ ಖಾಜಾ ಹಾಗೂ ಇರ್ಫಾನ್ ಎಂಬಿಬ್ಬರು ಸೇರಿ ಬೀಕರವಾಗಿ ಕೊಲೆ ಮಾಡಿದ್ದಾರೆ ಎನ್ನಲಾಗಿದೆ.ಈ ಕುರಿತು ಹೊಸಪೇಟೆ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು. ಆರೋಪಿಗಳನ್ನು ವಶಕ್ಕೆ ಪಡೆದಿರುವ ಗ್ರಾಮೀಣ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.